ಸಂಪುಟ: 04 ಸಂಚಿಕೆ: 257 ಪುಟಗಳು: 08 ಶನಿವಾರ 30 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**

ಯಶಸ್ವಿ ಜೀವನಕ್ಕಿಂತ..,
ಸಂತೃಪ್ತ ಜೀವನವೇ ಮಿಗಿಲು..
ಏಕೆಂದರೆ ಜೀವನದ ಯಶಸ್ಸು
ಇತರರ ದೃಷ್ಟಿಯಲ್ಲಿರುತ್ತದೆ,
ಜೀವನದ ಸುಖ ನಮ್ಮ ಆತ್ಮ
ತೃಪ್ತಿಯಲ್ಲಿರುತ್ತದೆ...

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಒಕ್ಕಲಿಗರ ಸ್ವಾಮೀಜಿ ವಿಚಾರಣೆಗೆ ಹಾಜರಾಗುವಂತೆ ಪೊಲೀಸರಿಂದ ಜಾರಿ

• ಉದಯವಾಹಿನಿ, ಬೆಂಗಳೂರು

ಭಾರತದಲ್ಲಿ ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು ಎಂದು ವಿಶ್ವ ಒಕ್ಕಲಿಗರ ಮಠದ ಚಂದ್ರಶೇಖರನಾಥ ಸ್ವಾಮೀಜಿ ಅವರ ವಿರುದ್ಧ ಎಫ್‌ಐಆರ್ ದಾಖಲಾದ ಹಿನ್ನೆಲೆಯಲ್ಲಿ, ಇದೀಗ ಉಪ್ಪಾರಪೇಟೆ ಪೊಲೀಸರು ವಿಚಾರಣೆಗೆ ಹಾಜರಾಗಿ ಎಂದು ನೋಟಿಸ್ ನೀಡಿದ್ದಾರೆ. ಹೌದು ಬೆಂಗಳೂರಿನ ಉಪ್ಪಾರಪೇಟೆ ಠಾಣೆ ಪೊಲೀಸರು ಡಿಸೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ. ಶುಕ್ರವಾರ ಬೆಳಿಗ್ಗೆ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ ಸೆಕ್ಷನ್ 299 ರ ಅಡಿ ಸ್ವಾಮೀಜಿ ವಿರುದ್ಧ ಬೆಂಗಳೂರಿನ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಸ್ವಾಮೀಜಿ ಹೇಳಿದ್ದೇನು? ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಚಂದ್ರಶೇಖರ ಸ್ವಾಮೀಜಿ ಮುಸ್ಲಿಮರಿಗೆ ಮತದಾನದ ಹಕ್ಕು ನಿಷೇಧಿಸುವಂತೆ ಒತ್ತಾಯಿಸಿದ್ದರು. ಇದು ಭಾರೀ ವಿವಾದಕ್ಕೆ ಕಾರಣವಾಗಿತ್ತು. ಈ ಹೇಳಿಕೆ ಬಗ್ಗೆ ಸೈಯದ್ ಎಂಬುವವರು ದೂರು ನೀಡಿದ್ದು, ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

## ನಿಖಿಲ್ ಕೃತಜ್ಞತಾ ಸಭೆ ಇಂದು

• ಉದಯವಾಹಿನಿ, ರಾಮನಗರ

ಚನ್ನಪಟ್ಟಣ ಉಪಚುನಾವಣೆ ಬಳಿಕ ಮೈತ್ರಿ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಮತದಾರರಿಗೆ ಕೃತಜ್ಞತೆ ತಿಳಿಸಲು ಇಂದು ಕೃತಜ್ಞತಾ ಸಭೆ ಹಮ್ಮಿಕೊಂಡಿದ್ದಾರೆ. ಉಪಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿದ್ದ ನಿಖಿಲ್ ಕುಮಾರಸ್ವಾಮಿ ಪರಾಭವ ಗೊಂಡಿದ್ದರು. 87 ಸಾವಿರಕ್ಕೂ ಅಧಿಕ ಮತಗಳನ್ನ ಪಡೆದಿದ್ದ ನಿಖಿಲ್ ಕುಮಾರಸ್ವಾಮಿ ಮತದಾರರಿಗೆ ಧನ್ಯವಾದ ತಿಳಿಸಲು ಚನ್ನಪಟ್ಟಣದ ಖಾಸಗಿ ರೆಸಾರ್ಟ್‌ನಲ್ಲಿ ಕೃತಜ್ಞತಾ ಸಮಾರಂಭ ನಡೆಸಲಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ನಿಖಿಲ್ ನೇತೃತ್ವದಲ್ಲಿ ಕಾರ್ಯಕ್ರಮ ನಡೆಸಿ ಚುನಾವಣೆ ಸೋಲಿನ ಬಗ್ಗೆ ಪರಾಮರ್ಶೆ ಮಾಡಲಿದ್ದಾರೆ. ಜೊತೆಗೆ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಧೈರ್ಯ ತುಂಬಲು ದಳಪತಿಗಳು ಸಿದ್ಧತೆ ನಡೆಸಿದ್ದಾರೆ.

## ಒಕ್ಕಲಿಗ ಶ್ರೀಗಳಿಗೆ ಕಿರುಕುಳ ನೀಡಲು ಹೀಗೆ ಮಾಡಿದ್ದಾರೆ; ಅಶೋಕ್

• ಉದಯವಾಹಿನಿ, ಬೆಂಗಳೂರು

ವಿಶ್ವ ಒಕ್ಕಲಿಗ ಸಮುದಾಯದ ಚಂದ್ರಶೇಖರ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲು ವಿಚಾರವಾಗಿ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿರುವ ವಿಪಕ್ಷ ನಾಯಕ ಆರ್.ಅಶೋಕ್, ಇದು ಒಕ್ಕಲಿಗ ಸ್ವಾಮೀಜಿಗಳನ್ನು ಹೆದರಿಸುವ ಕೆಲಸ ಎಂದು ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ್, ಮುಸ್ಲಿಂ ವ್ಯಕ್ತಿಯೊಬ್ಬ ದೂರು ನೀಡಿದ ಕಾರಣಕ್ಕೆ ಚಂದ್ರಶೇಖರ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಒಕ್ಕಲಿಗ ಸ್ವಾಮೀಜಿಗಳನ್ನು ಹೆದರಿಸುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಶ್ರೀಗಳಿಗೆ ಕಿರುಕುಳ ನೀಡಬೇಕು ಎಂದು ಹೀಗೆ ಮಾಡಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ವಾಮೀಜಿಗಳಿಗೆ ತೊಂದರೆ ಕೊಡಬೇಕು ಎಂಬ ಉದ್ದೇಶದಿಂದ ಈ ರೀತಿ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯನವರಿಗೆ ಹಿಂದೂಗಳನ್ನು ಕಂಡರೆ ಅಲರ್ಜಿ. ಹಾಗಾಗಿ ಈರೀತಿ ಹೆದರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಮುಸ್ಲಿಮರಿಗೆ ಮತದಾನದ ಹಕ್ಕು ರದ್ದುಪಡಿಸಬೇಕು ಎಂದು ಚಂದ್ರಶೇಖರ ಸ್ವಾಮೀಜಿ ನೀಡಿದ್ದ ಹೇಳಿಕೆ ವಿವಾದಕ್ಕೆ ಕಾರಣವಾಗಿತ್ತು. ರಾಜ್ಯಾದ್ಯಂತ ಚರ್ಚೆ ತೀವ್ರಗೊಳ್ಳುತ್ತಿದ್ದಂತೆ ಸ್ವಾಮೀಜಿ ತಮ್ಮ ಹೇಳಿಕೆಗೆ ವಿಷಾದ ವ್ಯಕ್ತಪಡಿಸಿದ್ದರು. ಆದಾಗ್ಯೂ, ಸ್ವಾಮೀಜಿ ವಿರುದ್ಧ ಉಪ್ಪಾರಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಒಳ್ಳೆಯ ರಾಜಕಾರಣದ ಬಗ್ಗೆ ಮಾನ ಮರ್ಯಾದೆ ಇರುವವರ ಬಳಿ ಪ್ರಶ್ನೆ ಕೇಳಿ?


• ಉದಯವಾಹಿನಿ, ವಿಜಯಪುರ

ಒಳ್ಳೆಯ ರಾಜಕಾರಣದ ಬಗ್ಗೆ ಮಾನ ಮರ್ಯಾದೆ ಇರುವವರ ಬಳಿ ಪ್ರಶ್ನೆ ಕೇಳಿ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟಾಂಗ್ ನೀಡಿದರು. ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಶಾಸಕ ರೇಣುಕಾಚಾರ್ಯ ಹಿಗ್ಗಾಮುಗ್ಗಾ ವಾಗ್ದಾಳಿ ವಿಚಾರಕ್ಕೆ ಪ್ರತಿಕ್ರಿಯಿಸಿ, ಲಪುಟ್ ನನ್ ಮಕ್ಕಳ ಯಾವುದೇ ಪ್ರತಿಕ್ರಿಯೆ ಕೇಳಬೇಡಿ. ಒಳ್ಳೆಯ ರಾಜಕಾರಣದ ಬಗ್ಗೆ ಮಾನ ಮರ್ಯಾದೆ ಇರುವವರ ಬಳಿ ಪ್ರಶ್ನೆ ಕೇಳಿ ಎಂದು ಕಿಡಿಕಾರಿದ್ದಾರೆ. ಮಾಜಿ ಸಿಎಂ ಬಿಎಸ್‌ವೈ ಮೇಲೆ ಭ್ರಷ್ಟಾಚಾರ ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ಮಾಡಲು ಸಚಿವ ಸಂಪುಟದಲ್ಲಿ ಈಗ ಒಪ್ಪಿಗೆ ನೀಡಿದ್ದಾರೆ. ಕಳೆದ ಒಂದೂವರೆ ವರ್ಷದಿಂದ ಕಾಂಗ್ರೆಸ್ ಸರ್ಕಾರ ಮಾಡಿದ್ದು ಏನು? ಒಂದೂವರೆ ವರ್ಷದ ಆಡಳಿತದ ಬಳಿಕ ಸಿದ್ದರಾಮಯ್ಯ ಈಗ ಏಕೆ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು. ನಮ್ಮದನ್ನು ನೀವು ಮುಚ್ಚಿಡುವುದು, ನಿಮ್ಮದನ್ನು ನಾವು ಮುಚ್ಚಿಡುವುದು ಎಂಬ ಒಪ್ಪಂದವಿತ್ತು. ಆ ಒಪ್ಪಂದ ಈಗ ಮುರಿದುಹೋಗಿದೆ. ಹಾಗಾಗಿ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ರಾಜಕೀಯ ನಿವೃತ್ತಿಯಾಗಿರುವ ಯಡಿಯೂರಪ್ಪ ಅವರ ಮೇಲೆ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ ಎಂದರು.

# ಶೀಘ್ರ ಅನುಮೋದನೆ ಬೇಡ ಕಡೆಗಣನೆ

- ರಾಜ್ಯದ ರೈತಾಪಿ ವರ್ಗದ ಆರ್ಥಿಕ ವೆಚ್ಚದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ
- ನಬಾರ್ಡ್ ನೆರವು ಕಡಿತಗೊಳಿಸಿರುವುದರಿಂದ ರಾಜ್ಯದ ರೈತಾಪಿ ವರ್ಗ ಸಂಕಷ್ಟಕ್ಕೆ ಈಡಾಗಿದೆ
- ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ 2023-24 ರ ಕೇಂದ್ರ ಬಜೆಟ್ ನಲ್ಲಿ ಅನುಮೋದನೆ

- ದೆಹಲಿಯಲ್ಲಿ ಮೋದಿ ಭೇಟಿಯಾದ ಸಿಎಂ ?
- ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ಬಿಡುಗಡೆಗೆ ಮನವಿ
- 4 ತಿಂಗಳ ಅಂತರದಲ್ಲಿ 2ನೇ ಬಾರಿ ಪ್ರಧಾನಿ ಭೇಟಿ





• ಉದಯವಾಹಿನಿ, ನವದೆಹಲಿ

ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ರಾಜ್ಯದ ಕೆಲ ಬೇಡಿಕೆಗಳ ಬಗ್ಗೆ ಮನವಿ ಪತ್ರ ಸಲ್ಲಿಸಿದರು. ಅಲ್ಪಾವಧಿ ಬೆಳೆ ಸಾಲ ವಿತರಣೆಗೆ ಸಾಧ್ಯವಾಗುವಂತೆ ಪ್ರಸಕ್ತ ಸಾಲಿನಲ್ಲಿ ರಾಜ್ಯಕ್ಕೆ ಒದಗಿಸಿರುವ ನಬಾರ್ಡ್ ನೆರವು ಕಡಿತಗೊಳಿಸಿರುವುದರಿಂದ ರಾಜ್ಯದ ರೈತಾಪಿ ವರ್ಗ ಸಂಕಷ್ಟಕ್ಕೆ ಈಡಾಗಿದೆ. 2023-24ರ ಸಾಲಿನಲ್ಲಿ 5,600 ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿತ್ತು. 2024-25ರ ಸಾಲಿನಲ್ಲಿ 2,340 ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿದೆ. ಇದರಿಂದಾಗಿ ನಬಾರ್ಡ್ ನೆರವು ಪ್ರಸಕ್ತ ಸಾಲಿನಲ್ಲಿ ಶೇ.58 ರಷ್ಟು ಕಡಿತವಾಗಿದೆ ಎಂದು ತಿಳಿಸಿದರು.

ರಾಜ್ಯವು ಹೆಚ್ಚುವರಿ ಬಡ್ಡಿ ಸಹಾಯಧನವನ್ನು ನೀಡದ ಹೊರತು, ಇದು ರಾಜ್ಯದ ರೈತಾಪಿ ವರ್ಗದ ಆರ್ಥಿಕ ವೆಚ್ಚದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೇ, ರಾಜ್ಯದ ಆರ್ಥಿಕ ಸ್ಥಿತಿಯ ಮೇಲೂ ಪರಿಣಾಮ ಬೀರಲಿದೆ. ಆದ್ದರಿಂದ ಈ ಕೂಡಲೇ ಇದನ್ನು ಪರಾಮರ್ಶಿಸಿ ನಬಾರ್ಡ್ ನೆರವು ಹೆಚ್ಚಿಸಲು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ. ರಾಜ್ಯದ ರೈತರು ಅಲ್ಪಾವಧಿ ಬೆಳೆ ಸಾಲಗಳನ್ನು ಪಡೆಯಲು ಯಾವುದೇ ರೀತಿಯ ತೊಂದರೆಯಾಗದಂತೆ ತಾವು ಹಣಕಾಸು ಸಚಿವಾಲಯಕ್ಕೆ ಸೂಕ್ತ ನಿರ್ದೇಶನ ನೀಡುವಂತೆ ಸಿಎಂ ಮನವಿ ಮಾಡಿದರು.

**ಮಹತ್ವದ ವಿಚಾರಗಳ ಚರ್ಚೆ**

**ಭದ್ರಾ ಮೇಲ್ದಂಡೆ ಯೋಜನೆ:** ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ 2023-24ರ ಕೇಂದ್ರ ಬಜೆಟ್‌ನಲ್ಲಿ ಅನುಮೋದನೆಯಾಗಿರುವ 5,300 ಕೋಟಿ ರೂ. ಅನುದಾನ ಬಿಡುಗಡೆ ಮಾಡುವ ಕೇಂದ್ರ ಹಣಕಾಸು ಸಚಿವರ ಭರವಸೆ ಈವರೆಗೆ ಈಡೇರಿಲ್ಲ. ತ್ವರಿತ ನೀರಾವರಿ ಲಾಭ ಕಾರ್ಯಕ್ರಮದಡಿ ನೆರವು ಒದಗಿಸಲು ಸಚಿವ ಸಂಪುಟದ ಟಿಪ್ಪಣಿಯನ್ನು ಸಿದ್ದಮಾಡಿರುವ ಬಗ್ಗೆ ತಿಳಿದು ಬಂದಿದೆ. ಪ್ರಸಕ್ತ ಯೋಜನೆ ಶೀಘ್ರ ಅನುಮೋದನೆಗೊಂಡಲ್ಲಿ ಭದ್ರಾ ಮೇಲ್ದಂಡೆ ಯೋಜನೆ ವ್ಯಾಪ್ತಿಗೆ ಒಳಪಡುವ ಮಧ್ಯ ಕರ್ನಾಟಕದ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಅನುಕೂಲವಾಗುತ್ತದೆ. ಆದ್ದರಿಂದ ಈ ಪ್ರಸ್ತಾವನೆಗೆ ಶೀಘ್ರ ಅನುಮೋದನೆ ನೀಡುವಂತೆ ಕೋರಿದರು.

**ಕಳಸಾ ಬಂಡೂರಿ ಯೋಜನೆ:** ಶುಷ್ಕ ವಲಯಕ್ಕೆ ಸೇರಿದ ಕರ್ನಾಟಕದಂತಹ ರಾಜ್ಯದಲ್ಲಿ ನೀರಾವರಿ ಸೌಲಭ್ಯ ಸಾಮರ್ಥ್ಯಗಳನ್ನು ಸಬಲಗೊಳಿಸುವುದು ಅತ್ಯಗತ್ಯವಾಗಿದೆ. ಈ ಕಾರ್ಯವನ್ನು ಬಹುತೇಕ ರಾಜ್ಯವು ತನ್ನ ಸಂಪನ್ಮೂಲಗಳಿಂದಲೇ ಭರಿಸುತ್ತಿದೆ. ಆದರೆ, ಜಲ ಶಕ್ತಿ ಸಚಿವಾಲಯ ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಗಳಲ್ಲಿ ಯೋಜನೆಗಳ ತೀರುವಳಿ ಬಾಕಿ ಇರುವುದು ನಮ್ಮ ಯೋಜನೆಗಳನ್ನು ವಿಳಂಬ ಮಾಡಿದೆ. ಕಾವೇರಿ ನದಿ ಪಾತ್ರದ ಮೇಕೇದಾಟು ಯೋಜನೆ ಹಾಗೂ ಮಹದಾಯಿ ನದಿಯ ಕಳಸಾ ಬಂಡೂರಿ ಯೋಜನೆಗಳಗತ್ತ ತಾವು ತುರ್ತು ಗಮನ ಹರಿಸಬೇಕಿದೆ ಜಲಶಕ್ತಿ ಹಾಗೂ ಅರಣ್ಯ, ಪರಿಸರ ಸಚಿವಾಲಯಗಳಿಂದ ಶೀಘ್ರ ತೀರುವಳಿ ದೊರಕಿಸಿಕೊಡಲು ಸಿಎಂ ಕೋರಿದರು. ಕರ್ನಾಟಕ ಅತ್ಯಂತ ವೇಗವಾಗಿ ನಗರೀಕರಣಗೊಳ್ಳುತ್ತಿರುವ ರಾಜ್ಯವಾಗಿದ್ದು, 13 ಮಹಾನಗರ ಪಾಲಿಕೆಗಳಿದ್ದು, ಈ ಎರಡನೇ ನಗರಗಳ ಅಭಿವೃದ್ಧಿಗೆ ಹೆಚ್ಚಿನ ಬಂಡವಾಳ ಅಗತ್ಯವಿದೆ. ಕರ್ನಾಟಕ ರಾಜ್ಯ ಸರ್ಕಾರ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆಯಡಿ ಮುಂದಿನ ಮೂರು ವರ್ಷಗಳ ಅವಧಿಗೆ 2ಸಾವಿರ ಕೋಟಿ ರೂ. ಈ ಉದ್ದೇಶಕ್ಕಾಗಿ ತೆಗೆದಿರಿಸಿದೆ.

### ಸಿಎಂ ಮನವಿ ಪತ್ರದಲ್ಲಿ ಏನಿದೆ..?

**ಆತ್ಮೀಯ ಪ್ರಧಾನಮಂತ್ರಿಗಳೇ ನಿಮ್ಮನ್ನು ಭೇಟಿಯಾಗಲು ಸಮಯ ನೀಡಿದ್ದಕ್ಕಾಗಿ ಧನ್ಯವಾದ ತಿಳಿಸುತ್ತೇನೆ. ನಮ್ಮ ರಾಜ್ಯದ ನಿರ್ಣಾಯಕ ಸಮಸ್ಯೆಗಳನ್ನು ನಿಮ್ಮ ಮುಂದಿಡಲು ಬಯಸುತ್ತೇನೆ. ಬಾರ್ಡ್‌ನಿಂದ ಕರ್ನಾಟಕಕ್ಕೆ ಅಲ್ಪಾವಧಿಯ ಕೃಷಿ ಸಾಲ ಮಿತಿಯನ್ನು ತೀವ್ರವಾಗಿ ಕಡಿತಗೊಳಿಸಿರುವುದು ರಾಜ್ಯದ ರೈತರಲ್ಲಿ ಆತಂಕ ಸೃಷ್ಟಿಸಿದೆ. 2023-24ರಲ್ಲಿ ಮಂಜೂರಾದ 5,600 ಕೋಟಿ ರೂ. ಮಿತಿಯಂತೆ, ನಬಾರ್ಡ್ ಪ್ರಸಕ್ತ ವರ್ಷಕ್ಕೆ (2024-25) 2,340 ಕೋಟಿ ರೂ.ಗಳನ್ನು ಮಾತ್ರ ಮಂಜೂರು ಮಾಡಿದೆ. ಇದರಿಂದ 58% ಅನುದಾನ ಕಡಿತವಾಗಿದ್ದು, ರೈತರ ಹಣಕಾಸು ವೆಚ್ಚದ ಮೇಲೆ ಪರಿಣಾಮ ಬೀರುತ್ತದೆ. ಹೆಚ್ಚುವರಿ ಬಡ್ಡಿ ರಿಯಾಯಿತಿ ಒದಗಿಸಲು ಮುಂದಾಗದಿದ್ದರೆ ನಮ್ಮ ಹಣಕಾಸಿನ ಮೇಲೆ ತೀವ್ರ ಪರಿಣಾಮ ಬೀರುತ್ತದೆ. ಈ ನಿಟ್ಟಿನಲ್ಲಿ ನಾನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ನಮ್ಮ ಸಮಸ್ಯೆಗಳ ಬಗ್ಗೆ ತಿಳಿಸಿದ್ದೇನೆ. ಕರ್ನಾಟಕದ ರೈತರು ಕೃಷಿ ಸಾಲ ಪಡೆಯುವುದಕ್ಕಾಗಿ ಈ ಸಮಸ್ಯೆ ಸರಿಪಡಿಸಲು ಹಣಕಾಸು ಸಚಿವಾಲಯಕ್ಕೆ ನಿರ್ದೇಶಿಸಬೇಕೆಂದು ವಿನಂತಿಸುತ್ತೇನೆ.**

### ಹದಿಮೂರು ಮಹಾನಗರ ಪಾಲಿಕೆಗಳ ಅಭಿವೃದ್ಧಿ

**ನಾಲ್ಕನೇಯದ್ದಾಗಿ, ಕರ್ನಾಟಕ ಅತ್ಯಂತ ವೇಗವಾಗಿ ನಗರೀಕರಣಗೊಳ್ಳುತ್ತಿರುವ ರಾಜ್ಯವಾಗಿದ್ದು, 13 ಮಹಾನಗರ ಪಾಲಿಕೆಗಳಿದ್ದು, ಈ ಎರಡನೇ ಸ್ತರದ ನಗರಗಳ ಅಭಿ ವೃದ್ಧಿಗೆ ಹೆಚ್ಚಿನ ಬಂಡವಾಳ ಅಗತ್ಯವಿದೆ. ಕರ್ನಾಟಕ ರಾಜ್ಯ ಸರ್ಕಾರ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆಯಡಿ ಮುಂದಿನ ಮೂರು ವರ್ಷಗಳ ಅವಧಿಗೆ 2ಸಾವಿರ ಕೋಟಿ ರೂ. ಈ ಉದ್ದೇಶಕ್ಕಾಗಿ ತೆಗೆದಿ ರಿಸಿದೆ. ಆದರೆ ಈ ನಗರಗಳಿಗೆ ಸಮಗ್ರ ಮೂಲಸೌಕರ್ಯಗಳನ್ನು ಕಲ್ಪಿಸಲು ಈ ಅನುದಾನ ಸಾಕಾಗುವುದಿಲ್ಲ.**

ಆದರೆ ಈ ನಗರಗಳಿಗೆ ಸಮಗ್ರ ಮೂಲಸೌಕರ್ಯಗಳನ್ನು ಕಲ್ಪಿಸಲು ಈ ಅನುದಾನ ಸಾಕಾಗುವುದಿಲ್ಲ. ಆದ್ದರಿಂದ ಅಮೃತ್ ಅಥವಾ ಇನ್ನಾವುದೇ ಯೋಜನೆಯಡಿ ಕರ್ನಾಟಕ ರಾಜ್ಯಕ್ಕೆ 10 ಸಾವಿರ ಕೋಟಿ ರೂ. ಬಿಡುಗಡೆ ಮಾಡುವಂತೆ ಕೇಂದ್ರ ನಗರಾಭಿವೃದ್ಧಿ ಇಲಾಖೆಗೆ ನಿರ್ದೇಶನ ನೀಡಲು ಮನವಿ ಮಾಡಿದರು.

### ಪೆರಿಫೆರಲ್ ರಿಂಗ್ ರಸ್ತೆಗೆ ಅನುದಾನಕ್ಕೆ ಮನವಿ

**15ನೇ ಹಣಕಾಸು ಆಯೋಗ ಕರ್ನಾಟಕ ರಾಜ್ಯಕ್ಕೆ ಸರಿಯಾದ ನ್ಯಾಯ ಒದಗಿಸುತ್ತಿಲ್ಲ ಎಂದು ನಾವು ನಿರಂತರವಾಗಿ ಪ್ರಸ್ತಾಪಿಸುತ್ತಾ ಬಂದಿದ್ದೇವೆ. ತೆರಿಗೆ ಹಂಚಿಕೆಯಲ್ಲಿ ರಾಜ್ಯದ ಪಾಲನ್ನು ಶೇ.1ರಷ್ಟು ಕಡಿಮೆ ಮಾಡಿರುವ ಶಿಫಾರಸ್ಸನು ಹಣಕಾಸು ಇಲಾಖೆ ಸರಿಪಡಿಸಬೇಕಾಗಿದೆ. ಹಣಕಾಸು ಆಯೋಗವು ರಾಜ್ಯಕ್ಕೆ ಹಂಚಿಕೆ ಕಡಿಮೆಯಾಗಿರುವುದಕ್ಕೆ ಪರಿಹಾರವಾಗಿ 5495 ಕೋಟಿ ರೂ. ಅನುದಾನ ಬಿಡುಗಡೆಗೆ ಮತ್ತು ಪೆರಿಫೆರಲ್ ರಿಂಗ್ ರಸ್ತೆ ಮತ್ತು ನೀರಿನ ಮೂಲಗಳ ಪುನರುಜ್ಜೀವನಕ್ಕೆ 6ಸಾವಿರ ಕೋಟಿ ರೂ. ವಿಶೇಷ ಅನುದಾನ ನೀಡುವ ಬಗ್ಗೆ ಶಿಫಾರಸು ಮಾಡಿದೆ. ಕನಿಷ್ಠಪಕ್ಷ ಹಣಕಾಸು ಆಯೋಗ ಈ ಎರಡು ಶಿಫಾರಸುಗಳನ್ನು ಒಪ್ಪಿಕೊಳ್ಳಬೇಕಾಗಿದೆ. ನಾವು ಇನ್ನೂ 15ನೇ ಹಣಕಾಸು ಆಯೋಗದ ಅವಧಿಯಲ್ಲಿರುವುದರಿಂದ ರಾಜ್ಯಕ್ಕೆ ಹೆಚ್ಚುವರಿ ಅನುದಾನ ಒದಗಿಸಲು ಹಣಕಾಸು ಇಲಾಖೆಗೆ ನಿರ್ದೇಶನ ನೀಡುವಂತೆ ಸಿದ್ದರಾಮಯ್ಯ ಮನವಿ ಮಾಡಿದರು.**



## ಸಿದ್ದು 5 ವರ್ಷ ಅಧಿಕಾರದಲ್ಲಿ ಇರ್ತಾರೋ ಇರಲ್ವೋ ಗೊತ್ತಿಲ್ಲ: ಬಿಆರ್ ಪಾಟೀಲ್

• ಉದಯವಾಹಿನಿ, ಹುಬ್ಬಳ್ಳಿ

ಸಿದ್ದರಾಮಯ್ಯ ಅವರು 5 ವರ್ಷ ಅಧಿಕಾರದಲ್ಲಿ ಇರುತ್ತಾರೋ ಇಲ್ಲವೋ ಗೊತ್ತಿಲ್ಲ ಎಂದು ಸಿಎಂ ಆಪ್ತ ಸಲಹೆಗಾರ ಬಿ.ಆರ್.ಪಾಟೀಲ್ ಹೊಸ ಬಾಂಬ್ ಸಿಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಐದು ವರ್ಷ ಇರ್ತಾರೋ ಇರಲ್ವೋ ಗೊತ್ತಿಲ್ಲ. ಆದರೆ, ಅವರು ಐದು ವರ್ಷ ಇರಬೇಕು ಅಂತಾ ಬಯಸುತ್ತೇವೆ. ಆದರೆ ಹೈಕಮಾಂಡ್ ಏನು ನಿರ್ಧಾರ ಮಾಡುತ್ತೆ ಗೊತ್ತಿಲ್ಲ. ಹೈಕಮಾಂಡ್ ಬೇರೆ ನಿರ್ಧಾರ ತೆಗೆದುಕೊಂಡರೆ ನಾವೇನು ಮಾಡುವುದಕ್ಕೆ ಆಗುತ್ತೆ? ಹೈಕಮಾಂಡ್ ಸಿದ್ದರಾಮಯ್ಯ ಅವರಿಗೆ ಇನ್ನೂ ದೊಡ್ಡ ಜವಾಬ್ದಾರಿ ನೀಡಬಹುದು. ಆದರೆ, ಸಿದ್ದರಾಮಯ್ಯ ಅವರನ್ನು ಬದಲಾವಣೆ ಮಾಡಬೇಕು ಅಂತಾ ಯಾವ ಶಾಸಕರ ಮನಸ್ಸಿನಲ್ಲಿ ಇಲ್ಲ ಎಂದು ತಿಳಿಸಿದರು. ದೊಡ್ಡ



ಕನಸನ್ನು ಕಂಡು ಬಡವರ ಪರವಾಗಿ ಕಾರ್ಯಕ್ರಮ ಹಮ್ಮಿಕೊಂಡಾಗ ಭೌತಿಕ ಅಭಿವೃದ್ಧಿಗೆ ಹೊಡೆತ ಬೀಳುತ್ತೆ. ಈ ಬಾರಿಯ ಬಜೆಟ್‌ನಲ್ಲಿ ಗ್ಯಾರಂಟಿಯಿಂದ ಆರ್ಥಿಕ ಹೊರೆ ಆ ಗದಂತೆ ಹೊಸ ಆರ್ಥಿಕ ನೀತಿ ಸಿಎಂ ನೀಡ್ತಾರೆ. ನಮಗೆ ಮೊದಲೇ ಗೊತ್ತಿತ್ತು. ಇಷ್ಟು ಖರ್ಚು ಆಗುತ್ತೆ ಅಂತಾ. ಆರ್ಥಿಕ ಸಮಸ್ಯೆ ನಮಗೆ ಮಾತ್ರವಲ್ಲಾ ಎಲ್ಲಾ ರಾಜ್ಯಗಳಿಗಿದೆ. ಸಮಸ್ಯೆ ಆಗುತ್ತಿದೆ ಸ್ವಲ್ಪ ಹೊರೆ ಆಗುತ್ತೆ. ದೊಡ್ಡ ಸಮಸ್ಯೆಗೆ ಕೈ ಹಾಕಿದಾಗ ಸ್ವಲ್ಪ ಸಮಸ್ಯೆ ಉದ್ಭವ ಆಗುತ್ತೆ. ಕಲ್ಯಾಣ ರಾಜ್ಯದ ಪರಿಕಲ್ಪನೆ ಕಾಣುತ್ತಿದ್ದೇವೆ. ಎಲ್ಲರಿಗೂ ಸಮಪಾಲು ಸಮಬಾಳು.

**ಯಾವುದೇ ಕಾರಣಕ್ಕೂ ಗ್ಯಾರಂಟಿ ನಿಲ್ಲುವುದಿಲ್ಲ**

> **ಮೂರು ಚುನಾವಣೆಯಲ್ಲಿ ಜನ ಉತ್ತರ ನೀಡಿದ್ದಾರೆ. ಎಲ್ಲಾ ಹಗರಣಗಳು ಕಲ್ಪನೆ. ಮುಡಾ ಹಗರಣ ನೂರಕ್ಕೆ ನೂರರಷ್ಟು ಮುಕ್ತರಾಗಿ ಸಿಎಂ ಹೊರ ಬರ್ತಾರೆ. ಹಗರಣಗಳು ಬರೀ ನಮ್ಮ ಕಾಲದಲ್ಲಿ ಮಾತ್ರವಲ್ಲ ಎಲ್ಲಾ ಸರ್ಕಾರದಲ್ಲಿ ಆಗಿವೆ. ವಕ್ಫ್ ಬೋರ್ಡ್ ವಿಚಾರವಾಗಿ ಬಿಜೆಪಿ ಸಹ ನೋಟಿಸ್ ನೀಡಿತ್ತು. ಇದು ದುರುದ್ದೇಶದಿಂದ ನಮ್ಮ ಸರ್ಕಾರಕ್ಕೆ ಗೂಬೆ ಕೂರಿಸಬೇಕು, ಕೆಟ್ಟ ಹೆಸರು ತರಬೇಕು ಅಂತಾ ಮಾಡುತ್ತಿದ್ದಾರೆ**
>
> **-ಬಿ.ಆರ್.ಪಾಟೀಲ್, ಸಿಎಂ ಆಪ್ತ ಸಲಹೆಗಾರ**

ಐದು ಗ್ಯಾರಂಟಿಗಳು ಬಹಳಷ್ಟು ಯಶಸ್ವಿಯಾಗಿ ಅನುಷ್ಠಾನ ಆಗುತ್ತಿವೆ. ಇದರಿಂದ ಬಹಳಷ್ಟು ರಾಜಕೀಯ ಲಾಭ ಆಗುತ್ತಿದೆ. ನಮ್ಮ ಕಾಪಿಯನ್ನೇ ಮೋದಿ ಮಾಡಿದ್ದಾರೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ನಿಲ್ಲುವುದಿಲ್ಲ. ಇದರಲ್ಲಿ ಯಾವುದೇ ಅನುಮಾನ ಬೇಡ. ಬಿಪಿಎಲ್ ಕಾರ್ಡ್ ವಿವಾದ ಬಿಜೆಪಿ ಹುಟ್ಟಿಸಿದ ಭಯ. ಆದರೆ ಯಾವುದೇ ಗ್ಯಾರಂಟಿ ನಿಲ್ಲೋದಿಲ್ಲಾ. ಇದನ್ನು ಪರಿಹಾರ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು.

ಬಿಜೆಪಿಯವರು ಒಂದಾಗಿ ವಕ್ಫ್ ಬೋರ್ಡ್ ಜನಜಾಗೃತಿ ಮಾ ಡಲಿ, ಅವರಲ್ಲಿಯೇ ಒಡಕಿದೆ. ನಮ್ಮನ್ನೇನು ನೋಡ್ತಾರೆ. ಇನ್ನೂ ಎಷ್ಟು ಬಣ ಇರುತ್ತೆ ಗೊತ್ತಿಲ್ಲ. ಯಾರು ದೆಹಲಿಯಲ್ಲಿ ಕುಳಿತು ಯಾರಿಗೆ ಆಪರೇಟಿಂಗ್ ಮಾಡತ್ತಿದ್ದಾರೋ. ಯಾರದು ಕೈಚಳಕ ಎಲ್ಲೆಲ್ಲಿದೆಯೋ ಗೊತ್ತಿಲ್ಲ. ಮುರಳಿ ಮನೋಹರ ಜೋಶಿ ಅಂತಹವರನ್ನೇ ಮೂಲೆಗುಂಪು ಮಾಡಿದರು. ಇವರೆಲ್ಲಾ ಯಾವ ಲೆಕ್ಕ ಎಂದು ಟಾಂಗ್ ಕೊಟ್ಟರು.

# ಅಬಕಾರಿ ಸಚಿವರನ್ನು ರಾಜ್ಯ ಸರಕಾರ ರಕ್ಷಿಸುತ್ತಿರುವುದೇಕೆ?: ನಾರಾಯಣಸ್ವಾಮಿ

▶▶ ಈ ಕೇಸು ಖುಲಾಸೆ ಆಗಿದೆ. ಆದರೂ ನೀವೇನು ಮಾಡಲು ಹೊರಟಿದ್ದೀರಿ? ಇದು ಬಿಜೆಪಿ ನಾಯಕರ ವಿರುದ್ಧದ ಷಡ್ಯಂತ್ರ, ಹಗೆತನದ ರಾಜಕೀಯ

• ಉದಯವಾಹಿನಿ, ಬೆಂಗಳೂರು


**ಕೂಡಲೇ ರಾಜೀನಾಮೆ ಕೊಡಿ**

ಬಿಡಿಎ ವಿಷಯದಲ್ಲಿ ಬಿ.ಎಸ್.ವೈ ಪ್ರಾಸಿಕ್ಯೂಶನ್‌ಗೆ ಕೇಳಿದ್ದೀರಿ. ನಿನ್ನೆ ಸಂಪುಟದಲ್ಲಿ ತೀರ್ಮಾನ ಮಾಡಿದ್ದೀರಿ. ಈ ಕೇಸು ಖುಲಾಸೆ ಆಗಿದೆ. ಆದರೂ ನೀವೇನು ಮಾಡಲು ಹೊರಟಿದ್ದೀರಿ? ಇದು ಬಿಜೆಪಿ ನಾಯಕರ ವಿರುದ್ಧದ ಷಡ್ಯಂತ್ರ ಮತ್ತು ಹಗೆತನದ ರಾಜಕೀಯ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದರು.

ವಿಧಾನಸೌಧದ ಕೊಠಡಿ ಸಂಖ್ಯೆ 155ರಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಮ್ಮ ಸರಕಾರದ ಅಬಕಾರಿ ಸಚಿವರ ವಿರುದ್ಧ ಆರೋಪಗಳಿವೆ. ವಿಡಿಯೋಗಳು, ಆಡಿಯೋಗಳೂ ಬಂದಿವೆ. ನೀವೇನು ಮಾಡಿದ್ದೀರಿ? ಇಬ್ಬರು ಅಧಿಕಾರಿಗಳನ್ನು ಅಮಾನತು ಮಾಡಿದ್ದೀರಿ. ಸಂಘಟನೆಗಳು 700 ಕೋಟಿ ಲಂಚ ಸಂಗ್ರಹ ಸಂಬಂಧ ಸಚಿವ ತಿಮ್ಮಾಪುರ ಅವರ ವಿರುದ್ಧ ಆಪಾದನೆ ಮಾಡಿವೆ. 700 ಕೋಟಿ ಲಂಚದ ಹಗರಣ ಇದ್ದರೂ ಕೂಡ ನೀವು ಅವರನ್ನು ರಕ್ಷಿಸುತ್ತೀರಿ. ಅಮಾನತಾದ ಅಧಿಕಾರಿಗಳು ಯಾರ ಏಜೆಂಟರು ಎಂದು ತಿಳಿಸಲು ಆಗ್ರಹಿಸಿದರು. ಅವರು ಸಚಿವರ ಏಜೆಂಟರೇ? ಅಥವಾ ಮುಖ್ಯಮಂತ್ರಿಗಳ ಏಜೆಂಟರಾಗಿದ್ದರೇ? ಅವರ ತಲೆದಂಡ ಮಾತ್ರ ಯಾಕೆ? ಸಚಿವರ ತಲೆದಂಡ ಯಾಕಾಗಬಾರದು ಎಂದು ಪ್ರಶ್ನೆಗಳನ್ನು ಮುಂದಿಟ್ಟರು. ಅವರನ್ನು ಸರಕಾರ ಯಾಕೆ ರಕ್ಷಣೆ ಮಾಡುತ್ತಿದೆ ಎಂದು ಕೇಳಿದರು. ಮುಡಾ ಹಗರಣ ನಡೆದಿದೆ. ನಿಮ್ಮ ಮೇಲೆ ಎಫ್‌ಐಆರ್ ಆಗಿದೆ, ತನಿಖೆ ನಡೆಯುತ್ತಿದೆ. ಆದರೂ ಏನೂ ನಡೆದಿಲ್ಲ ಎಂಬಂತೆ ನೀವಿದ್ದೀರಿ.

**ನೀವು ರಾಜೀನಾಮೆ ಕೊಟ್ಟಿಲ್ಲ;** ಬೇರೆಯವರನ್ನು ಹೇಗೆ ಬಂಧಿಸಲು ನೋಡುತ್ತೀರಿ? ಎಫ್‌ಐಆರ್ ಆದೊಡನೆ ಬಂಧಿಸುತ್ತೀರಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿ ಜೈಲಿಗೆ ಹಾಕುತ್ತೀರಲ್ಲವೇ? ನಿಮಗೊಂದು ನ್ಯಾಯ, ಇತರರಿಗೆ ಬೇರೆ ನ್ಯಾಯ ಇದೆಯೇ? ನೀವ್ಯಾಕೆ ರಾಜೀನಾಮೆ ಕೊಟ್ಟಿಲ್ಲ? ಕೂಡಲೇ ರಾಜೀನಾಮೆ ಕೊಡಿ. ಯಾಕೆ ಸುಮ್ಮನಿದ್ದೀರಿ ಎಂದು ಮುಖ್ಯ ಮಂತ್ರಿಗಳನ್ನು ಪ್ರಶ್ನಿಸಿದರು.

ಒಂದು ವಿಶ್ವವಿದ್ಯಾಲಯದ ಕುಲಪತಿ ಸ್ಥಾನಕ್ಕೆ ಮುಖ್ಯಮಂತ್ರಿಗಳು ಗೌರವಾನ್ವಿತ



> **ಸಂವಿಧಾನವನ್ನೇ ಸರ್ವನಾಶ ಮಾಡಿದರು.. ಸಂವಿಧಾನ ತೆಗೆಯುತ್ತಾರೆಂದು ಮುಖ್ಯಮಂತ್ರಿ, ಪಡ್ಡೆ ಹುಡುಗ ಪ್ರಿಯಾಂಕ್ ಖರ್ಗೆ ಸೇರಿ ಕಾಂಗ್ರೆಸ್ಸಿಗರು ಹೇಳುತ್ತಾರೆ. ನಮ್ಮಿಂದ ಸಂವಿಧಾನದ ವಿರುದ್ಧ ಪ್ರಯತ್ನ ಆಗಿತ್ತೇ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಕೇಳಿದರು.ನಿಮ್ಮ ಕಾಲದಲ್ಲಿ ಆಗಿದೆ. 1975-76ರಲ್ಲಿ 2 ವರ್ಷ ಸಂವಿಧಾನವನ್ನು ಅಮಾನತಿನಲ್ಲಿ ಇಡಲಾಗಿತ್ತು. ಕುರ್ಚಿ ಉಳಿಸಿಕೊಳ್ಳಲು ಇಂದಿರಾ ಗಾಂಧಿಯವರು ಕಾಂಗ್ರೆಸ್ಸೇ ದೇಶವೆಂದು ತಿಳಿದುಕೊಂಡು ಸಂವಿಧಾನವನ್ನೇ ಸರ್ವನಾಶ ಮಾಡಿದ್ದರು ಎಂದು ಟೀಕಿಸಿದರು. ಜಮೀರ್ ಅಹ್ಮದ್ ಆಡಿದ್ರೆ ಮಾತು; ಅವರ ಮೇಲೆ ಯಾಕೆ ಕೇಸು ಹಾಕಿಲ್ಲ**
>
> **- ಛಲವಾದಿ ನಾರಾಯಣಸ್ವಾಮಿ ವಿಧಾನಪರಿಷತ್ ವಿಪಕ್ಷ ನಾಯಕ**

### ಕಾಂಗ್ರೆಸ್ ಪಕ್ಷಕ್ಕೆ ಏನಾಗಿದೆ?

**ಯಾಕೆ ತಟಸ್ಥವಾಗಿದ್ದೀರಿ ಎಂದ ಅವರು, ಕಾಂಗ್ರೆಸ್ಸಿಗರ ತುಷ್ಟೀಕರಣದ ನಡೆಯಿಂದ ರಾಜ್ಯದಲ್ಲಿ ಬಾಂಗ್ಲಾ ಮತ್ತು ಪಾಕಿಸ್ತಾನದ ಕವಲುಗಳು ಒಡೆಯುತ್ತಿರುವುದನ್ನು ಗಮನಿಸಿದ್ದೇವೆ ಎಂದು ಟೀಕಿಸಿದರು. ಇಂಥ ಘಟನೆಯ ಪ್ರಚೋದನೆ ಉಂಟಾಗದಂತೆ ಕೇಂದ್ರ ಸರಕಾರ ಕಾರ್ಯೋನ್ಮುಖವಾಗಬೇಕು ಮತ್ತು ರಾಜ್ಯಗಳು ಇದಕ್ಕೆ ಮಮತಾ ಬ್ಯಾನರ್ಜಿಯವರ ಮಾದರಿಯಲ್ಲಿ ಬೆಂಬಲ ಕೊಡಬೇಕೆಂದು ಮನವಿ ಮಾಡಿದರು.**

ರಾಜ್ಯ ಪಾಲರಿಗೆ ಕೊಕ್ ಕೊಟ್ಟಿದ್ದಾರೆ.

ಮುಖ್ಯ ಮಂತ್ರಿಗಳೇ, ನೀವು ಸರ್ವಾಧಿಕಾರಿ ಧೋರಣೆ ಮಾಡಲು ಹೊರಟಿದ್ದೀರಾ ಎಂದು ಪ್ರಶ್ನಿಸಿದರು.

ನಿಮ್ಮ ಮೇಲೆ ಭ್ರಷ್ಟಾಚಾರದ ಹಲವಾರು ಆರೋಪಗಳಿವೆ. ಕುಲಾಧಿಪತಿ ಸ್ಥಾನಕ್ಕೆ ಗವರ್ನರ್ ಯೋಗ್ಯರೆಂದು ಸಾಂವಿಧಾನಿಕ ಹುದ್ದೆಯಾಗಿ ಕೊಡಲಾಗಿತ್ತು. ಈಗ ಅದನ್ನು ವಾಪಸ್ ಪಡೆಯುವ ಮೂಲಕ ಕುಲಾಧಿಪತಿ ಆಗಲು ಹೊರಟಿದ್ದೀರಿ, ಭ್ರಷ್ಟಾಚಾರದಿಂದ ನಿಮ್ಮ ಸರಕಾರ ಕುಲಗೆಟ್ಟಿದ್ದು, ಕುಲಾಧಿಪತಿ ಸ್ಥಾನಕ್ಕೆ ಮುಖ್ಯಮಂತ್ರಿ ಯೋಗ್ಯರೇ ಎಂದು ಕೇಳಿದರು.

ತುಮಕೂರಿನ ಶಕುಂತಲಾ ನಟರಾಜ್ ಅವರು ಸಾಮಾಜಿಕ ಜಾಲ ತಾಣದಲ್ಲಿ ಬರೆದುದಕ್ಕೆ 7 ದಿನಗಳ ನೋಟಿಸ್ ಕೊಟ್ಟು ರಾತ್ರೋ ರಾತ್ರಿ ಬಂಧಿಸಿ ಕರೆತಂದಿದ್ದರು. ಹಾಗಿದ್ದರೆ 7 ದಿನ ಅವಕಾಶ ಕೊಟ್ಟಿದ್ದೇಕೆ? ಅವರನ್ನು ರೌಡಿಶೀಟರ್ ಮಾಡಬಾರದೇಕೆ ಎಂದು ಕೇಳಿದ್ದಾಗಿ ವಿವರಿಸಿದರು. ನಿಮ್ಮ ಸುತ್ತಲಿರುವ ಸಚಿವರು ರೌಡಿಗಳಿಗಿಂತ ಹೆಚ್ಚಾಗಿ ಮಾತನಾಡುತ್ತಾರೆ. ಅವರ ಮೇಲೂ ರೌಡಿಶೀಟರ್ ಹಾಕಿ ಎಂದು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು. ಆ ಹೆಣ್ಮಗಳ ಮೇಲಿನ ಕೇಸು ವಾಪಸ್ ಪಡೆಯಲು ಆಗ್ರಹಿಸಿದರು.

ಬಾಂಗ್ಲಾದೇಶದಲ್ಲಿ ಹಿಂದುಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಮತ್ತು ಹಿಂಸಾಚಾರ ಮಿತಿ ಮೀರಿದ್ದನ್ನು ತಾವೆಲ್ಲರೂ ಗಮನಿಸಿದ್ದೀರಿ. ಕೇಂದ್ರದಲ್ಲಿರುವ ಮೋದಿಜೀ ಅವರ ಸರಕಾರವು ಈಗಾಗಲೇ ಆ ರೀತಿ ಹಿಂದುಗಳಿಗೆ ಹಿಂಸೆ ಮಾಡಬಾರದು ಮತ್ತು ಬಂಧಿತ ಸನ್ಯಾಸಿ ಚಿನ್ಮಯಿ ಕೃಷ್ಣದಾಸ್ ಅವರನ್ನು ತಕ್ಷಣ ಬಿಡುಗಡೆ ಮಾಡಬೇಕೆಂದು ಮನವಿ ಮಾಡಿದೆ.

**ಈ ದಿನದ ದರ** | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,811/Gram24ct ₹7,160/Gram22ct | ಬೆಳ್ಳಿ: ₹91.50/Gram

ಅಂತರಾಳದಿಂದ... EDITORIAL

# ಕನ್ನಡ ಉಳಿಸುವ ವಿಧಾನ ಇದೇನಾ?

ವಿಶ್ವವಿದ್ಯಾನಿಲಯ ತನ್ನ ತಾತ್ಕಾಲಿಕ/ಗುತ್ತಿಗೆ ಆಧಾರಿತ ಸಿಬ್ಬಂದಿಗೆ ಕಳೆದ 15 ತಿಂಗಳುಗಳಿಂದ ವೇತನ ಪಾವತಿ ಮಾಡಿಲ್ಲ. ಯಾಕೆಂದರೆ ಸರಕಾರ ಅನುದಾನ ನೀಡಿಲ್ಲ. ಸಾವಿರಾರು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಈ ವಿಶ್ವವಿದ್ಯಾನಿಲಯಕ್ಕೆ ತಕ್ಷಣಕ್ಕೆ ಈ ವೇತನ ಪಾವತಿಗೇ 3.5 ಕೋಟಿ ರೂ. ಬೇಕಾಗಿದೆ. ಅದರ ಒಟ್ಟಾರೆ ಇತರ ಅಗತ್ಯಗಳ ಬಗ್ಗೆ ಇನ್ನೂ ಮಾಹಿತಿ ಇಲ್ಲ. ದಶಕದ ಹಿಂದೆ ಏನಿಲ್ಲವೆಂದರೂ 5 ಕೋಟಿ ರೂ. ಅನುದಾನ ಲಭ್ಯವಾಗುತ್ತಿತ್ತು ಎಂದಿರುವ ಉಪಕುಲಪತಿಗಳು ತದನಂತರ ವರ್ಷ ವರ್ಷ ಈ ಅನುದಾನ ಇಳಿಮುಖವಾಗುತ್ತಲೇ ಬಂದಿರುವ ವ್ಯಂಗ್ಯವನ್ನು ಬಿಚ್ಚಿಟ್ಟಿದ್ದಾರೆ 2013–14ನೇ ಸಾಲಿನಲ್ಲಿ ರೂ.5.2 ಕೋಟಿ ಅನುದಾನ ಲಭ್ಯವಾಗಿದ್ದರೆ ಬಿಜೆಪಿ ಆಡಳಿತಾವಧಿಯಲ್ಲಿ ಈ ಅನುದಾನ ಕೇವಲ ರೂ. 50 ಲಕ್ಷಕ್ಕಿಳಿದಿದೆ. ಆದರೆ ಕಾಂಗ್ರೆಸ್ ಸರಕಾರ ಬಂದ ಮೇಲೂ ಪರಿಸ್ಥಿತಿ ಸುಧಾರಿಸಿಲ್ಲ. ಕಳೆದ ಸಾಲಿಗೆ ಈ ಮೊತ್ತ ಕೇವಲ ರೂ. 151 ಕೋಟಿಯಾಗಿದ್ದರೆ ಈ ಸಾಲಿನಲ್ಲಿ ಘೋಷಿಸಿದ ಅನುದಾನ ರೂ.1.91 ಕೋಟಿ ದಶಕದ ಹಿಂದಿನ ಅನುದಾನ ಪ್ರಮಾಣ ಗಮನಿಸಿದರೆ ಈಗ ಅದು ಏನಿಲ್ಲವೆಂದರೂ ರೂ. 15 ಕೋಟಿಗೆ ಸಮ ತನ್ನ 700 ಎಕರೆ ವಿಶಾಲವಾದ ಕ್ಯಾಂಪ್, ಹಾಸ್ಟೆಲ್‌ಗಳು, ಕಟ್ಟಡಗಳ ನಿರ್ವಹಣೆಗೇ ವರ್ಷಕ್ಕೆ 5 ಕೋಟಿ ರೂ. ಬೇಕಾಗುತ್ತದೆ ವಿದ್ಯಾರ್ಥಿಗಳ ಫೀ ಮೂಲಕ ಬರುವ ಮೊತ್ತ ಅಲ್ಪ ಸರಕಾರಿ ವಿವಿಯೊಂದು ತನ್ನ ವೆಚ್ಚಕ್ಕೆ ವಿದ್ಯಾರ್ಥಿಗಳ ಕಿಸೆಗೆ ಕೈಯಿಕ್ಕುವ ಅವಕಾಶ ಇಲ್ಲ. ಸರಕಾರವೋ ಕನ್ನಡದ ಬಗ್ಗೆ ಎದೆ ಉಬ್ಬಿಸಿ ಮಾತಾಡುತ್ತಿದ್ದರೆ, ದೇಶದಲ್ಲೇ ಅಪರೂಪವಾದ ತನ್ನ ವಿವಿಯ ಆರೋಗ್ಯದ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ ವಿವಿಯ ಅನುದಾನಕ್ಕಾಗಿ ಅಂಗಲಾಚುವ ಪತ್ರಗಳೆಲ್ಲಾ ಉನ್ನತ ಶಿಕ್ಷಣ ಇಲಾಖೆ–ವಿತ್ತ ಇಲಾಖೆಗಳ ನಡುವೆ ವಾಲಿಬಾಲ್ ತರ ಹಾರಾಡುತ್ತಿದೆ ಎಂದು ವರದಿ ಹೇಳುತ್ತಿದೆ. ಈ ಗುತ್ತಿಗೆ ಆಧಾರದ ನೌಕರರಲ್ಲಿ ಅತಿಥಿ ಉಪನ್ಯಾಸಕರೂ ಇದ್ದಾರೆ. ಹಳಬರೆಲ್ಲಾ ನಿವೃತ್ತಿ ಆದ ಮೇಲೆ ಈಗ ಕೇವಲ 47 ಖಾಯಂ ಬೋಧಕರಿದ್ದಾರಂತೆ! ಈ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ಯಾವ ಹಂತದಲ್ಲಿದೆ ಗೊತ್ತಿಲ್ಲ. ಇದರೊಂದಿಗೇ ಹಾಸ್ಟೆಲ್‌ಗಳನ್ನು ನಿರ್ವಹಿಸುವ ವೆಚ್ಚ ವರ್ಷ ವರ್ಷ ಏರುತ್ತಿದೆ.

**ಹಂಪಿಯ ಕನ್ನಡ ವಿವಿಯ ಶೋಚನೀಯ ಆರ್ಥಿಕ ಸ್ಥಿತಿ ಸದ್ದಕ್ಕೆ ತೀವ್ರ ಚರ್ಚೆಗೆ ಕಾರಣವಾಗಿದೆ. ಒಂದೆಡೆ, ಕನ್ನಡದ ಉಳಿವಿಗಾಗಿ ಖಾಸಗಿ ಉದ್ಯಮಗಳಲ್ಲಿ ಮೀಸಲಾತಿಯನ್ನು ಜಾರಿಗೆ ತರುವ ಮಾತುಗಳನ್ನಾಡುತ್ತಿರುವ ಸರಕಾರ, ಇನ್ನೊಂದೆಡೆ ಕನ್ನಡ ಪರಂಪರೆಯನ್ನು ಎತ್ತಿ ಹಿಡಿಯುವ ಮಹತ್ವದ ಪಾತ್ರ ನಿರ್ವಹಿಸುತ್ತಿರುವ ಕನ್ನಡ ವಿ.ವಿಯ ಅವಸಾನಕ್ಕೆ ಕಾರಣವಾಗುತ್ತಿದೆ ಎನ್ನುವ ಆರೋಪಗಳು ಕೇಳಿ ಬರುತ್ತಿವೆ. ಕನ್ನಡ ವಿಶ್ವವಿದ್ಯಾನಿಲಯ ಮುಚ್ಚುತ್ತಿರುವ ಹೊತ್ತಿನಲ್ಲೇ ಸಂಸ್ಕೃತ ವಿಶ್ವವಿದ್ಯಾನಿಲಯಕ್ಕೆ ಅದ್ದೂರಿಯ ಸಿದ್ಧತೆ ನಡೆಯುತ್ತಿದೆ.**

ಕಳೆದ ವರ್ಷ ವಿದ್ಯುತ್ ಬಿಲ್ ಕಟ್ಟಲಾರದೇ ಕೂತಿದ್ದ ವಿವಿಗೆ ಸರಕಾರ ಒಂದು ಕೋಟಿ ರೂ. ನೀಡಿ ಅದನ್ನು ವಿದ್ಯುತ್ ಬಿಲ್ ಪಾವತಿಗೇ ಬಳಸಿ ಎಂದಿತ್ತು. ಸ್ಥಳೀಯ ಮುನ್ಸಿಪಾಲಿಟಿಯೂ ಕಟ್ಟಡ ತೆರಿಗೆ ಎಂದು ರೂ. 16 ಲಕ್ಷಕ್ಕೆ ಬೇಡಿಕೆ ಇರಿಸಿದೆ.

ಇವೆಲ್ಲಾ ಗೋಳು ಸರಕಾರಕ್ಕೆ ಗೊತ್ತಿಲ್ಲದ್ದೇನಲ್ಲ ಭೌತಿಕ ಮೂಲಸಂರಚನೆಗಳ ನಿರ್ವಹಣೆ, ಗುತ್ತಿಗೆ ಆಧಾರಿತ ನೌಕರರ ವೇತನ ಇವೆಲ್ಲವೂ ಸಹಜ ವೆಚ್ಚಗಳು, ಬಿಜೆಪಿ ಸರಕಾರ ಸಂಸ್ಕೃತ ವಿವಿಗೆ ನೀಡಿದ ಪೋಷಣೆಯನ್ನು ಸಾಂಪ್ರದಾಯಿಕ ವಿವಿಗಳಿಗೆ ನೀಡಿಲ್ಲ. ಅಷ್ಟೇಕ ಜಿಲ್ಲೆಗೊಂದು ವಿವಿ ಎಂಬ ಹೆಸರಲ್ಲಿ ಅನುದಾನ, ಜಮೀನು ನೀಡದೆ ಬೋರ್ಡು ತಗಲಿಸಿ ಕೂರುವ ಏರ್ಪಾಟು ಮಾಡಿದೆ. ಇದರ ಅಸಂಬದ್ಧತೆ ಗೊತ್ತಿದ್ದೂ ಕಾಂಗ್ರೆಸ್ ಸರಕಾರ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಇನ್ನು ಎಲ್ಲಾ ವಿವಿಗಳಲ್ಲೂ ಸಾವಿರಾರು ಖಾಯಂ ಬೋಧಕರ ಹುದ್ದೆ ಖಾಲಿ ಇದೆ. ಇಂಥಾ ಪಡಿಪಾಟಲಿಗೆ ವಿವಿಗಳನ್ನು ತಳ್ಳಿ ಈ ವಿವಿಗಳು ವಿಶ್ವದರ್ಜೆಯ ಶಿಕ್ಷಣ ಸಂಶೋಧನೆಗಳನ್ನು ಕೈಗೊಳ್ಳುವ ಬಗೆ ಹೇಗೆ? ಸ್ಪರ್ಧಾತ್ಮಕವಾಗಿ ಕೆಲಸ ಮಾಡುವುದು ಹೇಗೆ?

ಇನ್ನೊಂದೆಡೆ ಸ್ಪರ್ಧಾತ್ಮಕತೆ ಅಂದರೆ ಕಂಪೆನಿಗಳಿಗೆ ಬೇಕಾದ ವೃತ್ತಿಪರ ಕೋರ್ಸುಗಳನ್ನು ಸಿದ್ಧಪಡಿಸುವುದು ಎಂಬ ಭ್ರಮಾತ್ಮಕ ನಿಲುವೂ ಢಾಳಾಗಿದೆ. ಹೆಸರಾಂತ ವಿವಿಗಳು ಇಂತಹ ಉದ್ಯೋಗ ನೀಡುವ ಕೋರ್ಸುಗಳ ಮೂಲಕ ಮಾನ್ಯತೆ ಪಡೆದಿದ್ದಲ್ಲ. ಅವು ಮೂಲಭೂತ ಸಂಶೋಧನೆ, ಜ್ಞಾನ ಪ್ರಮೇಯಗಳನ್ನು ಕೈಗೆತ್ತಿಕೊಂಡಿರುವ ಕಾರಣ ಹೆಸರು ಪಡೆದಿವೆ. ಹಂಪಿಯ ಕನ್ನಡ ವಿವಿಯ ಸಂಶೋಧನಾ ಮಟ್ಟ ಹೇಗಿದೆ ಎಂಬುದರ ಬಗ್ಗೆ ಸರಕಾರ ಪ್ರತ್ಯೇಕವಾಗಿ ತಜ್ಞರ ಸಮಿತಿಯೊಂದರ ಮೂಲಕ ಪರಾಮರ್ಶೆ ನಡೆಸುವ ಅಗತ್ಯವಿದೆ. ಚೀನಾ, ಜರ್ಮನಿ, ಸ್ವೀಡನ್, ಇಟಲಿ ಈ ಎಲ್ಲಾ ದೇಶಗಳಲ್ಲೂ ಆಯಾ ದೇಶ ಭಾಷೆಗಳಲ್ಲೇ ಶಿಕ್ಷಣ ಸಂಶೋಧನೆ ನಡೆಯುತ್ತಾ ಅವು ವಿಶ್ವದ ಗಮನ ಸೆಳೆಯುತ್ತ ಬಂದಿರುವುದನ್ನು ಗಮನಿಸಿದರೆ ನಮ್ಮ ಕನ್ನಡ ವಿಶ್ವವಿದ್ಯಾನಿಲಯ ಎಲ್ಲಿದೆ ಎಂಬುದು ಪತ್ತೆ ಮಾಡಲು ಮೇಧಾವಿಗಳೇ ಬೇಕಿಲ್ಲ. ಇವೆಲ್ಲಕ್ಕಿಂತ ಮೊದಲು ವಿಶ್ವವಿದ್ಯಾನಿಲಯವು ಭೌತಿಕವಾಗಿ ಕಾರ್ಯ ನಿರ್ವಹಿಸಲು ಬೇಕಾದ ಅನುದಾನವೇ ನೀಡದಿದ್ದರೆ ವಿವಿಯ ಕಾರ್ಯಕ್ಷಮತೆಯ ಬಗ್ಗೆ ಕೇಳುವ ನೈತಿಕ ನೆಲೆಯೂ ಸರಕಾರಕ್ಕಿರುವುದಿಲ್ಲ. ಹಂಪಿ ವಿವಿಯು ಈ ಹಿಂದಿನ ಬಿಜೆಪಿ ಸರಕಾರದ ಬಳಿ ಮೂಲಭೂತ ಅಗತ್ಯಗಳಿಗಾಗಿ ಬೇಡಿಕೆ ಇಟ್ಟಾಗಲೆಲ್ಲ ಅದನ್ನು ತಿರಸ್ಕರಿಸುತ್ತಾ ಬಂತು. ಅದೇ ಸಂದರ್ಭದಲ್ಲಿ ಬೊಮ್ಮಾಯಿ ನೇತೃತ್ವದ ಸರಕಾರ ರಾಜ್ಯದಲ್ಲಿ ಸಂಸ್ಕೃತ ವಿವಿ ಸ್ಥಾಪನೆಗೆ 100 ಎಕರೆ ಭೂಮಿ, 359 ಕೋಟಿ ರೂಪಾಯಿ ಅನುದಾನವನ್ನು ನೀಡಲು ಮುಂದಾಯಿತು. ಇಷ್ಟಕ್ಕೂ ಕರ್ನಾಟಕದಲ್ಲಿ ಸಂಸ್ಕೃತ ಮಾತೃಭಾಷಿಗರ ಸಂಖ್ಯೆ ಎಷ್ಟು ಎಂದು ಲೆಕ್ಕ ಹಾಕಿದರೆ ನಿರಾಶೆಯಾಗುತ್ತದೆ. ದೈನಂದಿನ ವ್ಯವಹಾರದಲ್ಲಾಗಲಿ, ಶೈಕ್ಷಣಿಕ ಬದುಕಿನಲ್ಲಾಗಲಿ ಯಾವ ರೀತಿಯಲ್ಲೂ ಪ್ರಧಾನ ಪಾತ್ರವನ್ನು ನಿರ್ವಹಿಸದ ಸಂಸ್ಕೃತಕ್ಕಾಗಿ ಒಂದು ವಿಶ್ವವಿದ್ಯಾನಿಲಯ ತೆರೆಯಲು ಮುಂದಾಗುವ ಸರಕಾರ, ಆ ಹಣದ ಅರ್ಧವನ್ನು ಕನ್ನಡ ವಿವಿಯ ಉಳಿಕೆಗೆ ಬಳಸಿದ್ದರೆ ಹಂಪಿ ಕನ್ನಡ ವಿವಿ ಸ್ಥಿತಿ ಇಲ್ಲಿಗೆ ಬಂದು ಮುಟ್ಟುತ್ತಿರಲಿಲ್ಲ. ದಶಕಗಳ ಹಿಂದೆ. ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ಸಿಗಬೇಕು ಎಂದು ಭಾರೀ ಹೋರಾಟಗಳು ಆರಂಭವಾದವು ಈ ಸ್ಥಾನಮಾನದಿಂದ ಕನ್ನಡಕ್ಕೆ ದಕ್ಕಿದ್ದೇನು ಎನ್ನುವುದು ಯಾರಿಗೂ ಸ್ಪಷ್ಟವಿಲ್ಲ. ಇರುವ ವಿಶ್ವವಿದ್ಯಾನಿಲಯವನ್ನೇ ಉಳಿಸಿಕೊಳ್ಳಲು ಸಾಧ್ಯವಾಗದೇ ಇರುವಾಗ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ಸಿಕ್ಕಿದೆ ಎಂದು ಬೀಗುವುದರಲ್ಲಿ ಏನು ಅರ್ಥವಿದೆ?

# ರಾಮಾಯಣ



**ಸುರಾಸುರರು ಸಮುದ್ರ ಮಥನ ಮಾಡಿದುದು**

• ಹಿಂದಿನ ಸಂಚಿಕೆಯಿಂದ 28 ನೆಯ ಅಧ್ಯಾಯ

ಅಂಗೀಕರಿಸದೆ ಇದ್ದ ದಿತಿಯ ಮಕ್ಕಳು ಅಸುರರಾದರು ಈ ರೀತಿಯಲ್ಲಿ ಅದಿತಿಯ ಮಕ್ಕಳು ವಾರುಣಿಯನ್ನು ಪರಿಗ್ರಹಿಸಿ ಸಂತೋಷವನ್ನು ಪಡೆದರು ಆಮೇಲೆ ಉಚ್ಚೈಶ್ರವಸ್ಸೆಂಬ ಅಶ್ವರತ್ನವೂ ಮಣಿರತ್ನವಾದ ಕೌಸ್ತುಭವೂ ಹುಟ್ಟಿದವು. ಅನಂತರದಲ್ಲಿ ಅಮೃತವು ಹುಟ್ಟಿತು ಆ ಅಮೃತಕ್ಕೋಸ್ಕರ ಸುರರಿಗೂ ಅಸುರರಿಗೂ ಮಹಾ ಭಯಂಕರವಾಗಿ, ಮೂರು ಲೋಕಗಳಿಗೂ ಅತ್ಯದ್ಭುತವಾದ ಯುದ್ಧವಾಯಿತು ಆ ಸಮಯದಲ್ಲಿ ಮಹಾಬಲವಂತನಾದ ನಾರಾಯಣನು ಮೋಹಿನೀರೂಪವನ್ನು ತಾಳಿ ಅಮೃತವನ್ನು ಕದ್ದುಕೊಂಡು ಹೋದನು. ಆ ಬಳಿಕ ನಿತ್ಯ ಸ್ವರೂಪನಾಗಿ ಪರಮಪುರುಷನಾದ ನಾರಾಯಣನೊಡನೆ ಕೂಡಿ ಆದಿತಿಯ ಮಕ್ಕಳಾದ ದೇವತೆಗಳು ದಿತಿಯ ಮಕ್ಕಳಾದ ಅಸುರರನ್ನು ಯುದ್ಧದಲ್ಲಿ ಸಂಹರಿಸಲು ದೇವೇಂದ್ರನು ಸಿದ್ಧಚಾರಣರು ಮೊದಲಾದ ದೇವತೆಗಳನ್ನು ಕೂಡಿಕೊಂಡು ಅಮರಾವತಿ ಪಟ್ಟಣದಲ್ಲಿ ಸ್ವರ್ಗ ಲೋಕವನ್ನು ಪಾಲಿಸಿಕೊಂಡು ಸುಖದಿಂದಿದ್ದನು.''

## 46ನೆಯ ಅಧ್ಯಾಯ ದಿತೀ ದೇವಿಯತಪಸ್ಸು

ಈ ಪ್ರಕಾರವಾಗಿ ಅಸುರರು ಕ್ಷಯವನ್ನೈದಲು ಅವರ ತಾಯಿಯಾದ ದಿತಿಯು ಪುತ್ರಶೋಕದಿಂದ ದುಃಖಾಕ್ರಾಂತಳಾಗಿ, ಮರೀಚಿಬ್ರಹ್ಮನ ಮಗನಾಗಿ ತನಗೆ ಗಂಡನಾದ ಕಶ್ಯಪನನ್ನು ನೋಡಿ ಸ್ವಾಮೀ, ನಿಮ್ಮ ಮಕ್ಕಳೂ ಮಹಾಬಲವಂತರೂ ಆದ ದೇವತೆಗಳಿಂದ ನನ್ನ ಮಕ್ಕಳಾದ ಅಸುರರು ಹತರಾದರು. ಅದರಿಂದ ನಾನು ಮಕ್ಕಳಿಲ್ಲದವಳಾದನು. ನನಗೆ ದೇವೇಂದ್ರನನ್ನು ಕೊಲ್ಲುವಂಥವನೂ ದೀರ್ಘಾಯುಷ್ಮಂತನೂ ಮಹಾಪರಾಕ್ರಮಿಯೂ ಆದ ಒಬ್ಬ ಮಗನನ್ನು ಕೊಡಬೇಕು ನಾನು ಸ್ವಾಮಿಯನ್ನು ಕುರಿತು ತಪಸ್ಸನ್ನು ಮಾಡುವನು. ನನಗೆ ಉತ್ತಮನೂ ಬಲವಂತನೂ ಸಕಲಸ್ಥಿತಿಯನ್ನು ಬಲ್ಲಂಥವನೂ ದೇವೇಂದ್ರನನ್ನು ಸಂಹರಿಸುವಂಥವನೂ ಆದ ಮಗನನ್ನು ಕೊಡಬೇಕು ಎಂದು ಕೇಳಿದಳು. ಕಶ್ಯಪನು ಹಾಗೆಯೇ ಆಗಲೆಂದು ಅಂಗೀಕರಿಸಿ ದಿತಿಯನ್ನು ಕುರಿತು 'ನೀನು ಅತ್ಯಂತ ಶುಚಿಯಾಗಿ ತಪಸ್ಸನ್ನು ಮಾಡು, ಸಾವಿರ ವರುಷಗಳು ಶುಚಿಯಾಗಿ ತಪಸ್ಸನ್ನು ಮಾಡಿದರೆ ಬಲವಂತನಾಗಿ ಯುದ್ಧರಂಗದಲ್ಲಿ ದೇವೇಂದ್ರನನ್ನು ಕೊಲ್ಲುವಂಥ ಸಾಮರ್ಥ್ಯವುಳ್ಳ ಮಗನನ್ನು ಪಡೆಯುವೆ. ನಿನಗೆ ಶ್ರೇಯಸ್ಸಾಗಲಿ ' ಎಂದು ನುಡಿದು ತಪಸ್ಸಿಗೆ ತೆರಳಿದನು. ಆಮೇಲೆ ದಿತಿಯು ಅತಿಹರ್ಷಪಟ್ಟು ಕುಶಪ್ಲವ ಕ್ಷೇತ್ರದಲ್ಲಿ ಉಗ್ರವಾದ ತಪಸ್ಸನ್ನು ಮಾಡುತ್ತಿದ್ದಳು.

**ಮುಂದುವರಿಯುವುದು...**

# ವಿಶ್ವವಿದ್ಯಾನಿಲಯ ಅಂತರ ಕಾಲೇಜು ಅಥ್ಲೆಟಿಕ್ ಚಾಂಪಿಯನ್‌ಷಿಪ್ ಕ್ರೀಡಾಕೂಟ

**ಆರನೇ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ**

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರ ವಿಶ್ವವಿದ್ಯಾನಿಲಯ ಕಂಠೀರವ ಕ್ರೀಡಾಂಗಣದಲ್ಲಿ ಏರ್ಪಡಿಸಿರುವ ಎರಡು ದಿನಗಳ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟವನ್ನು ಕುಲಪತಿಗಳಾದ ಪ್ರೊ.ಲಿಂಗರಾಜ ಗಾಂಧಿಯವರು ಇಂದು ಬೆಳಿಗ್ಗೆ ಬಲೂನ್‌ಗಳನ್ನು ಹಾರಿಬಿಡುವ ಮೂಲಕ ಉದ್ಘಾಟಿಸಿದರು.

ವಿಶ್ವವಿದ್ಯಾನಿಲಯದ ಆರನೇ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಶೈಕ್ಷಣಿಕ ಪರಿಶ್ರಮದ ಜೊತೆಗೆ ಕ್ರೀಡಾ ಮನೋಭಾವವನ್ನೂ ರೂಪಿಸಿ ಕೊಳ್ಳಲು ವಿದ್ಯಾರ್ಥಿ ಗಳಿಗೆ ಸಲಹೆ ಮಾಡಿದರು. ಒಂದೂವರೆ ಶತಮಾನ ಮೀರಿದ ಸುದೀರ್ಘ ಇತಿಹಾಸವಿರುವ ಸೆಂಟ್ರಲ್ ಕಾಲೇಜು ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳ ಸಾಧನೆಯ ಪರಂಪರೆಯನ್ನೂ ಹೊಂದಿದೆ ಎಂದು ಅವರು ವಿವರಿಸಿದರು.

ಇದೀಗ ನವೀಕೃತ ಜ್ಞಾನ ಜ್ಯೋತಿ ಕ್ಯಾಂಪಸ್ ಆವರಣ ದಲ್ಲಿ ನೂತನ ಶೈಕ್ಷಣಿಕ ವಿಭಾಗದ ಜೊತೆಗೆ ಅತ್ಯಾಧುನಿಕ ಕ್ರೀಡಾ ಸಮುಚ್ಚಯವನ್ನೂ ನಿರ್ಮಿಸ ಲಾಗಿದೆ ಎಂದು ಪ್ರೊ.ಗಾಂಧಿ ತಿಳಿಸಿದರು. ಈ ಕ್ರೀಡಾಕೂಟದಲ್ಲಿ ಒಟ್ಟು 100 ಸಂಯೋಜಿತ ಕಾಲೇಜುಗಳಿಂದ 1200 ವಿದ್ಯಾರ್ಥಿಗಳು 46 ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುತ್ತಿರುವರು. ವಿಜೇತ ಸ್ಪರ್ಧಿಗಳಿಗೆ ಸಂಜೆ ಬಹು ಮಾನಗಳನ್ನು ವಿತರಿಸ ಲಾಗುವುದು.

2024 ಡಿಸೆಂಬರ್ ಕೊನೆಯ ವಾರದಲ್ಲಿ ಭುವನೇಶ್ವರದಲ್ಲಿ ನಡೆಯುವ ಅಂತರ ವಿಶ್ವವಿದ್ಯಾಲಯ ರಾಷ್ಟ್ರೀಯ ಕ್ರೀಡಾ ಕೂಟದಲ್ಲಿ ಪಾಲ್ಗೊಳ್ಳುವ ಬಿಸಿಯು ತಂಡವನ್ನು ಇದೇ ಸಂದರ್ಭದಲ್ಲಿ ಆಯ್ಕೆ ಮಾಡಲಾಗುವುದು.

**ಕುಲಸಚಿವರಾದ ಟಿ.ಜವರೇಗೌಡ, ಕುಲಸಚಿವ (ಮೌಲ್ಯಮಾಪನ) ಡಾ. ಸಿ.ಎಸ್. ಆನಂದ ಕುಮಾರ್, ವಿತ್ತಾಧಿಕಾರಿ ಎಂ.ವಿ.ವಿಜಯಲಕ್ಷ್ಮಿ ಉದ್ಘಾಟನಾ ಸಮಾರಂಭದಲ್ಲಿ ಉಪಸ್ಥಿತರಿದ್ದರು. ದೈಹಿಕ ಶಿಕ್ಷಣ ನಿರ್ದೇಶನಾಲಯದ ಪ್ರಭಾರ ನಿರ್ದೇಶಕರಾದ ಪ್ರೊ.ಶಿವಶಂಕರ್ ಅಧ್ಯಕ್ಷತೆ ವಹಿಸಿದ್ದರು. ಕ್ರೀಡಾ ವಿಭಾಗದ ಸಂಯೋಜಕರಾದ ಮಹಮ್ಮದ್ ಸಿಬ್ಗತುಲ್ಲಾ ಕ್ರೀಡಾಕೂಟದ ನಿರ್ವಹಣೆ ವಹಿಸಿರುವರು.**

# ಹಿಂದೂ ಧರ್ಮದ ಬಗ್ಗೆ ಜನಜಾಗೃತಿ ಮೂಡಿಸಲು ಹಿಂದೂ ರಾಷ್ಟ್ರ-ಜಾಗೃತಿ ಸಭೆ !

• ಉದಯವಾಹಿನಿ, ವಿಶೇಷ

ಹಿಂದೂ ಧರ್ಮದ ಮೇಲೆ ಆನೇಕ ರೀತಿಯಲ್ಲಿ ಆಕ್ರಮಣಗಳು ನಡೆಯುತ್ತಿದೆ. ಲವ್ ಜಿಹಾದ್, ಲ್ಯಾಂಡ್, ಹಲಾಲ್ ಜಿಹಾದ್, ಮತಾಂತರ, ಧರ್ಮದ ಅಪಮಾನ ಮಾಡುವುದು, ಹಿಂದೂ ನಾಯಕರ ಬರ್ಬರ ಹತ್ಯೆ, ಹಿಂದೂ ದೇವಸ್ಥಾನಗಳ ಸರ್ಕಾರಿಕರಣ, ಮುಂತಾದ ಸಮಸ್ಯೆಗಳು ಮುಗಿಲು ಮುಟ್ಟಿದೆ.

ಅದಕ್ಕಾಗಿ ಹಿಂದೂಗಳನ್ನು ಜಾಗೃತಗೊಳಿಸುವುದು, ಧರ್ಮದ ಆಧಾರದ ಮೇಲೆ ಹಿಂದೂ ಸಮಾಜವನ್ನು ಸಂಘಟಿತಗೊಳಿಸಿ, ಭಾರತವನ್ನು ಹಿಂದೂ ರಾಷ್ಟ್ರವೆಂದು ಘೋಷಿಸಲು ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಹಿಂದೂ ರಾಷ್ಟ್ರ ಜಾಗೃತಿ ಸಭೆಯನ್ನು ಆಯೋಜಿಸಲಾಗಿದೆ.

ಸಮಿತಿಯು ಕಳೆದ 12 ವರ್ಷಗಳಿಂದ 13 ರಾಜ್ಯಗಳಲ್ಲಿ, 7 ಭಾಷೆಗಳಲ್ಲಿ ಮತ್ತು 2000 ಕ್ಕೂ ಅಧಿಕ ಸ್ಥಳಗಳಲ್ಲಿ ನಿಯೋಜಿಸಿ 20 ಲಕ್ಷಕ್ಕಿಂತಲೂ ಆಧಿಕ ಹಿಂದೂಗಳನ್ನು ಜಾಗೃತಿ ಮಾಡಲಾಗಿದೆ.

ದೊಡ್ಡಬಳ್ಳಾಪುರ ಸಭೆಯ ವಿವರ


ಉದಯವಾಹಿನಿ ಚಿತ್ರ

ಸ್ಥಳ : ಶ್ರೀರಾಮಾಂಜನೇಯ ಕಲ್ಯಾಣ ಮಂಟಪ, ಆಸ್ಪತ್ರೆ ಸರ್ಕಲ್, ದೊಡ್ಡಬಳ್ಳಾಪುರ ಬಸ್ ನಿಲ್ದಾಣ, ದೊಡ್ಡಬಳ್ಳಾಪುರ ದಿನಾಂಕ 01 ಡಿಸೆಂಬರ್ 2024 ವಾರ ರವಿವಾರ ಸಮಯ : ಸಾಯಂಕಾಲ 4.00 ಗಂಟೆಗೆ ಈ ಸಭೆಯಲ್ಲಿ ಹಿಂದೂ ಧರ್ಮಜಾಗೃತಿ ಮತ್ತು ಹಿಂದೂ ರಾಷ್ಟ್ರ ಸ್ಥಾಪನೆ ಉದ್ದೇಶದಿಂದ ಫ್ಲೆಕ್ಸ್ ಪ್ರದರ್ಶನ ಮತ್ತು ಗ್ರಂಥ ಪ್ರದರ್ಶನವನ್ನು, ಅನೇಕ ಹಿಂದೂ ನಾಯಕರು ಮಾರ್ಗದರ್ಶನ ಮಾಡಲಿದ್ದಾರೆ. ಈ ಹಿಂದೂ ರಾಷ್ಟ್ರ-ಜಾಗೃತಿ ಸಭೆಗೆ ಸಮಸ್ತ ಹಿಂದೂ ಬಾಂಧವರು ಆಗಮಿಸಬೇಕೆಂದು ಹಿಂದೂ ಜನಜಾಗೃತಿ ಸಮಿತಿ ತನ್ನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಇದಕ್ಕೆ ತಮ್ಮ ಪತ್ರಿಕಾ ವರದಿಗಾರರು, ಛಾಯಾಚಿತ್ರಕಾರರನ್ನು ಕಳಿಸಬೇಕು ಎಂದು ವಿನಂತಿ.

# ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್: ಮುನೀಶ್ ಮೌದ್ಗಿಲ್

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಕಂದಾಯ ವಿಭಾಗಕ್ಕೆ ಸಂಬಂಧಿಸಿದ ಅಧಿಕಾರಿಗಳು ಪ್ರತಿ ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್ ನಡೆಸಿ ಸಾರ್ವಜನಿಕರ ಕುಂದುಕೊರತೆಗಳು ಮತ್ತು ಮನವಿಗಳನ್ನು ವಿಲೇವಾರಿ ಮಾಡಲು ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ರವರು ಆದೇಶ ಹೊರಡಿಸಿದ್ದಾರೆ.

ಪಾಲಿಕೆಯ ಮುಖ್ಯ ಆಯುಕ್ತರು ರವರ ನಿರ್ದೇಶನದಂತೆ ಕಂದಾಯ ವಿಭಾಗದ ಅಧಿಕಾರಿಗಳು ಅವರವರ ಕಛೇರಿಗಳಲ್ಲಿ ಪ್ರತಿ ಬೆಳಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 02.00 ಗಂಟೆಯವರೆಗೆ ಕಡ್ಡಾಯವಾಗಿ ಹಾಜರಿದ್ದು, ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್ ನಡೆಸಬೇಕು.

ಸದರಿ ಅಧಿಕಾರಿಗಳನ್ನು ಯಾವುದೇ ಭೌತಿಕ ಸಭೆಗೆ



ಅಥವಾ ಸಾಮಾನ್ಯ ಸಭೆಗೆ, ವರ್ಚುಯಲ್ ಸಭೆಗೆ ಕರೆಯಬಾರದು. ಸದರಿ ವೇಳೆಯಲ್ಲಿ ಕಛೇರಿ ಸಿಬ್ಬಂದಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು ಹಾಗೂ ಸಾರ್ವಜನಿಕರಿಂದ ಸ್ವೀಕರಿಸುವ ಎಲ್ಲಾ ಕುಂದು ಕೊರತೆಗಳನ್ನು ಮತ್ತು ಮನವಿಗಳನ್ನು ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್ ನಡೆಸಿ ಶೀಘ್ರವಾಗಿ ವಿಲೇವಾರಿ ಮಾಡುವುದು. ಪಾಲಿಕೆಯ ಎಲ್ಲಾ ವಲಯ ಜಂಟಿ ಆಯುಕ್ತರುಗಳು, ವಲಯ ಉಪ ಆಯುಕ್ತರುಗಳು (ಕಂದಾಯ), ಕಂದಾಯ ಅಧಿಕಾರಿಗಳು ಮತ್ತು ಸಹಾಯಕ ಕಂದಾಯ ಅಧಿಕಾರಿಗಳು ಅವರವರ ಕಛೇರಿಯಲ್ಲಿ ಕ್ಯಾಂಪ್ ಮಾಡಿ, ಸಾರ್ವಜನಿಕರಿಗೆ ಲಭ್ಯವಿದ್ದು, ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್ ನಡೆಸಿ ಎಲ್ಲಾ ಸಾರ್ವಜನಿಕರ ಕುಂದು ಕೊರತೆಗಳನ್ನು ಮತ್ತು ಮನವಿಗಳನ್ನು ವಿಲೇವಾರಿ ಮಾಡುವುದು. ಎಲ್ಲಾ ವಲಯ ಆಯುಕ್ತರುಗಳು ಮತ್ತು ವಲಯ ಜಂಟಿ ಆಯುಕ್ತರುಗಳು ಇದನ್ನು ಕಾರ್ಯಗತಗೊಳಿಸಲು ಸಂಪೂರ್ಣ ಜವಾಬ್ದಾರಿ ವಹಿಸುವುದು. ಮುಂದುವರೆದು, ಪ್ರತಿ ಬುಧವಾರದ ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್ ಕಾರ್ಯಕ್ಷಮತೆಯ ಬಗ್ಗೆ ಪ್ರತಿ ಸೋಮವಾರ ಮುಖ್ಯ ಆಯುಕ್ತರುರವರ ಅಧ್ಯಕ್ಷತೆಯಲ್ಲಿ ''ಸಕಾಲ ಮತ್ತು ಕುಂದುಕೊರತೆ'' ಪರಿಶೀಲನಾ ಸಭೆಯನ್ನು ನಡೆಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಪ್ರತಿಯನ್ನು ಲಗತ್ತಿಸಲಾಗಿದೆ.

**''ಸಕಾಲ ಕುಂದುಕೊರತೆ'' ಪರಿಶೀಲನಾ ಸಭೆ**


# ಸಂಯೋಗ ಸಂಸ್ಥೆ ಆಯೋಜನೆ ವಿದುಷಿ ಲತಾ ಅವರ ಶಿಷ್ಯೆ ಸಂಭ್ರಮ

• ಉದಯವಾಹಿನಿ, ಬೆಂಗಳೂರು

ನಗರದ ಸಂಯೋಗ ಸಂಸ್ಥೆಯ ಪ್ರಖ್ಯಾತ ಕಲಾವಿದೆ ನೃತ್ಯ ಗುರು ವಿದುಷಿ ಲತಾ ಲಕ್ಷ್ಮೀಶ ಅವರ ಶಿಷ್ಯೆ ಎನ್. ಅಶ್ವಿನಿ ಅವರು ಡಿ. 1 ರಂದು ಭರತನಾಟ್ಯ ರಂಗಪ್ರವೇಶ ಮಾಡಲಿದ್ದಾರೆ. ಬೆಂಗಳೂರಿನ ಬಸವೇಶ್ವರನಗರದ ಕೆಇಎ ಪ್ರಭಾತ್ ರಂಗಮಂದಿರದಲ್ಲಿ ಅಂದು ಸಂಜೆ 5ಕ್ಕೆ ಆಯೋಜಿಸಿರುವ ಜನನಿ ಕಾರ್ಯಕ್ರಮಕ್ಕೆ ಹಿರಿಯ ನೃತ್ಯ ಶಿಕ್ಷಕಿ ಶ್ರೀಲತಾ ತೀರ್ಥಹಳ್ಳಿ, ಶಿವಮೊಗ್ಗದ ಸಂಗೀತ ಶಿಕ್ಷಕ ಪ್ರೀತಂ ಗಂಧರ್ವ, ಗುರು ವಿದುಷಿ ಲತಾ ಲಕ್ಷ್ಮೀಶ ಮತ್ತು ಕಲಾ ವಿನ್ಯಾಸಕಾರ ಲಕ್ಷ್ಮೀಶ ಸಾಕ್ಷಿಯಾಗಲಿದ್ದಾರೆ. ಇದೇ ಸಂದರ್ಭ ಹಿರಿಯ ಮೃದಂಗ ವಿದ್ವಾಂಸ ಮಹದೇವಣ್ಣ ಅವರಿಗೆ ಗೌರವಾರ್ಪಣೆಯೂ ನಡೆಯಲಿದೆ.

**ಕಲಾವಿದೆ ಅಶ್ವಿನಿ ಭರತನಾಟ್ಯ ರಂಗಪ್ರವೇಶ**

ವೃತ್ತಿಯಲ್ಲಿ ಸಾಫ್ಟ್ವೇರ್ ಇಂಜಿನಿಯರ್ ಆಗಿದ್ದರೂ ಪ್ರವೃತ್ತಿಯಲ್ಲಿ ಅಶ್ವಿನಿ ನೃತ್ಯ ಕಲಾವಿದೆ ಆಗಿರುವುದು ಗಮನಾರ್ಹ.


ಉದಯವಾಹಿನಿ ಚಿತ್ರ

**ಹಿಮ್ಮೇಳ ಸಾಥ್**

**ಅಶ್ವಿನಿ ಅವರ ಭರತ ನಾಟ್ಯ ರಂಗ ಪ್ರವೇಶಕ್ಕೆ ನಟವಾಂಗದಲ್ಲಿ ಗುರು ಲತಾ, ಗಾಯನದಲ್ಲಿ ವಿದ್ವಾನ್ ಶ್ರೀ ಕಾಂತ್ ಗೋಪಾಲಕೃಷ್ಣನ್, ಮೃದಂಗದಲ್ಲಿ ಗೋಪಾಲ ವೆಂಕಟರಮಣ ಮತ್ತು ಖಂಜಿರದಲ್ಲಿ ಪಿ .ವಿದ್ಯಾಸಾಗರ ಸಾಥ್ ನೀಡದಿದ್ದಾರೆ.**

ದೆಹಲಿ , ಮೈಸೂರು ಪಾಂಡಿಚೆರಿ , ತಿರುಪತಿ ಸೇರಿದಂತೆ ದೇಶದ ವಿವಿಧ ಪ್ರತಿಷ್ಠಿತ ವೇದಿಕೆಗಳಲ್ಲಿ ಈಗಾಗಲೇ ಭರತನಾಟ್ಯ ಕಾರ್ಯಕ್ರಮ ಮತ್ತು ಪ್ರಾತ್ಯಕ್ಷಿಕೆಗಳನ್ನು ಅಶ್ವಿನಿ ನೀಡಿರುವುದು ಹೆಮ್ಮೆ ಸಂಗತಿ. ಗುರು ಲತಾ ಅವರಲ್ಲಿ ಕಳೆದ 15 ವರ್ಷಗಳಿಂದ ನೃತ್ಯಭ್ಯಾಸ ಮಾಡಿ ಇತ್ತೀಚೆಗೆ ವಿದ್ವತ್ ಪರೀಕ್ಷೆಯನ್ನು ಅತ್ಯುತ್ತಮ ಅಂಕದೊಂದಿಗೆ ಪೂರ್ಣಗೊಳಿಸಿರುವುದು ಅಶ್ವಿನಿ ಸಾಧನೆ. ಗುರು ಲತಾ ಅವರ ಸಮರ್ಥ ಮಾರ್ಗದರ್ಶನದಲ್ಲಿ ಇದು 21ನೇ ರಂಗ ಪ್ರವೇಶ ಕಾರ್ಯಕ್ರಮವಾಗಿರುವುದೂ ಮಹತ್ವಪೂರ್ಣ.

**ಸಾಮಾಜಿಕ ಕಳಕಳಿ**




**ಹೆಚ್.ಎಸ್.ಪ್ರತಿಮಾ ಹಾಸನ್**
**ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ**

# ದಿನಕ್ಕೊಂದು ಮುಕ್ತಕ-38

• ಉದಯವಾಹಿನಿ, ವಿಶೇಷ

ಅಪ್ಪನನು ನೆನೆಯುತಲಿ ಜೀವನವ ಸವೆಸುವೆನು
ಸಪ್ಪೆಯಾಗದು ನಮ್ಮ ಬದುಕಿನಲ್ಲಿ
ಕಪ್ಪೆ ನೆಗೆಯುವ ರೀತಿ ಕಾರ್ಯವದು ನಡಿಗೆಗದು
ತುಪ್ಪದಾ ನುಡಿಯಂತೆ ಲಕ್ಷ್ಮಿ ದೇವಿ.

**ಭಾವಾರ್ಥ :** ಈ ಮೇಲಿನ ಮುಕ್ತಕದಂತೆ ಅಪ್ಪನನು ನೆನೆಯುತಲಿ ಅಪಾರ ಪ್ರೀತಿಯನ್ನು ಹೊಂದಿದ್ದು ಗಂಡನ ಮನೆಯಲ್ಲಿ ಬದುಕನ್ನು ನಡೆಸುತ್ತಾಳೆ. ಜೀವನವನ್ನು ಹೆಣ್ಣು ಮಕ್ಕಳು ಅಪ್ಪನ ನೆನಪಿಲ್ಲದೆ ಕಳೆಯಲು ಸಾಧ್ಯವಿಲ್ಲ.



ಜೀವನದಲ್ಲಿ ಅಪ್ಪ ಎಂದರೆ ಸುರಕ್ಷೆ. ಬದುಕು ಎಂಬುದು ಸಪ್ಪೆಯಾಗದಂತೆ ಬದುಕಿನಲ್ಲಿ ಅಪ್ಪ ಎಂಬ ಚಿಲುಮೆ ಇರಲಿ ಜೀವನಕ್ಕೆ. ಹಾಗೆಯೇ ಕಪ್ಪೆ ನೆಗೆಯುವ ರೀತಿ ಆಗಬಾರದು.

ಆದರೆ ಅಪ್ಪನ ನುಡಿಗಳು ತುಪ್ಪದಂತೆ ಇರಲೆಂದು ಕೇಳುತ್ತ ಹೆಣ್ಣು ಮಕ್ಕಳಿಗೆ ಅಪ್ಪನೇ ಮುಖ್ಯ. ಅಪ್ಪನ ನೆರಳಲ್ಲಿ ಹೆಣ್ಣು ಮಕ್ಕಳು ಬೆಳೆಯಬೇಕು. ಆದರೆ ಎಷ್ಟೋ ಜನ ಹೆಣ್ಣು ಮಕ್ಕಳಿಗೆ ಅದೃಷ್ಟ ಭಗವಂತ ಯಾವುದೋ ಒಂದು ರೂಪದಲ್ಲಿ ಅವರನ್ನು ಸಲಹುವಂತೆ ಸೋದರ ಮಾವ, ಚಿಕ್ಕಪ್ಪ ಅಪ್ಪನ ರೂಪದಲ್ಲಿ ಪ್ರೀತಿ ನೀಡುತ್ತಾರೆ. ಒಟ್ಟಾರೆ ತಬ್ಬಲಿ ಮಕ್ಕಳಿಗೆ ಆ ಭಾವನೆ ಬಾರದ ರೀತಿ ಪ್ರೀತಿ ನೀಡಿ.

# ದಿನೇಶ್ ಗುಂಡೂರಾವ್ ವಜಾಕ್ಕೆ ಛಲವಾದಿ ನಾರಾಯಣಸ್ವಾಮಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸರಣಿ ಸಾವು ಪ್ರಕರಣದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರನ್ನ ಸಿಎಂ ಸಿದ್ದರಾಮಯ್ಯ ಸಂಪುಟದಿಂದ ವಜಾ ಮಾಡಬೇಕು ಅಂತ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಅವರು, ದಿನೇಶ್ ಗುಂಡೂರಾವ್ ಆರೋಗ್ಯ ಮಂತ್ರಿ ಆಗಲು ಯೋಗ್ಯರು ಇದ್ದೀರಾ? ಅವರೇ ವೈದ್ಯರಾ? ನಾವು ಸದನದಲ್ಲಿ ವೆಟನರಿ ಔಷಧಿ ಕೊಟ್ರು ಅಂತ ಆರೋಪ ಮಾಡಿದಾಗ ಯೂಟರ್ನ್ ಹೊಡೆದಿದ್ರಿ. ಈಗ ಬಾಣಂತಿಯರಿಗೆ ಕೊಟ್ಟ ಔಷಧಿ ಕಳಪೆ ಮತ್ತು ದ್ರಾವಣ ಕೂಡ ಕಳಪೆ ಆಗಿದೆ ಅಂತ ರಿಪೋರ್ಟ್ ಬಂದಿದೆ. ಹೀಗಿದ್ರು ದಿನೇಶ್ ಗುಂಡೂರಾವ್ ಬದಲಾವಣೆ ಮಾಡಿಲ್ಲ. ಆರೋಗ್ಯ ಇಲಾಖೆ ಅವರು ಜನರ ಜೀವಗಳ ಜೊತೆ ಆಟ ಆಡ್ತಿದ್ದಾರೆ. ಕೂಡಲೇ ದಿನೇಶ್ ಗುಂಡೂರಾವ್‌ರನ್ನ ವಜಾ ಮಾಡಬೇಕು ಅಂತ ಸಿಎಂರನ್ನ ಒತ್ತಾಯಿಸಿದ್ದಾರೆ.

**IV ದ್ರಾವಣವೇ ಸಾವಿಗೆ ಕಾರಣ:** ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸರಣಿ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಗ್ ಟ್ವಿಸ್ಟ್ ಸಿಕ್ಕಿದ್ದು, ಇಡೀ ಅನಾಹುತಕ್ಕೆ ಗ್ಲೂಕೋಸ್ ಸಹಿತ ಇಂಟ್ರಾವೀನಸ್ (ಐವಿ) ದ್ರಾವಣ ಕಾರಣ ಅನ್ನೋ ವರದಿ ಬಹಿರಂಗವಾಗಿದೆ. ಬಾಣಂತಿಯರ ಸರಣಿ ಸಾವಿನ ಕುರಿತು ತನಿಖೆ ನಡೆಸಲು ನೇಮಕವಾಗಿದ್ದ ತಂಡ ವರದಿಯೊಂದನ್ನು ನೀಡಿದ್ದು, ಹೆರಿಗೆಯಾಗುವ ಗರ್ಭಿಣಿಯರಿಗೆ ಶಸ್ತ್ರ


ಉದಯವಾಹಿನಿ ಚಿತ್ರ

ಚಿಕಿತ್ಸೆ ವೇಳೆ ನೀಡಿದ ದ್ರಾವಣ (ಗ್ಲೂಕೋಸ್) ಕಳಪೆಯಾಗಿತ್ತು ಎಂಬ ವರದಿ ನೀಡಿದೆ ಎಂಬುದಾಗಿ ಉನ್ನತ ಮೂಲಗಳಿಂದ ತಿಳಿದುಬಂದಿದೆ. ದ್ರಾವಣದ ಬಗ್ಗೆ ದೂರು ಬಂದಿರುವುದರಿಂದ ಇಂಟ್ರಾವೀನಸ್ ದ್ರಾವಣ ಬಳಕೆ ಮಾಡದಂತೆ ಈಗಾಗಲೇ ಆರೋಗ್ಯ ಇಲಾಖೆ ಸೂಚನೆ ನೀಡಿದೆ.

ಗ್ಲೂಕೋಸ್ ಬಳಸದಂತೆ ರಾಜ್ಯ ವೈದ್ಯಕೀಯ ಸರಬರಾಜು ನಿಗಮವು ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಪತ್ರ ಬರೆದಿದೆ. ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿನ ಸಾವಿನ ಬಗ್ಗೆ ತನಿಖೆ ನಡೆಸಲು ಸರ್ಕಾರ ತಂಡ ಕಳುಹಿಸಿತ್ತು. ಇದೀಗ ಶಸ್ತ್ರ ಚಿಕಿತ್ಸೆ ವೇಳೆ ಈ ಕಳಪೆ ಐವಿ ದ್ರಾವಣದಿಂದ ದೇಹದಲ್ಲಿ ದಿಢೀರ್ ಬದಲಾವಣೆ, ಅಡ್ಡ ಪರಿಣಾಮಗಳಿಂದ ಸಾವಾಗಿದೆ ಎಂದು ತಂಡ ವರದಿ ಸಲ್ಲಿಕೆ ಮಾಡಿದೆ.

# ಏರ್‌ಪೋರ್ಟ್ ನಿರ್ಮಾಣ ಜಾಗದ ಬಗ್ಗೆ ಜಿ.ಪರಮೇಶ್ವರ್ ಸುಳಿವು

## ಕೆಂಪೇಗೌಡ ಅಂತಾರಾಷ್ಟ್ರಿಯ ವಿಮಾನ ನಿಲ್ದಾಣ ಎರಡು ಟರ್ಮಿನಲ್‌ಗಳನ್ನು ಒಳಗೊಂಡಿದೆ

• ಉದಯವಾಹಿನಿ, ಬೆಂಗಳೂರು

ಕೆಂಪೇಗೌಡ ಅಂತಾರಾಷ್ಟ್ರಿಯ ವಿಮಾನ ನಿಲ್ದಾಣದಿಂದ ಪ್ರತಿನಿತ್ಯ ಸಾವಿರಾರು ಮಂದಿ ಪ್ರಯಾಣಿಕರು ಪ್ರಯಾಣ ಮಾಡುತ್ತಾರೆ. ಇನ್ನು ಇಲ್ಲಿ ಪ್ರಯಾಣಿಕರ ದಟ್ಟಣೆ ನಿಯಂತ್ರಿಸಲು ಟರ್ಮಿನಲ್ 2 ಅನ್ನು ತೆರೆಯಲಾಯಿತು. ಆದರೂ ಕೂಡ ಪ್ರಯಾಣಿಕರ ಸಂಖ್ಯೆ ಮಾತ್ರ ಕಡಿಮೆಯಾಗದೆ, ಹೆಚ್ಚಾಗುತ್ತಲೇ ಇದೆ. ಈ ಹಿನ್ನೆಲೆ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ.

ಕೆಂಪೇಗೌಡ ಅಂತಾರಾಷ್ಟ್ರಿಯ ವಿಮಾನ ನಿಲ್ದಾಣ 2ಟರ್ಮಿನಲ್‌ಗಳನ್ನು ಒಳಗೊಂಡಿದೆ. ಆದರೂ ಪ್ರಯಾಣಿಕರ ದಟ್ಟಣೆ ಹೆಚ್ಚಾಗುತ್ತಲೇ ಇದೆ. ಇದನ್ನು ನಿಯಂತ್ರಣ ಮಾಡಲು ಬೆಂಗಳೂರಿನ ಎರಡನೇ ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ಜಾಗ ಹುಡುಕಾಟದ ಕೆಲಸ ನಡೆಯುತ್ತಲೇ ಇದೆ. ಇದೀಗ ಈ ಬಗ್ಗೆ ಸಚಿವ ಜಿ.ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ. ಮೊದಲಿನಿಂದಲೂ ಕೂಡ ಬೆಂಗಳೂರಿನ ಬಳಿಯಿರುವ ತುಮಕೂರು ಜಿಲ್ಲೆಯಲ್ಲಿ 2ನೇ ವಿಮಾನ ನಿಲ್ದಾಣ ನಿರ್ಮಾಣ ಮಾಡಬೇಕೆನ್ನುವ ಕೂಗು ಕೇಳಿ ಬಂದಿತ್ತು. ಅಲ್ಲದೆ, ಈಗಾಗಲೇ ಹಲವೆಡೆ ಜಾಗ ಗುರುತಿಸಲಾಗಿದ್ದು, ಇದರ ನಡುವೆಯೇ ದಾಬಾಸ್ ಪೇಟೆಯಲ್ಲಿ ನಿರ್ಮಾಣ ಮಾಡಲಾಗುತ್ತದೆ ಎನ್ನುವ ಚರ್ಚೆಗಳು ಜೋರಾಗಿ ನಡೆಯುತ್ತಿವೆ. ಇನ್ನು ಈ ಬಗ್ಗೆ ಸಂತನರಸಪುರದಲ್ಲಿ ಮಾತನಾಡಿದ ಸಚಿವ ಜಿ.ಪರಮೇಶ್ವರ್ ಅವರು, ತುಮಕೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ ಬಗ್ಗೆ ಚರ್ಚೆ ಆಗಿಲ್ಲ. ದಾಬಸ್ ಪೇಟೆ, ನೆಲಮಂಗಲ ಬಳಿ ನಿರ್ಮಾಣ ಮಾಡಲು ಚರ್ಚೆ ನಡೆಯುತ್ತಿದೆ ಎಂದು ಸುಳಿವು ನೀಡಿದರು.



**ಎಂಬಿ ಪಾಟೀಲ್ ಹೇಳಿದ್ದೇನು?**

**ಬೆಂಗಳೂರಿಗರ ತವರು ಮಾತ್ರ ಅಲ್ಲ. ಇದು ಉತ್ತರ ಪ್ರದೇಶ, ಉತ್ತರ ಭಾರತ, ತಮಿಳುನಾಡು, ಆಂಧ್ರ ಪ್ರದೇಶ, ತೆಲಂಗಾಣ ಮತ್ತು ಅದರಾಚೆಗಿನ ವ್ಯಕ್ತಿಗಳನ್ನು ಆಕರ್ಷಿಸುತ್ತಲೇ ಇದೆ ಎಂದು ಸಚಿವ ಎಂಬಿ ಪಾಟೀಲ್ ಹೇಳಿದ್ದಾರೆ. ಅನೇಕ ಯುವಕರು ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಇಲ್ಲಿಗೆ ಬರುತ್ತಾರೆ. ನಾವು ವಲಸಿಗರಲ್ಲಿ ಹೆಚ್ಚಳವನ್ನು ಗಮನಿಸುತ್ತಿದ್ದೇವೆ. ಇದು ನಮ್ಮ ಮೂಲಸೌಕರ್ಯಗಳ ಮೇಲೆ ಒತ್ತಡವನ್ನು ಹೆಚ್ಚಿಸುತ್ತದೆ ಎಂದು ಸಚಿವ ಎಂಬಿ ಪಾಟೀಲ್ ಎಂದು ಹೇಳಿದ್ದಾರೆ ಎಂದು ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ**

**ಬೆಂಗಳೂರು ಜನಸಂಖ್ಯೆ:** ವರ್ಲ್ಡ್ ಪಾಪ್ಯುಲೇಶನ್ ವರದಿ ಪ್ರಕಾರ, ಬೆಂಗಳೂರು ನಗರದ ಜನಸಂಖ್ಯೆಯು 2024ರಲ್ಲಿ 1,40,08,300 ಎಂದು ಅಂದಾಜಿಸಲಾಗಿದೆ. ಇದಕ್ಕೆ ತದ್ವಿರುದ್ಧವಾಗಿ, ಬೆಂಗಳೂರಿನ ಜನಸಂಖ್ಯೆಯು 1950ರಲ್ಲಿ ಕೇವಲ 7,45,999 ಆಗಿತ್ತು. ಇದು ದಶಕಗಳಲ್ಲಿ ಆಗಿರುವ ಗಮನಾರ್ಹ ಜನಸಂಖ್ಯಾ ಬೆಳವಣಿಗೆಯನ್ನು ತೋರಿಸುತ್ತದೆ. ಅಷ್ಟೇ ಅಲ್ಲದೆ, ವರ್ಲ್ಡ್ ಪಾಪ್ಯುಲೇಶನ್ ವರದಿ ಪ್ರಕಾರ, ನಗರದ ಜನಸಂಖ್ಯೆಯು 2025ರ ವೇಳೆಗೆ 18 ಮಿಲಿಯನ್ ತಲುಪಬಹುದು ಎಂದು ಎನ್ನಲಾಗುತ್ತಿದೆ. ಸಂಚಾರ ದಟ್ಟಣೆ ಇಲ್ಲಷ್ಟೇ ಅಲ್ಲ, ಬೇರೆ ಬೇರೆ ನಗರಗಳಲ್ಲೂ ಇವೆ. ಇತ್ತೀಚೆಗೆ ಐಟಿ ಸಚಿವ ಪ್ರಿಯಾಂಕ್ ಖರ್ಗೆ ಸ್ಯಾನ್ ಫ್ರಾನ್ಸಿಸ್ಕೋ ಹೋಗಿದ್ದರು. ಅಲ್ಲಿ ಅವರಿಗೆ ಕಾನ್ಸುಲ್ ಜನರಲ್ ನಿವಾಸಕ್ಕೆ ಡಿನ್ನರ್ ಹೋಗುವುದಕ್ಕೆ ಒಂದೂ ಮುಕ್ಕಾಲು ಗಂಟೆ ಬೇಕಾಯಿತು. ಆದರೂ ಅಲ್ಲಿನ ಜನ ಅದರ ಬಗ್ಗೆ ದೂರುವುದಿಲ್ಲ ಎಂದು ಸಂಚಾರ ದಟ್ಟಣೆ ಸಮಸ್ಯೆ ಹೊರಗೂ ಇದೆ ಎಂಬ ಹೋಲಿಕೆ ನೀಡಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ವೃಷಭ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಮಿಥುನ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ.

**ಕರ್ಕಾಟಕ** ಹಾಸ್ಯ ಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ. ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು.

**ಸಿಂಹ** ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ.

**ಕನ್ಯಾ** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ.

**ತುಲಾ** ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ.

**ವೃಶ್ಚಿಕ** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಆರ್ಥಿಕ ನಿರ್ಬಂಧಗಳನ್ನು ತಪ್ಪಿಸಲು ನಿಮ್ಮ ಬಜೆಟ್‌ಗೆ ಅಂಟಿಕೊಳ್ಳಿ.

**ಧನಸ್ಸು** ಅನಂತ ಚೈತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ.

**ಮಕರ** ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ನೀವು ಅನಿರೀಕ್ಷಿತ ಮೂಲಗಳಿಂದ ಪ್ರಮುಖ ಆಮಂತ್ರಣವನ್ನು ಸ್ವೀಕರಿಸುತ್ತೀರಿ.

**ಕುಂಭ** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು.

**ಮೀನ** ಮುಂದೆ ಒಳ್ಳೆಯ ಸಮಯವಿರುವುದರಿಂದ ಸಂತೋಷದಿಂದಿರಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು.

# ಮದ್ಯ ಅಕ್ರಮ ಮಾರಾಟ: ಪೊಲೀಸ್, ಅಬಕಾರಿ ಅಧಿಕಾರಿಗಳೇ ಭಾಗಿ

## • ಕೌಟುಂಬಿಕ ಸಮಸ್ಯೆಗಳಿಂದ ಬೇಸತ್ತ ಮಹಿಳೆಯರು ಅಕ್ರಮ ಮಾರಾಟ ಬಂದ್ ಮಾಡಿಸುವಂತೆ ರಾಜಕಾರಣಿಗಳಿಗೆ ಮೊರೆ

• ಉದಯವಾಹಿನಿ, ಹುಮನಾಬಾದ್


ಪಟ್ಟಣ ಸೇರಿ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ ರಾಜಾರೋಷವಾಗಿ ನಡೆಯುತ್ತಿದ್ದು, ಮದ್ಯ ಮಾರಾಟದಿಂದ ಉಂಟಾಗುತ್ತಿರುವ ಕೌಟುಂಬಿಕ ಸಮಸ್ಯೆಗಳಿಂದ ಬೇಸತ್ತ ಮಹಿಳೆಯರು ಅಕ್ರಮ ಮಾರಾಟ ಬಂದ್ ಮಾಡಿಸುವಂತೆ ರಾಜಕಾರಣಿಗಳಿಗೆ ಮೊರೆ ಇಡುತ್ತಿದ್ದಾರೆ.'

ಕಾನೂನು ಬಾಹಿರವಾಗಿ ಮದ್ಯ ಮಾರಾಟದಲ್ಲಿ ತೊಡಗಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳ ಬೇಕಾದ ಪೊಲೀಸ್ ಹಾಗೂ ಅಬಕಾರಿ ಇಲಾಖೆಯ ಅಧಿಕಾರಿಗಳು ಮೌನ ವಹಿಸಿದ್ದು ಅಕ್ರಮ ವ್ಯವಹಾರಕ್ಕೆ ಅವರೇ ಸಾಥ್ ನೀಡುತ್ತಿದ್ದಾರೆ' ಎಂದು ಮಹಿಳೆಯರು ಆರೋಪಿಸಿದ್ದಾರೆ.

ಚಿಟಗುಪ್ಪ ತಾಲ್ಲೂಕಿನ ತಾಳಮಡಗಿ ಹಾಗೂ ಕಂದಗೋಳ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ದಂಧೆ ಮಿತಿ ಮೀರಿದೆ. ನಮ್ಮ ಮಕ್ಕಳು ಮದ್ಯದ ಚಟಕ್ಕೆ ಬಿದ್ದು ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳುವುದರ ಜತೆಗೆ ಸಣ್ಣ ವಯಸ್ಸಿನಲ್ಲೇ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ' ಎಂದು ಈ ಗ್ರಾಮಗಳ ಮಹಿಳೆಯರು ಈಚೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ ಅವರನ್ನು ಭೇಟಿ ಮಾಡಿ, ಅಕ್ರಮ ಮದ್ಯ ಮಾರಾಟ ಬಂದ್ ಮಾಡಿಸಬೇಕು ಎಂದು ಮನವಿ ಮಾಡಿದರು.

**ಬೇಸತ್ತ ಮಹಿಳೆಯರ ಆರೋಪ**

ತಾಲ್ಲೂಕಿನ ಯಾವುದೇ ಗ್ರಾಮದಲ್ಲಿ ಕನಿಷ್ಠ 4 ರಿಂದ 5 ಅಕ್ರಮ ಮದ್ಯದ ಮಾರಾಟ ಅಂಗಡಿಗಳಿವೆ. ಅನುಮತಿ ಪಡೆದ ಮದ್ಯದಂಗಡಿಯ ಮಾಲೀಕರೇ ಸುತ್ತಮುತ್ತಲಿನ ಹಳ್ಳಿಗಳಿಗೆ ಅಕ್ರಮ ಮದ್ಯ ಸಾಗಣೆ ಮಾಡಿ ಮಾರಾಟ ಮಾಡುತ್ತಿದ್ದಾರೆ. ಕೆಲವರು ಬಾರ್‌ಗಳಿಂದ ಖರೀದಿಸಿ, ಹಳ್ಳಿಗಳಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಾರೆ. ಹೀಗೆ ಮದ್ಯವು ಸ್ಥಳೀಯವಾಗಿ ಸಿಗುವುದರಿಂದ ಹೆಚ್ಚಿನ ಜನರು ಕುಡಿತಕ್ಕೆ ದಾಸರಾಗುವುದರಿಂದ ಆರೋಗ್ಯದ ಮೇಲೆಯೂ ದುಷ್ಪರಿಣಾಮ ಬೀರುತ್ತಿದೆ' ಎಂದು ಮಹಿಳೆಯರು ಅಳಲು ತೋಡಿಕೊಂಡರು. ಹಳ್ಳಿಗಳಲ್ಲೇ ಎಲ್ಲಾ ಸಮಯದಲ್ಲೂ ಮದ್ಯ ಸಿಗುವುದರಿಂದ



☛ ಉದಯವಾಹಿನಿ ಚಿತ್ರ

ಯುವಕರು ಸೇರಿ ಹೆಚ್ಚಿನ ಜನರು ಕುಡಿತದ ಚಟಕ್ಕೆ ದಾಸರಾಗುವುದರಿಂದ ಚಿಕ್ಕವಯಸ್ಸಿನಲ್ಲೇ ತಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ' ಎಂದು ತಾಳಮಡಗಿ ಗ್ರಾಮದ ಮುಖಂಡ ಸುಧಾಕರ್ ಗಡ್ಡದೊರ ತಿಳಿಸಿದರು.

'ಇತ್ತೀಚೆಗೆ ಗ್ರಾಮೀಣದ ಪ್ರದೇಶಗಳಲ್ಲಿ ದಿನದ 24 ಗಂಟೆಯೂ ಮದ್ಯ ಸಿಗುತ್ತಿರುವುದರಿಂದ ಬಹುತೇಕ ಕೂಲಿ ಕಾರ್ಮಿಕರು ತಮ್ಮ ಒಂದು ದಿನದ ಕೂಲಿ ಹಣದ ಅರ್ಧದಷ್ಟನ್ನು ಮದ್ಯ ಸೇವನೆಗೆ ವಿನಿಯೋಗಿಸುತ್ತಿದ್ದಾರೆ. ಇದರಿಂದಾಗಿ ಮನೆಗಳಲ್ಲಿ ಜಗಳ ಉಂಟಾಗಿ ಇಡೀ ಕುಟುಂಬವೇ ಬೀದಿ ಪಾಲು ಆಗುತ್ತಿದೆ' ಎಂದು ಬಿಜೆಪಿ ಮುಖಂಡ ವಿನಾಯಕ್ ಹಂದಿಕೇರಾ ಅಸಮಾಧಾನ ವ್ಯಕ್ತಪಡಿಸಿದರು. ಹುಮನಾಬಾದ್ ಪಟ್ಟಣದ ರಾಷ್ಟ್ರೀಯ ಪ್ರವಾಸಿ ಮಂದಿರದ ಆವರಣದಲ್ಲಿ ಬಿದ್ದಿರುವ ಮದ್ಯದ ಖಾಲಿ ಬಾಟಲಿಗಳುವಿನಾಯಕ್ ಹಂದಿಕೇರಾ

> ಅಧಿಕಾರಿಗಳು ತಿಂಗಳಲ್ಲಿ ಎರಡೂರು ಕಡೆ ದಾಳಿ ಮಾಡಿ ಪ್ರಕರಣ ದಾಖಲು ಮಾಡುತ್ತಾರೆ. ಈ ದಾಳಿ ಬಗ್ಗೆ ಬಾರ್ ಮತ್ತು ವೈನ್ ಶಾಪ್ ಮಾಲೀಕರಿಗೆ ಮೊದಲೇ ಮಾಹಿತಿ ಇರುತ್ತದೆ. ಪ್ರತಿ ಬಾರ್ ಮತ್ತೆ ವೈನ್ ಶಾಪ್ ಮಾಲೀಕರು ತಿಂಗಳಿಗೆ 2 ರಿಂದ 3 ಪ್ರಕರಣಗಳು ಇಲಾಖೆಗೆ ನೀಡಬೇಕು, ಬಾರ್ ಮತ್ತು ವೈನ್‌ಶಾಪ್‌ನವರು ಅಬಕಾರಿ ಹಾಗೂ ಪೊಲೀಸರಿಗೆ ತಿಂಗಳಿಗೆ ಮಾಮೂಲಿ ನೀಡಲೇಬೇಕು. ಇಲ್ಲದಿದ್ದರೆ ಅಂಥವರ ಮಾಲೀಕರ ವಿರುದ್ಧ ಹೆಚ್ಚು ಪ್ರಕರಣ ದಾಖಲಿಸಿ ಟಾರ್ಗೆಟ್ ಮಾಡುತ್ತಾರೆ. ಇಂಥ ವ್ಯವಸ್ಥೆಯಿಂದಾಗಿಯೇ ಹಳ್ಳಿಗಳಿಗೆ ಅಕ್ರಮವಾಗಿ ಮದ್ಯ ಸಾಗಣೆ ಆಗುತ್ತಿದೆ' ಎಂದು ಹೆಸರು ಹೇಳಲು ಇಚ್ಛಿಸದ ವ್ಯಕ್ತಿಯೊಬ್ಬರು ತಿಳಿಸಿದರು.

### ಕಾಟಾಚಾರದ ದಾಳಿ

ಆರೋಪ ಚಿಟಗುಪ್ಪ ಹಾಗೂ ಹುಮನಾಬಾದ್ ತಾಲ್ಲೂಕಿನಲ್ಲಿ ಅಕ್ರಮ ಮದ್ಯ ಮಾರಾಟ ರಾಜಾರೋಷವಾಗಿ ನಡೆಯುತ್ತಿದೆ. ಆದರೆ ಅಬಕಾರಿ ಅಧಿಕಾರಿಗಳು ಕಾಟಾಚಾರಕ್ಕೆ ಎಂಬಂತೆ ಆಗಾಗ ದಾಳಿ ನಡೆಸಿ ಪ್ರಕರಣ ದಾಖಲಿಸುತ್ತಿದ್ದಾರೆ ಎಂಬ ಆರೋಪವು ಕೇಳಿ ಬಂದಿದೆ.

ಯುವಕಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ದಂಧೆ ಬಂದ್ ಮಾಡಿಸಬೇಕು. ಇಲ್ಲದಿದ್ದರೆ ಬರುವ ದಿನಗಳಲ್ಲಿ ಸಂಬಂಧಪಟ್ಟ ಇಲಾಖೆಯ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ. ರಾಜ್ಯ ಘಟಕದ ಅಧ್ಯಕ್ಷ ಜನರ ಧ್ವನಿ ಸಂಘಟನೆಪರಿಶಿಷ್ಟರ ಬಡಾವಣೆಗಳಲ್ಲಿ ಮದ್ಯ ಮಾರಾಟ ನಿಷೇಧವಿದೆ.

ಆದರೆ ತಾಲ್ಲೂಕಿನ ಬಹುತೇಕ ಗ್ರಾಮಗಳ ಪರಿಶಿಷ್ಟರ ಬಡಾವಣೆಗಳಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದೆ. ಇದಕ್ಕೆ ಜಿಲ್ಲಾಡಳಿತ ಕಡಿವಾಣ ಹಾಕಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.

# ಉದಯ ವಾಹಿನಿ ವರದಿಗೆ ಸ್ಪಂಧಿಸಿದ ಗೃಹ ಇಲಾಖೆ

• ಉದಯವಾಹಿನಿ, ಯಾದಗಿರಿ

ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ಅವರ ನಿರಂತರ ಹೋರಾಟಕ್ಕೆ ಮಣಿದ ರಾಜ್ಯ ಗೃಹ ಇಲಾಖೆ ನೂತನ ಪೊಲೀಸ್ ಠಾಣೆ ಉದ್ಘಾಟನೆಗೆ ಸಜ್ಜಾಗಿದೆ. ಇದೇ ಡಿಸೆಂಬರ್ ನಾಲ್ಕ ರಂದು ಗೃಹ ಸಚಿವ ಜಿ. ಪರಮೇಶ್ವರ ಉದ್ಘಾಟನೆ ಮಾಡಲಿದ್ದಾರೆಂಬ ಮಾಹಿತಿ ಸಿಕ್ಕಿದೆ. ಇದು ಉಮೇಶ್ ಮುದ್ನಾಳ್ ಹೋರಾಟಕ್ಕೆ ಸಿಕ್ಕ ಸ್ಪಂದನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.



ವಾರದೊಳಗೆ ಪೊಲೀಸ್ ಠಾಣೆ ಉದ್ಘಾಟಿಸುವಂತೆ ಮುದ್ನಾಳ್ ಗಡವು

IMPACT ಉದಯ ವಾಹಿನಿ ಫಲಶ್ರುತಿ IMPACT

ಇನ್ನೂ ಳಿದಂತೆ ಹಲವು ಕಟ್ಟಡಗಳು ಕೋಟ್ಯಾಂತರ ವೆಚ್ಚದಲ್ಲಿ ನಿರ್ಮಾಣಗೊಂಡು ಅನೈತಿಕ ಚಟುವಟಿಕೆ ತಾಣವಾಗಿ ನಿಂತಿವೆ. ನಗರಸಭೆ ಕಚೇರಿ, ರಾಚೋಟಿ ವೀರಣ್ಣ ದೇವಸ್ಥಾನದ ಬಳಿಯ ಯಾತ್ರಿ ನಿವಾಸ ಸೇರಿ ಸರ್ಕಿಟ್ ಹೌಸ ಬಳಿಯ ಸರ್ಕಾರಿ ವಸತಿ ನಿಲಯವೂ ಉದ್ಘಾಟನೆ ಆಗಿಲ್ಲ. ಇದು ಸಾಕಷ್ಟು ಖರ್ಚು ಮಾಡಿ ಕಟ್ಟಿರುವ ಕಟ್ಟಡ ಉದ್ಘಾಟನೆ ಆಗದೇ ಇರೋದು ಶೋಚನೀಯ ಸಂಗತಿಯಾಗಿದೆ. ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ಕಟ್ಟಿರುವ ಕಟ್ಟಡದಲ್ಲಿ ಕಚೇರಿ ಮಾಡುವ ಬಯಕೆ ಇಲ್ಲದಿದ್ದರೇ ಬಾಡಿಗೆಗಾದ್ರೂ ನೀಡಿದರೆ ಸರ್ಕಾರದ ಬೊಕ್ಕಸಕ್ಕೆ ಹಣವಾದ್ರೂ ಬರುತ್ತದೆ.

ಆದರೇ ಜಿಲ್ಲಾಡಳಿತ ಹಾಗೂ ಇಲ್ಲಿನ ಜನಪ್ರತಿನಿಧಿಗಳ ನಿಷ್ಕಾಳಜಿಯಿಂದ ಕೋಟ್ಯಾಂತರ ವೆಚ್ಚದಲ್ಲಿ ನಿರ್ಮಾಣವಾದ ಕಟ್ಟಡ ಹಾಳು ಬಿದ್ದಿವೆ. ಇತ್ತ, ವಸತಿ ಶಾಲಾ ವಿದ್ಯಾರ್ಥಿಗಳು ಕೊರೆಯುವ ಚಳಿಯಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸ್ಕೂಲ್, ಕಾಲೇಜಿಗೆ ತೆರಳ್ತಿದ್ದಾರೆ. ಆದಷ್ಟು ಬೇಗನೇ ವಸತಿ ನಿಲಯ ಉದ್ಘಾಟನೆ ಮಾಡಿದರೇ ಗ್ರಾಮೀಣ ಮಕ್ಕಳು ಸೇರಿ ಸಾರ್ವಜನಿಕರಿಗೆ ಅನುಕೂಲ ಆಗಲಿದೆ.

**ಡಿ.4 ಕ್ಕೆ ನೂತನ ನಗರ ಪೊಲೀಸ್ ಠಾಣೆ ಉದ್ಘಾಟನೆ**

### ಸಾರ್ವಜನಿಕರಿಗೆ ಅನುಕೂಲ

ಸರ್ಕಾರದ ಖಜಾನೆ ಲೂಟಿ ಮಾಡಿ ಕಟ್ಟಿರುವ ಕಟ್ಟಡಗಳನ್ನ ಆದಷ್ಟು ಬೇಗ ಬೇಗನೆ ಉದ್ಘಾಟನೆ ಮಾಡದಿದ್ದರೇ ಉಗ್ರ ಹೋರಾಟ ಮಾಡಲಾಗುವುದು. ನೂತನ ಕಟ್ಟಡಗಳು ಉದ್ಘಾಟನೆ ಆದರೇ ವಿದ್ಯಾರ್ಥಿಗಳು, ಸಾರ್ವಜನಿಕರು ಅಧಿಕಾರಿಗಳಿಗೆ ಅನುಕೂಲವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

# ತಾಂಡಾ ಶಾಲೆಗೆ ನ್ಯಾಯಾಧೀಶ ಭೇಟಿ

• ಉದಯವಾಹಿನಿ, ವಡಗೇರಾ



☛ ಉದಯವಾಹಿನಿ ಚಿತ್ರ

ತಾಲ್ಲೂಕಿನ ಬೀರನಕಲ್ ತಾಂಡದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಶುಕ್ರವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ನ್ಯಾಯಾಧೀಶರಾದ ಗೌರವಾನ್ವಿತ ಕೆ. ಮರಿಯಪ್ಪರವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾಮಾಜಿಕ ಹೋರಾಟಗಾರ್ತಿ ರುದ್ರಾಂಬಿಕ ಆರ್. ಪಾಟೀಲ್ .ಚಟ್ನಳ್ಳಿರವರು ಮೇಲ್ಛಾವಣಿ ದುರಸ್ತಿ ಹಾಗೂ ಮೂಲಭೂತ ಸೌಕರ್ಯಗಳು ಒದಗಿಸುವಂತೆ ಪತ್ರಿಕೆ ಹೇಳಿಕೆ ಮೂಲಕ ಮನವಿ ಮಾಡಿಕೊಂಡಿದ್ದರು.

ಶುಕ್ರವಾರ ಭೇಟಿ ನೀಡಿದ ನ್ಯಾಯಾಧೀಶರು ಬಿಸಿ ಊಟದ ವ್ಯವಸ್ಥೆ ಶಾಲಾ ಕೋಣೆ ಶೌಚಾಲಯ ಹಾಗೂ ಕುಡಿಯುವ ನೀರಿನ ಪೂರೈಕೆ ಕುರಿತು ಮಾಹಿತಿ ಪಡೆದರು ಬಿಸಿ ಊಟಕ್ಕೆ ಸಂಬಂಧಿಸಿದಂತೆ ಸ್ವಚ್ಛತೆ ಕಾಪಾಡಿಕೊಳ್ಳಲು ಸಿಬ್ಬಂದಿಗಳಿಗೆ ಹೇಳಿದರು.

ವಿದ್ಯಾರ್ಥಿಗಳೊಂದಿಗೆ ಅವರ ಸಮಸ್ಯೆಗಳ ಕುರಿತು ಚರ್ಚಿಸಿ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸಿ ಕೊಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಗೀತೆಯ ಭೋದನೆ ಇಂದಿಗೂ ಪ್ರಸ್ತುತ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುದ್ದೇಬಿಹಾಳ

ಭಗವಾನ್ ಕೃಷ್ಣನು ಮಹಾಭಾರತದ ಯುದ್ಧಭೂಮಿಯಲ್ಲಿ ಅರ್ಜುನನ ಮನಸ್ಸಿನಲ್ಲಿ ಧರ್ಮ ಮತ್ತು ಯುದ್ಧದ ನಡುವೆ ನಡೆಯುತ್ತಿರುವ ಅಂಧಕಾರವನ್ನು ಗೀತೆಯ ಬೋಧನೆಯ ಮೂಲಕ ವಿವರಿಸಿದನು. ಅದೇ ಬೋಧನೆಗಳನ್ನು ಅರ್ಥಮಾಡಿಕೊಳ್ಳುವ ಮೂಲಕ, ಒಬ್ಬ ವ್ಯಕ್ತಿಯು ಪ್ರಸ್ತುತ ಸಮಯದಲ್ಲೂ ಯಶಸ್ಸನ್ನು ಸಾಧಿಸಬಹುದು ಎಂದು ನಿವೃತ್ತ ದೈಹಿಕ ಶಿಕ್ಷಣಾಧಿಕಾರಿ ಎಸ್ ಬಿ ಚಲವಾದಿ ಹೇಳಿದರು.

ಪಟ್ಟಣದ ಬಿ.ಎಸ್ ಸೆಂಟರಲ್ ಶಾಲೆಯಲ್ಲಿ ಶಿರಸಿಯ ಸೋಂದಾ ಸ್ವರ್ಣವಲ್ಲಿ ಸಂಸ್ಥಾನದ ಯತಿವರೇಣ್ಯರ ಶ್ರೀಮಜ್ಜಗರು ಶಂಕರಾಚಾರ್ಯ ಶ್ರೀಮದ್ ಗಂಗಾಧರೇಶ್ವರ ಸರಸ್ವತಿ ಮಹಾಸ್ವಾಮಿಗಳು ಆಯೋಜಿಸಿರುವ ಭಗವದ್ಗೀತಾ ಅಭಿಯಾನ ಉದ್ದೇಶಿಸಿ ಮಾತನಾಡಿದರು.

> ತನ್ನವರ ವಿರುದ್ಧವೇ ಹೋರಾಡಬೇಕಲ್ಲ ಅಂತ ಯುದ್ಧ ಆರಂಭಕ್ಕೂ ಮುನ್ನ ಹತಾಶನಾದ ಅರ್ಜುನನಿಗೆ ಶ್ರೀಕೃಷ್ಣ ನೀಡಿದ ಉಪದೇಶವಿದು. ಶ್ರೀಕೃಷ್ಣ ಅರ್ಜುನನಿಗೆ ನೀಡಿದ ಈ ಉಪದೇಶ ಇಂದಿಗೂ ಮನುಷ್ಯನ ಜೀವನಕ್ಕೆ ಪ್ರಸ್ತುತ ಎನಿಸುತ್ತೆ. ಹಿಂದೂ ಧರ್ಮದಲ್ಲಿ ಭಗವದ್ಗೀತೆಯ ಪ್ರಾಮುಖ್ಯತೆ ಅನನ್ಯವಾಗಿದೆ
>
> -ಎಸ್ ಬಿ ಚಲವಾದಿ, ನಿವೃತ್ತ ದೈಹಿಕ ಶಿಕ್ಷಣಾಧಿಕಾರಿ

ಈ ವೇಳೆ ಬಿ ಎಸ್ ಸೆಂಟ್ರಲ್ ಸ್ಕೂಲ್‌ನ ಪ್ರಾಚಾರ್ಯರಾದ ರುತ್ ಮಾತನಾಡಿದರು.

ಭಗವದ್ಗೀತೆ ಅಭಿಯಾನ ಕಾರ್ಯಕ್ರಮದಲ್ಲಿ ಜಿಲ್ಲಾ ಭಗವದ್ಗೀತೆ ಅಭಿಯಾನ ಸಮಿತಿಯ ಉಪಾಧ್ಯಕ್ಷ ಬಿ.ಪಿ ಕುಲಕರ್ಣಿ ಶಿಕ್ಷಕರಾದ ಸಾವಿತ್ರಿ ಅಂಬಿಗೇರ ಶಿವಕುಮಾರ್ ಶಾರದಹಳ್ಳಿ, ಸವಿತಾ ರಾಠೋಡ, ವಿದ್ಯಾ ಅಮಾಸೆಗೌಡರ ಶಶಿಕಲಾ ರಾಮೋಡಗಿ, ಲಕ್ಷ್ಮಿ ಬೋಳಶೆಟ್ಟಿ ರಂಜಿತಾ ಹೆಗಡೆ, ತಾಲೂಕ ಭಗವದ್ಗೀತೆ ಸಂಚಾಲಕ ರಾಮಚಂದ್ರ ಹೆಗಡೆ ಉಪಸ್ಥಿತರಿದ್ದರು

# ಜನಸಂಖ್ಯಾ ಸ್ಥಿರತೆ ಶಿಕ್ಷಣ ಕುಟುಂಬ ಯೋಜನಾ ಸೇವಾ ಸೌಲಭ್ಯಗಳ ಮಾಹಿತಿ ಸಮುದಾಯದ ಮನ ಮುಟ್ಟಬೇಕು: ಡಾ.ಅಭಿನವ್ ಡಿ ಎಂ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ನಗರದ ಜಿಲ್ಲಾ ಆಸ್ಪತ್ರೆಯ ಪಕ್ಕದ ತಾಲ್ಲೂಕ್ ಆರೋಗ್ಯ ಅಧಿಕಾರಿಗಳವರ ಸಭಾಂಗಣದಲ್ಲಿ ನೂತನವಾಗಿ ಸೇವೆಗೆ ಸೇರಿದ ನರ್ಸಿಂಗ್ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ನಗರ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ನಮ್ಮ ಕ್ಲಿನಿಕ್ ವೈದ್ಯಾಧಿಕಾರಿಗಳವರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕುಟುಂಬ ಯೋಜನೆಗಳ ಅನುಷ್ಠಾನಾಧಿಕಾರಿಗಳು ನೂತನ ಗರ್ಭ ನಿರೋಧಕಗಳ ಪರಿಚಯ ಕುರಿತು ಕಾರ್ಯಗಾರ ಏರ್ಪಡಿಸಿದ್ದರು.

ಜಿಲ್ಲಾ ಕುಟುಂಬ ಯೋಜನೆ ಅನುಷ್ಠಾನಾಧಿಕಾರಿ ಡಾ. ರೇಖಾ ಮಾತನಾಡಿ ಕುಟುಂಬ ಯೋಜನೆಗಳಲ್ಲಿ ಶಾಶ್ವತ ವಿಧಾನ ಮತ್ತು ತಾತ್ಕಾಲಿಕ ವಿಧಾನಗಳು ಇರುತ್ತದೆ ಶಾಶ್ವತ ವಿಧಾನಗಳಲ್ಲಿ ಮಹಿಳೆಯರಿಗಾಗಿ ಟುಬೆಕ್ಟಮಿ ಲ್ಯಾಪ್ರೋಸ್ಕಪಿಕ್ ಶಸ್ತ್ರಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತದೆ ಅದೇ ರೀತಿ ಪುರುಷರಿಗೆ ವ್ಯಾಸಟಮಿ ಎನ್‌ಎಸ್ ವಿ ಸೇವೆಯನ್ನು ನೀಡಲಾಗುತ್ತದೆ.

ತಾತ್ಕಾಲಿಕ ವಿಧಾನಗಳಲ್ಲಿ ನುಂಗುವ ಗುಳಿಗೆಗಳು ಛಾಯಾ ಮಾತ್ರೆ ಮಾಲಾ ಎನ್ ಮಾತ್ರೆ, ವಂಕಿ ಐ ಯು ಸಿ ಡಿ ಕಾಪರ್ ಟಿ ಅಂತರ ಗರ್ಭ ನಿರೋಧಕ ಚುಚ್ಚುಮದ್ದು ನೀಡಲಾಗುತ್ತದೆ ಪುರುಷರಿಗೆ ನಿರೋದ್ ನೀಡಲಾಗುತ್ತದೆ ಫಲಾನುಭವಿಗಳನ್ನು ಗುರುತಿಸಲು ಅರ್ಹದಂಪತಿಗಳ ದಾಖಲಾತಿಯನ್ನು ಪರಿಶೀಲಿಸಿ ಕುಟುಂಬ ಯೋಜನೆಗಳ ಸೇವೆಗಳ ಅಗತ್ಯವಿರುವವರ ಪಟ್ಟಿಯನ್ನು ತಯಾರಿಸಬೇಕು ಅವರ ಮುಂದೆ ಸೇವಾ ಸವಲತ್ತುಗಳನ್ನು ಪರಿಚಯಿಸಬೇಕು ಅವರು ಮಾಡಿದ ಆಯ್ಕೆಯ ಸೇವೆಯನ್ನು ನೀಡಬೇಕು ಎಂದರು. ತರಬೇತಿ ಕಾರ್ಯದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ವಿನಯ್ ರಾಜ್ ಡಾಕ್ಟರ್ ಕವಿತಾ ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ಶಿಕ್ಷಣ ಒದಗಿಸಿದರು ಕಾರ್ಯಕ್ರಮದಲ್ಲಿ ತಾಲ್ಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್‌ಎಸ್ ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿಮುಗಪ್ಪ ಕುಟುಂಬ ಯೋಜನೆ ವಿಭಾಗದ ಭವ್ಯ, ಶ್ರೀದೇವಿ ಇತರರು ಉಪಸ್ಥಿತರಿದ್ದರು.

> ಜಿಲ್ಲಾ ಆರ್ ಸಿ ಎಚ್ ಅಧಿಕಾರಿ ಡಾಕ್ಟರ್ ಅಭಿನವ್ ಡಿ ಎಂ ಮಾತನಾಡಿ ಜನಸಂಖ್ಯಾ ಸ್ಥಿರತೆಯನ್ನು ಕಾಪಾಡುವುದು ಸರಿಯಾದ ಸಮಯದಲ್ಲಿ ಅರ್ಹ ದಂಪತಿಗಳಿಗೆ ಕುಟುಂಬ ಯೋಜನೆಗಳನ್ನ ತಲುಪಿಸುವುದು ಇಲಾಖೆಯಲ್ಲಿ ದೊರೆಯುವ ಕುಟುಂಬ ಯೋಜನಾ ಸೇವಾ ಸವಲತ್ತುಗಳ ಮಾಹಿತಿ ಶಿಕ್ಷಣದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೂ ಕುಟುಂಬ ಯೋಜನೆಗಳನ್ನು ಪ್ರದರ್ಶಿಸುವ ಮಾಹಿತಿ ಶಿಕ್ಷಣ ಚೌಕವನ್ನು ತೆರೆಯುವುದು ಸರಿಯಾದ ಸಮಯದಲ್ಲಿ ಸರಿಯಾದ ಗರ್ಭ ನಿರೋಧಕ ಬಳಕೆಯ ಆಯ್ಕೆ ಸ್ವಾತಂತ್ರವನ್ನು ಅರ್ಹ ದಂಪತಿಗಳಿಗೆ ಬಿಡಬೇಕು ಇದರಿಂದ ತಾಯಿ ಮರಣವನ್ನು ತಪ್ಪಿಸಬಹುದಾಗಿದೆ -ಡಾ.ಅಭಿನವ್ ಡಿಎಂ, ಜಿಲ್ಲಾ ಆರ್ ಸಿ ಎಚ್ ಅಧಿಕಾರಿ

# ಅಕ್ರಮವಾಗಿ ಸಾಗಿಸುತ್ತಿದ್ದ 16 ಲಕ್ಷ ಮೌಲ್ಯದ ಶ್ರೀಗಂಧ ಜಪ್ತಿ: ಓರ್ವ ಬಂಧನ

• ಉದಯವಾಹಿನಿ, ಬೀದರ್

ಜಿಲ್ಲೆಯ ಪೊಲೀಸರು ಹಾಗೂ ಅರಣ್ಯಾಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಅಕ್ರಮವಾಗಿ ಸಾಗಿಸುತ್ತಿದ್ದ 16 ಲಕ್ಷ ಮೌಲ್ಯದ ಶ್ರೀಗಂಧವನ್ನು ವಶಕ್ಕೆ ಪಡೆದಿದ್ದು, ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ಈ ಘಟನೆ ಬಸವಕಲ್ಯಾಣ ತಾಲ್ಲೂಕಿನ ಸಸ್ತಾಪೂರ್ ಬಂಗ್ಲಾ ಬಳಿ ನಡೆದಿದೆ.ಆರೋಪಿಯನ್ನು ತೆಲಂಗಾಣ ಮೂಲದ ಪಿ.ಕೆ ಭದ್ರುಧಿನ್ ಎಂದು ಗುರುತಿಸಲಾಗಿದೆ. ಗೂಡ್ಸ್ ವಾಹನದಲ್ಲಿ ಶ್ರೀಗಂಧವನ್ನು ಅಕ್ರಮವಾಗಿ ನೆರೆಯ ತೆಲಂಗಾಣದಿಂದ ಮಹಾರಾಷ್ಟ್ರದ ಮುಂಬೈ ನಗರಕ್ಕೆ ಸಾಗಾಟ ಮಾಡುತ್ತಿದ್ದರು. ಈ ವೇಳೆ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸರು ಜಂಟಿ ದಾಳಿ ನಡೆಸಿದ್ದು, ಬರೋಬ್ಬರಿ 16 ಲಕ್ಷ ಮೌಲ್ಯದ ಒಂದು ಕ್ವಿಂಟಾಲ್ ಶ್ರೀಗಂಧದ ತುಂಡುಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಬಸವಕಲ್ಯಾಣ ನಗರ ಠಾಣೆಯ ಪಿಎಸ್‌ಐ ಅಂಬರೀಶ್ ಹಾಗೂ ಅರಣ್ಯಾಧಿಕಾರಿ ಮಹೇಂದ್ರ ನೇತೃತ್ವದಲ್ಲಿ ದಾಳಿ ನಡೆಸಿದ್ದು, ರಕ್ತ ಚಂದನದ ಜೊತೆಗೆ ಅಕ್ರಮವಾಗಿ ಶ್ರೀಗಂಧ ಸಾಗಾಟ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿದ್ದಾರೆ. ಪೊಲೀಸರು ಆರೋಪಿಯನ್ನು ನ್ಯಾಯಾಂಗ ಬಂಧನದಲ್ಲಿರಿಸಿದ್ದು, ಈ ಕುರಿತು ಬಸವಕಲ್ಯಾಣ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಂತ್ರಾಲಯದಲ್ಲಿ ಹುಂಡಿ ಎಣಿಕೆ 31 ದಿನಗಳಲ್ಲಿ 3 ಕೋಟಿ 92 ಲಕ್ಷ ಕಾಣಿಕೆ ಸಂಗ್ರಹ

ಉದಯವಾಹಿನಿ, ರಾಯಚೂರು

ಗುರುರಾಯರ ಸನ್ನಿಧಿ ಮಂತ್ರಾಲಯ ಶ್ರೀರಾಘವೇಂದ್ರ ಸ್ವಾಮಿ ಮಠದಲ್ಲಿ ಕಳೆದ 31 ದಿನಗಳಲ್ಲಿ ಭಕ್ತರಿಂದ ಭಾರೀ ಮಟ್ಟದ ಕಾಣಿಕೆ ಸಂಗ್ರಹವಾಗಿದೆ. ಕಳೆದ 31 ದಿನಗಳ ಕಾಣಿಕೆ ಹುಂಡಿ ಎಣಿಕೆಕಾರ್ಯ ಮುಕ್ತಾಯಗೊಂಡಿದ್ದು, 3,92,58,940 ರೂ. ಕಾಣಿಕೆ ಸಂಗ್ರಹವಾಗಿದೆ. ರಜೆ, ಹಬ್ಬದ ಹಿನ್ನೆಲೆ ಮಂತ್ರಾಲಯ ಮಠಕ್ಕೆ ಕೋಟ್ಯಾಂತರ ರೂಪಾಯಿ ಕಾಣಿಕೆ ಹರಿದು ಬಂದಿದೆ. ಸಂಗ್ರಹವಾದ ಒಟ್ಟು ಕಾಣಿಕೆಯಲ್ಲಿ 3 ಕೋಟಿ 83 ಲಕ್ಷ 93,760 ರೂ. ಕರೆನ್ಸಿ ನೋಟುಗಳು ಹಾಗೂ 8,65,180 ರೂ. ನಾಣ್ಯಗಳು ಸಂಗ್ರಹವಾಗಿವೆ. ಇನ್ನೂ 174 ಗ್ರಾಂ ಚಿನ್ನ, 1270 ಗ್ರಾಂ ಬೆಳ್ಳಿ ಕಾಣಿಕೆ ರೂಪದಲ್ಲಿ ಬಂದಿದೆ. ಕಳೆದ ವರ್ಷ ನವೆಂಬರ್ ತಿಂಗಳ ಕಾಣಿಕೆ ಹುಂಡಿಯಲ್ಲಿ ಒಟ್ಟು 2,86,43,454 ರೂ. ಕಾಣಿಕೆ ಸಂಗ್ರಹವಾಗಿತ್ತು. ಮಂತ್ರಾಲಯ ಮಠದಲ್ಲಿ ನಿನ್ನೆ (ನ.28) ನಡೆಸಲಾದ ಹುಂಡಿ ಎಣಿಕೆ ಕಾರ್ಯ ಮುಕ್ತಾಯವಾಗಿದ್ದು, ಎಣಿಕೆ ಕಾರ್ಯದಲ್ಲಿ ಮಠದ ನೂರಾರು ಸಿಬ್ಬಂದಿ, ಭಜನಾ ಮಂಡಳಿ, ಗುರುಪಾದ ಕರಸೇವಕರು ಭಾಗವಹಿಸಿದ್ದರು.

# ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವು ಪ್ರಕರಣ ತನಿಖೆಯಲ್ಲಿ ಸ್ಫೋಟಕ ಅಂಶ ಬಹಿರಂಗ

• ಉದಯವಾಹಿನಿ, ಬಳ್ಳಾರಿ

ಇತ್ತೀಚಿಗೆ ಬಳ್ಳಾರಿಯ ಜಿಲ್ಲಾಸ್ಪತ್ರೆಯಲ್ಲಿ ಕಳೆದ 15 ದಿನಗಳಲ್ಲಿ ನಾಲ್ವರು ಬಾಣಂತಿಯರು ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ತನಿಖೆಗೆ ರಾಜ್ಯ ಸರ್ಕಾರ ಸೂಚನೆ ನೀಡಿತ್ತು. ತನಿಖೆಯ ವೇಳೆ ಸ್ಫೋಟಕವಾದಂತ ಅಂಶ ಬಯಲಾಗಿದ್ದು, ಸಿಸೇರಿಯನ್ ವೇಳೆ ನೀಡಿದ್ದ IV ಗೂಕೋಸ್' ನಿಂದ ಬಾಣಂತಿಯರು ಮೃತಪಟ್ಟಿದ್ದಾರೆ ಎಂದು ಉನ್ನತ ಮೂಲಗಳಿಂದ ತಿಳಿದುಬಂದಿದೆ. IV ಗ್ಲುಕೋಸ್ ಕಳಪೆ ಗುಣಮಟ್ಟದಿಂದ ಕೂಡಿದೆ. ಆದರೂ, ಕೂಡ ವೈದ್ಯರು ಸಿಸೇರಿಯನ್ ವೇಳೆ IV ಗ್ಲುಕೋಸ್ ನೀಡಿದ್ದರಿಂದ ಬಾಣಂತಿಯರು ಮೃತಪಟ್ಟಿದ್ದಾರೆ ಎಂದು ತನಿಖಾ ತಂಡ ಪತ್ತೆ ಹಚ್ಚಿದೆ. ಹೀಗಾಗಿ, ಇಂಟ್ರಾವೆನಸ್ ದ್ರಾವಣ ಬಳಕೆ ಮಾಡದಂತೆ ಆರೋಗ್ಯ ಇಲಾಖೆ ಎಲ್ಲ ಸರ್ಕಾರಿ ಆಸ್ಪತ್ರೆಗಳಿಗೆ ಸೂಚನೆ ನೀಡಿದೆ. ಕಳೆದ ನವೆಂಬರ್ 9 ರಂದು ಬಳ್ಳಾರಿಯ ಜಿಲ್ಲಾ ಆಸ್ಪತ್ರೆಯಲ್ಲಿ ಒಟ್ಟು ಏಳು ಜನರು ಬಾಣಂತಿಯರು ದಾಖಲಾಗಿದ್ದಾರೆ.

ಈ ಸಂದರ್ಭದಲ್ಲಿ ಅವರ ಆರೋಗ್ಯದಲ್ಲಿ ಏರುಪೇರು ಉಂಟಾಗಿದ್ದು, ಬಳಿಕ ಕಳೆದ 15 ದಿನಗಳಲ್ಲಿ ನಾಲ್ವರು ಬಾಣಂತಿಯರು ಸಾವನ್ನಪ್ಪಿದ್ದಾರೆ.ಬಾಣಂತಿಯರ ಸಾವಿಗೆ ಕಾರಣವೇನು ಎಂಬುವುದನ್ನು ತಿಳಿಯಲು ಸರ್ಕಾರ ತಜ್ಞರ ಸಮಿತಿ ರಚಿಸಿತ್ತು.

# ಕೆಟ್ಟುನಿಂತ ಡಯಾಲಿಸಿಸ್ ಯಂತ್ರ: ರೋಗಿಗಳ ಪರದಾಟ

• ಉದಯವಾಹಿನಿ, ಔರಾದ್

ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳ ಬದುಕಿಗೆ ಆಸರೆಯಾದ ಮೂತ್ರಪಿಂಡ ಕಸಿ (ಡಯಾಲಿಸಿಸ್)ಗೆ ತಾಲ್ಲೂಕು ಕೇಂದ್ರದಲ್ಲಿ ಸೂಕ್ತ ವ್ಯವಸ್ಥೆ ಇಲ್ಲದೇ ತಾಲ್ಲೂಕಿನ ಅನೇಕ ರೋಗಿಗಳು ಪರದಾಡುತ್ತಿದ್ದಾರೆ. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಎರಡು ಡಯಾಲಿಸಿಸ್ ಯಂತ್ರ ಇದ್ದರೂ ಅವು ರೋಗಿಗಳ ಪಾಲಿಗೆ ಇದ್ದೂ ಇಲ್ಲದಂತೆ.

ಒಂದು ಪೂರ್ಣ ಹಾಳಾಗಿ ಮೂಲೆಗೆ ಸೇರಿದರೆ, ಇನ್ನೊಂದು ಸರಿಯಾಗಿ ಕೆಲಸ ಮಾಡದ ಕಾರಣ ರೋಗಿಗಳು ತಾಲ್ಲೂಕು ಬಿಟ್ಟು ಬೇರೆ ಬೇರೆ ಆಸ್ಪತ್ರೆಗೆ ಅಲೆಯಬೇಕಾಗಿದೆ. ನಾನು ಕಳೆದ ನಾಲ್ಕು ವರ್ಷಗಳಿಂದ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದೇನೆ. ಆರಂಭದ ಒಂದು ವರ್ಷ ಹೊರತುಪಡಿಸಿದರೆ ಇಲ್ಲಿ ಸರಿಯಾಗಿ ಡಯಾಲಿಸಿಸ್ ವ್ಯವಸ್ಥೆ ಇಲ್ಲ.ಬೀದರ್ ಸಾರ್ವಜನಿಕ ಆಸ್ಪತ್ರೆಗೆ



☛ ಉದಯವಾಹಿನಿ ಚಿತ್ರ

ಹೋದರೆ ನಮ್ಮಲ್ಲಿ ರೋಗಿಗಳು ಜಾಸ್ತಿ ಇದ್ದಾರೆ. ನಿಮ್ಮ ತಾಲ್ಲೂಕಿಗೆ ಹೋಗಿ ಎಂದು ಅವರು ವಾಪಸ್ ಕಳುಹಿಸುತ್ತಿದ್ದಾರೆ. ಹೀಗಾಗಿ ನಾನು ಬೀದರ್‌ನ ಖಾಸಗಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಮಾಡಿಸಿಕೊಂಡು ಬದುಕುತ್ತಿದ್ದೇನೆ.

> ನಮ್ಮ ಆಸ್ಪತ್ರೆಯಲ್ಲಿನ ಎರಡು ಡಯಾಲಿಸಿಸ್ ಯಂತ್ರಗಳ ಪೈಕಿ ಒಂದು ಕೆಲಸ ಮಾಡುತ್ತಿಲ್ಲ. ಇನ್ನೊಂದು ಕೂಡ ಅಷ್ಟಕಷ್ಟೆ ಇದೆ. ಅದನ್ನು ರಿಪೇರಿ ಮಾಡಿ ನಡೆಸುತ್ತಿದ್ದೇವೆ. ಸದ್ಯ ನಮ್ಮಲ್ಲಿ 9 ರೋಗಿಗಳಿದ್ದು ಅವರಿಗೆ ವಾರದಲ್ಲಿ ಎರಡು ಸಲ ಒಬ್ಬರಿಗೆ ನಾಲ್ಕು ಗಂಟೆ ಡಯಾಲಿಸಿಸ್ ಚಿಕಿತ್ಸೆ ಕೊಡಬೇಕು. ಕೆಲವೊಮ್ಮೆ ಯಂತ್ರ ಕೆಲಸ ಮಾಡದೆ ಇರುವ ರೋಗಿಗಳಿಗೆ ಸಮಸ್ಯೆಯಾಗುತ್ತಿದೆ. ಹೀಗಾಗಿ ಹೊಸದಾಗಿ ಹೆಸರು ನೋಂದಾಯಿಸಿಕೊಂಡ ರೋಗಿಗಳಿಗೆ ಚಿಕಿತ್ಸೆ ಕೊಡಲು ಸಾಧ್ಯವಾಗುತ್ತಿಲ್ಲ -ಡಾ. ಗಾಯತ್ರಿ, ಆರೋಗ್ಯಾಧಿಕಾರಿ

ಬದುಕಿನುದ್ದಕ್ಕೂ ಗಳಿಸಿದ ಹಣವೆಲ್ಲ ಅದಕ್ಕೆ ಹೋಗಿದೆ ಎಂದು ಪಟ್ಟಣದ ಬಳೆ ವ್ಯಾಪಾರಿ ಶಾಮದಮಿಯ್ಯಾ ಗೋಳು ತೋಡಿಕೊಂಡರು. 'ನನಗೆ ಬಿಪಿ-ಶುಗರ್ ಇಲ್ಲ. ಯಾವುದೇ ವ್ಯಸನವೂ ಇಲ್ಲ. ಆದರೂ ನನಗೆ ಕಿಡ್ನಿ ಸಮಸ್ಯೆಯಾಗಿದೆ.

ನಾಲ್ಕು ತಿಂಗಳ ಹಿಂದೆಯೇ ಔರಾದ್ ಸಾರ್ವಜನಿಕ ಆಸ್ಪತ್ರೆಗೆ ಹೋಗಿ ಡಯಾಲಿಸಿಸ್ ಮಾಡಿಸಲು ಹೆಸರು ನೋಂದಾಯಿಸಿದ್ದೇನೆ. ಆದರೆ ಇಂದಿಗೂ ನನಗೆ ಕರೆದಿಲ್ಲ. ಕೇಳಿದರೆ ಯಂತ್ರ ಕೆಟ್ಟು ಹೋಗಿದೆ ಎನ್ನುತ್ತಾರೆ. ಹೀಗಾಗಿ ನನಗೆ ಈಗ ಖಾಸಗಿ ಆಸ್ಪತ್ರೆಯೇ ಅನಿವಾರ್ಯವಾಗಿದೆ' ಎನ್ನುತ್ತಾರೆ ಚಿಂತಾಕಿ ಗ್ರಾಮದ ನಿವಾಸಿ ಬಸವರಾಜ. ಬೇರೆ ಬೇರೆ ತಾಲ್ಲೂಕಿನಲ್ಲಿ ಡಯಾಲಿಸಿಸ್‌ನ ಅತ್ಯುತ್ತಮ ವ್ಯವಸ್ಥೆ ಇದೆ. ನಮ್ಮಲ್ಲಿ ಏಕಿಲ್ಲ ನಮ್ಮ ತಾಲ್ಲೂಕಿನ ಜನಪ್ರತಿನಿಧಿಗಳು ಏನು ಮಾಡುತ್ತಿದ್ದಾರೆ ಎಂದು ಅವರು ಆಕ್ರೋಶ ಹೊರ ಹಾಕಿದ್ದಾರೆ.

# ವನ್ಯಜೀವಿ ಧಾಮದಲ್ಲಿ ಗಣಿಗಾರಿಕೆಗೆ ಅನುಮತಿ ಸಿಗುತ್ತಾ?

## 10 ಕಿ.ಮೀ. ಬದಲಾಗಿ 1 ಕಿ.ಮೀ. ಜಾಗವನ್ನು ಸೂಕ್ಷ್ಮ ಅರಣ್ಯ ಪ್ರದೇಶವನ್ನಾಗಿ ಘೋಷಣೆ: ಪರಿಸರ ಪ್ರೇಮಿಗಳ ವಿರೋಧ

• ಉದಯವಾಹಿನಿ, ಗದಗ

ಆಯುರ್ವೇದ ಔಷಧಿಯ ಸಸ್ಯಕಾಶಿ, ಉತ್ತರ ಕರ್ನಾಟಕದ ಸಹ್ಯಾದ್ರಿ, ಸಾಕಷ್ಟು ಸಂಪನ್ಮೂಲಗಳನ್ನು ಹೊಂದಿರುವ ಕಪ್ಪತಗುಡ್ಡಕ್ಕೆ ಮತ್ತೆ ಕಂಟಕ ಶುರುವಾದಂತಿದೆ. ವನ್ಯಜೀವಿ ಧಾಮ ಕಪ್ಪತ್ತಗುಡ್ಡಕ್ಕೆ ಮತ್ತೆ ಗಣಿ ಕುಳಗಳು ಕನ್ನ ಹಾಕುತ್ತಾರಾ ಎಂಬ ಗಂಭೀರ ಪ್ರಶ್ನೆ ಎದ್ದಿದೆ.

**ಕಪ್ಪತಗುಡ್ಡಕ್ಕೆ ಸಂಕಷ್ಟ**

ಗದಗ ಜಿಲ್ಲೆಯಲ್ಲಿ ಸುಮಾರು 69 ಕಿ.ಮೀ ವ್ಯಾಪ್ತಿವರೆಗೆ ಕಪ್ಪತಗುಡ್ಡ ವ್ಯಾಪಿಸಿದೆ. ವನ್ಯಜೀವಿ ಧಾಮ ಎಂದು ಸಹ ಘೋಷಣೆ ಮಾಡಲಾಗಿದೆ. ಅದರೆ ಸುತ್ತಲಿನ 10 ಕಿ.ಮೀ ಜಾಗವನ್ನು ಸೂಕ್ಷ್ಮ ಅರಣ್ಯ ಪ್ರದೇಶ ಎಂದು ಘೋಷಿಸಲಾಗಿದೆ. ಈಗ 10 ಕಿ.ಮೀ. ಬದಲಾಗಿ 1 ಕಿ.ಮೀ ಜಾಗವನ್ನು ಸೂಕ್ಷ್ಮ ಅರಣ್ಯ ಪ್ರದೇಶ ಎಂದು ಘೋಷಿಸಲು ಸರ್ಕಾರ ಮುಂದಾಗಿದೆ. ಈ ಬಗ್ಗೆ ಕೇಂದ್ರ

### ಅರಣ್ಯ ಸಚಿವಾಲಯಕ್ಕೆ ಮನವಿ

ಜಯಕರ್ನಾಟಕ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ಹವ್ಹಾಣ ನೇತೃತ್ವದಲ್ಲಿ ಕಪ್ಪತಗುಡ್ಡ ಉಳಿಯುವಿಕೆಗಾಗಿ ಆಗ್ರಹಿಸಿ, ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ಮಾಡಲಾಯಿತು. ಯಾವುದೇ ಕಾರಣಕ್ಕೂ ಇಲ್ಲಿ ಗಣಿಗಾರಿಕೆ ಸೇರಿದಂತೆ ಯಾವುದಕ್ಕೂ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರ ಹಾಗೂ ಕೇಂದ್ರ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಕ್ಕೆ ಮನವಿ ಸಲ್ಲಿಸಿದರು.



☛ ಉದಯವಾಹಿನಿ ಚಿತ್ರ

ಪರಿಸರ, ಅರಣ್ಯ ಇಲಾಖೆ ಹಾಗೂ ಹವಾಮಾನ ಸಚಿವಾಲಯ ಅಧಿಸೂಚನೆ ಹೊರಡಿಸಿದೆ. ಇದಕ್ಕೆ ಯಾರಾದರೂ ಪರ, ವಿರೋಧ ಬಗ್ಗೆ ಅರ್ಜಿ ಸಲ್ಲಿಸಲು 30 ದಿನಗಳ ಕಾಲಾವಕಾಶ ನೀಡಿದೆ. ಸಾರ್ವಜನಿಕರ ಪ್ರತಿಕ್ರಿಯೆ ನೀಡಲು ನ. 30 ಕೊನೆಯ ದಿನವಾಗಿದೆ.


ಅಧಿಸೂಚನೆ ಹೊರಡಿಸಿ ಈಗಾಗಲೇ 28 ದಿನಗಳು ಕಳೆದಿವೆ. ಈಗ ಎರಡು ದಿನ ಬಾಕಿ ಇರುವಾಗ ವಿಷಯ ಪ್ರಕಟವಾಗಿದೆ. ಇದರಿಂದ ಪರಿಸರ ಪ್ರೇಮಿಗಳಲ್ಲಿ ಆತಂಕ ಶುರುವಾಗಿದೆ. ಸೂಕ್ಷ್ಮ ಅರಣ್ಯ ಪ್ರದೇಶ ವ್ಯಾಪ್ತಿ ಕಡಿಮೆಗೊಳಿಸಿರುವುದರಿಂದ ಕಪ್ಪತ್ತಗುಡ್ಡಕ್ಕೆ ಗಂಡಾಂತರ ಎದುರಾಗಲಿದೆ. ಇಲ್ಲಿ ಮತ್ತೆ ಅದಿರು, ಕಣಿಜ ನಿಕ್ಷೇಪ ಹೀಗೆ ಅನೇಕ ಗಣಿಗಾರಿಕೆಗೆ ಅವಕಾಶ ಕೊಡಲಾಗುತ್ತದೆ.

> ಈಗ ಕಪ್ಪತಗುಡ್ಡ ವ್ಯಾಪ್ತಿಯ ಸುತ್ತಲು ಡೀಮ್ಡ್ ಅರಣ್ಯ ಪ್ರದೇಶವಿದೆ. ಕಪ್ಪತಗುಡ್ಡ ಪ್ರದೇಶದಲ್ಲಿ ಗಣಿಗಾರಿಕೆ ಮಾಡಬೇಕಾದರೆ ಕೇಂದ್ರ ವನ್ಯಜೀವಿ ಮಂಡಳಿ, ಪರಸರ ಇಲಾಖೆ ಅವಕಾಶ ನೀಡಬೇಕು. ಜೊತೆಗೆ ರಾಜ್ಯ ಸಚಿವ ಸಂಪುಟದ ಅನುಮತಿ ಬೇಕು. ಸೂಕ್ಷ್ಮ ಅರಣ್ಯ ಪ್ರದೇಶ ವ್ಯಾಪ್ತಿ ಸುಪ್ರೀಂಕೋರ್ಟ್ ಆದೇಶದ ಪ್ರಕಾರ ಕಡಿಮೆಗೊಳಿಸಲಾಗಿದೆ. ಸಂಘಟಕರು ಕೊಟ್ಟ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತೇವೆ -ಗೋವಿಂದರೆಡ್ಡಿ, ಡಿಸಿ

**ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ**

ಕಪ್ಪತ್ತಗುಡ್ಡ ಹಸಿರು ಉಳಿಬೇಕು. ಈ ನಿಟ್ಟಿನಲ್ಲಿ ಚರ್ಚೆ ಮಾಡಿ, ಸೂಕ್ಷ್ಮ ಪ್ರದೇಶ ವ್ಯಾಪ್ತಿ ಹೆಚ್ಚಿಸಬೇಕು. ಯಾವುದೇ ಕಾರಣಕ್ಕೂ ವಿಸ್ತೀರ್ಣ ಕಡಿಮೆ ಮಾಡಬಾರದು ಎಂದು ಪರಿಸರ ಪ್ರೇಮಿಗಳು ಆಗ್ರಹಿಸಿದ್ದಾರೆ.

ಕಪ್ಪತಗುಡ್ಡದಲ್ಲಿ ಮಣ್ಣು ಗಣಿಗಾರಿಕೆ, ಚಿನ್ನದ ಗಣಿಗಾರಿಕೆ ನಡೆಸಲು ಹಲವು ಕಂಪನಿಗಳು ಹುನ್ನಾರ ನಡೆಸಿವೆ. ಸದ್ಯ 10 ಕಿ.ಮಿ ವ್ಯಾಪ್ತಿಯ ಒಳಗಾಗಿ ಯಾವುದೇ ಗಣಿಗಾರಿಕೆಗೆ ಅವಕಾಶ ನೀಡುವಂತಿಲ್ಲ. ಆದರೆ ಗಣಿ ಕುಳಗಳು, ಭೂಗಳ್ಳರು, ಬಂಡವಾಳಶಾಹಿಗಳ ಒತ್ತಡಕ್ಕೆ ಮಣಿದು ವಿಸ್ತೀರ್ಣ ಕುಗ್ಗಿಸುವ ಪ್ರಯತ್ನ ನಡೆಯುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.



# ಮಗಳೊಂದಿಗಿನ ಮುದ್ದಾದ ಫೋಟೋ ಹಂಚಿಕೊಂಡ ಮಿಲನಾ

ಲವ್ ಮಾಕ್ಟೈಲ್' ಬೆಡಗಿ ಮಿಲನಾ ನಾಗರಾಜ್ ಅವರು ಮತ್ತೆ ಸಿನಿಮಾ ಕೆಲಸಗಳಲ್ಲಿ ಬ್ಯುಸಿಯಾಗಿದ್ದಾರೆ. ಬ್ರೇಕ್ ಸಿಕ್ಕ ಬೆನ್ನಲ್ಲೇ ಮಗಳ ಜೊತೆ ಮುದ್ದಾದ ಫೋಟೋವೊಂದನ್ನು ಮಾಡಿಸಿದ್ದಾರೆ. ಮಗಳು 'ಪರಿ' ಜೊತೆಗಿನ ಚೆಂದದ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮಗಳ ಕೆನ್ನೆ ಮೇಲೆ ಮಿಲನಾ ಮುಖವಿಟ್ಟು ಮುದ್ದಾದ ನಗು ಬೀರಿದ್ದಾರೆ. ಸದ್ಯ ಮಗಳ ಜೊತೆಗಿನ ಹಂಚಿಕೊಂಡಿರುವ ನಟಿಯ ಫೋಟೋ ನೋಡಿ, 'ನಿಮ್ಮ ಮಗಳಿಗೆ ದೃಷ್ಟಿ ತೆಗೆಯಿರಿ' ಎಂದು ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ಸೆಪ್ಟೆಂಬರ್‌ನಲ್ಲಿ ಮುದ್ದಾದ ಹೆಣ್ಣು ಮಗುವಿಗೆ ನಟಿ ಜನ್ಮ ನೀಡಿದರು. ಮಗಳಿಗೆ 'ಪರಿ' ಎಂದು ಮಿಲನಾ ದಂಪತಿ ಹೆಸರಿಟ್ಟಿದ್ದಾರೆ. ಅಂದಹಾಗೆ, ಹಲವು ವರ್ಷಗಳು ಪ್ರೀತಿಸಿ 2021ರಲ್ಲಿ ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಫೆ.14ರಂದು ಮದುವೆಯಾದರು. ಇನ್ನೂ ಚಾರ್ಲಿ, ಮಿಸ್ಟರ್ ಬ್ಯಾಚುಲರ್, ನಮ್ ದುನಿಯಾ ನಮ್ ಸ್ಟೈಲ್, ಲವ್ ಬರ್ಡ್ಸ್, ಕೌಸಲ್ಯ ಸುಪ್ರಜಾ ರಾಮ, 'ಲವ್ ಮಾಕ್ಟೈಲ್', 'ಲವ್ ಮಾಕ್ಟೈಲ್ 2 ಸಿನಿಮಾಗಳಲ್ಲಿ ಮಿಲನಾ ಮತ್ತು ಡಾರ್ಲಿಂಗ್ ಕೃಷ್ಣ ಜೊತೆಯಾಗಿ ನಟಿಸಿದ್ದಾರೆ. ''ಲವ್ ಮಾಕ್ಟೈಲ್ 3' ಸಿನಿಮಾ ಬಗ್ಗೆ ಸದ್ಯದಲ್ಲೇ ಅಪ್‌ಡೇಟ್ ಸಿಗಲಿದೆ.



# ಅಲ್ಲು ಅರ್ಜುನ್ ರಶ್ಮಿಕಾ ಮಂದಣ್ಣ ಸಿನಿಮಾಗೆ ಸಿಕ್ತು U/A ಸರ್ಟಿಫಿಕೇಟ್


ಐಕಾನ್ ಸ್ಟಾರ್ ಅಲ್ಲು ಅರ್ಜುನ್ , ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಚಿತ್ರಕ್ಕೆ ಕೇಂದ್ರೀಯ ಚಲನಚಿತ್ರ ಪ್ರಮಾಣೀಕರಣ ಮಂಡಳಿ ಪ್ರಮಾಣಪತ್ರ ವಿತರಿಸಿದೆ. ಬಿಡುಗಡೆಗೆ ಕೆಲವೇ ದಿನಗಳು ಬಾಕಿಯಿದ್ದು, ಇದೀಗ ಚಿತ್ರಕ್ಕೆ U/A ಪ್ರಮಾಣ ಪತ್ರ ನೀಡಲಾಗಿದೆ. 'ಪುಷ್ಪ 2' ಕಳ್ಳಸಾಗಣೆದಾರರ ಸಿನಿಮಾ ಆಗಿರುವ ಕಾರಣ ಕೆಲವು ಸಂಭಾಷಣೆಗಳು ಮತ್ತು ದೃಶ್ಯಗಳನ್ನು ಸಹ ಬದಲಾಯಿಸಾಗಿದೆ ಎನ್ನಲಾಗುತ್ತಿದೆ. ಇದೇ ಕಾರಣಕ್ಕೆ ಯಾವುದೇ ಹೆಚ್ಚಿನ ಕಟ್‌ಗಳು ಇಲ್ಲದೆ ಯು/ಎ ಪ್ರಮಾಣ ಪತ್ರವನ್ನು ಸಿನಿಮಾಕ್ಕೆ ನೀಡಲಾಗಿದೆ. ಇನ್ನೂ ಸಿನಿಮಾ ರಿಲೀಸ್‌ಗೂ ಮುನ್ನು ಶ್ರೀಲೀಲಾ ಸೊಂಟ ಬಳುಕಿಸಿರುವ 'ಕಿಸ್ಸಿಕ್' ಸಾಂಗ್ ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್‌ನಲ್ಲಿದೆ. ಪುಷ್ಪರಾಜ್, ಶ್ರೀವಲ್ಲಿ ಜೋಡಿ ನೋಡಲು ಮತ್ತು ಶ್ರೀಲೀಲಾ ಐಟಂ ಡ್ಯಾನ್ಸ್ ಕಣ್ತುಂಬಿಕೊಳ್ಳಲು ಅಭಿಮಾನಿಗಳು ಎದುರು ನೋಡುತ್ತಿದ್ದಾರೆ. ಇನ್ನೂ 'ಪುಷ್ಪ ಪಾರ್ಟ್ 3' ಬರುವ ಬಗ್ಗೆಯೂ ಹಿಂಟ್ ಸಿಕ್ಕಿದೆ. ಇದನ್ನೂ ಕೇಳಿ ಕೂಡ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಸುಕುಮಾರ್ ನಿರ್ದೇಶನದ 'ಪುಷ್ಪ 2' ಸಿನಿಮಾ ಡಿ.5ಕ್ಕೆ ಬಹುಭಾಷೆಗಳಲ್ಲಿ ರಿಲೀಸ್ ಆಗುತ್ತಿದೆ. ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಶ್ರೀಲೀಲಾ, ಡಾಲಿ ಧನಂಜಯ, ಅನಸೂಯ, ಫಹಾದ್ ಫಾಸಿಲ್ ಸೇರಿದಂತೆ ಅನೇಕರು ನಟಿಸಿದ್ದಾರೆ.



# ಸಮಂತಾ ತಂದೆ ಜೋಸೆಫ್ ಪ್ರಭು ವಿಧಿವಶ

ಸೌತ್ ನಟಿ ಸಮಂತಾ ರುತ್ ಪ್ರಭು ಅವರ ತಂದೆ ಜೋಸೆಫ್ ಪ್ರಭು ಅವರು (ನ.29) ವಿಧಿವಶರಾಗಿದ್ದಾರೆ. ದುಃಖದ ಈ ವಿಚಾರವನ್ನು ಸ್ವತಃ ನಟಿ ಇನ್ಸ್ಟಾಗ್ರಾಂ ಖಾತೆಯಲ್ಲಿ ಅಧಿಕೃತವಾಗಿ ತಿಳಿಸಿದ್ದಾರೆ. 'ಮತ್ತೆ ನಾವು ಸಿಗವವರೆಗೆ ಅಪ್ಪ' ಎಂದು ಸಮಂತಾ ಅವರು ಇನ್ಸ್ಟಾಗ್ರಾಂ ಸ್ಟೋರಿಯಲ್ಲಿ ಪೋಸ್ಟ್ ಮಾಡಿದ್ದಾರೆ. ಜೊತೆಗೆ, ಒಡೆದ ಹೃದಯದ ಎಮೋಜಿ ಬಳಸಿದ್ದಾರೆ. ಹಲವು ದಿನಗಳಿಂದ ಅನಾರೋಗ್ಯದಿಂದ ನಟಿಯ ತಂದೆ ಬಳುತ್ತಿದ್ದರು. ಇದೀಗ ನಟಿಯ ತಂದೆಯ ನಿಧನಕ್ಕೆ ಆಪ್ತರು, ಅಭಿಮಾನಿಗಳು ಸಂತಾಪ ಸೂಚಿಸಿದ್ದಾರೆ. ಅಂದಹಾಗೆ, ಸಿನಿಮಾಗಳಲ್ಲಿ ನಟಿ ಅದಷ್ಟೇ ಬ್ಯುಸಿಯಿದ್ದರೂ ಕೂಡ ಕುಟುಂಬದ ಬೆಂಬಲವನ್ನು ನೆನೆಯುತ್ತಿದ್ದರು.


ಸಮಂತಾ ಸ್ಟಾರ್ ನಟಿಯಾಗಿ ಗೆದ್ದಿರೋದ್ದಕ್ಕೆ ಅವರ ಕುಟುಂಬದ ಬೆಂಬಲ ಸಾಕಕ್ಷಿದೆ. ನಾಗಚೈತನ್ಯ ಜೊತೆ ಸಮಂತಾ ಡಿವೋರ್ಸ್ ಪಡೆದುಕೊಂಡಿದ್ದ ಸಂದರ್ಭದಲ್ಲಿ ತಂದೆ ಜೋಸೆಫ್ ಬೇಸರ ಮಾಡಿಕೊಂಡಿದ್ದರು. ಈ ನೋವಿನಿಂದ ಹೊರಬರಲು ಸಾಕಷ್ಟು ಸಮಯ ಹಿಡಿದಿತ್ತು.



# ಮತ್ತೆ ಹಾಟ್ ಅವತಾರ ತಾಳಿದ ಟೋಬಿ ಬೆಡಗಿ ಚೈತ್ರಾ

ಟೋಬಿ' ಬ್ಯೂಟಿ ಚೈತ್ರಾ ಆಚಾರ್ ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಮತ್ತೆ ಹಾಟ್ ಅವತಾರ ತಾಳಿರೋದು ಪಡ್ಡೆಹುಡುಗರ ನಿದ್ದೆ ಕೆಡಿಸಿದೆ. ಸಖತ್ ಬೋಲ್ಡ್ ಆಗಿರೋ ಫೋಟೋಶೂಟ್‌ವೊಂದನ್ನು ನಟಿ ಹಂಚಿಕೊಂಡಿದ್ದಾರೆ. ಕಪ್ಪು ಬಣ್ಣದ ಲಾಂಗ್ ಡ್ರೆಸ್‌ನಲ್ಲಿ ನಟಿ ಹಾಟ್ ಆಗಿ ಕ್ಯಾಮೆರಾ ಕಣ್ಣಿಗೆ ಪೋಸ್ ನೀಡಿದ್ದಾರೆ.

ವಿವಿಧ ಭಂಗಿಯಲ್ಲಿ ನಟಿ ನಿಂತಿರುವ ಲುಕ್ ನೋಡಿ ಪಡ್ಡೆಹುಡುಗರು ಸೈಕ್ ಆಗಿದ್ದಾರೆ. ನಟಿಯ ಅವತಾರಕ್ಕೆ ಹಾಟ್, ಸೆಕ್ಸಿ, ಬ್ಯೂಟಿಫುಲ್ ಎಂದೆಲ್ಲಾ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಈ ಹಿಂದೆ ಕೂಡ ನಟಿ ರವಿಕೆ ಧರಿಸಿದೇ ಸೀರೆಯುಟ್ಟ ಫೋಟೋವೊಂದನ್ನು ಹಂಚಿಕೊಂಡು ಇಂಟರ್‌ನೆಟ್‌ಗೆ ಬೆಂಕಿ ಹಚ್ಚಿದ್ದರು. ಆ ಫೋಟೋಶೂಟ್ ಸೋಶಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡಿತ್ತು. ಇವರನ್ನು ಕನ್ನಡದ ಆಲಿಯಾ ಭಟ್ ಎಂದು ಫ್ಯಾನ್ಸ್ ಬಣ್ಣಿಸಿದ್ದಾರೆ. ಇನ್ನೂ ಕನ್ನಡತಿ ಚೈತ್ರಾ, ತಮಿಳಿನ ಎರಡು ಬಂಪರ್ ಆಫರ್‌ಗಳನ್ನು ಬಾಚಿಕೊಂಡಿದ್ದಾರೆ. ಸ್ಟಾರ್ ನಟ ಸಿದ್ಧಾರ್ಥ್‌ಗೆ ನಾಯಕಿಯಾಗಿ ಚೈತ್ರಾ, ನಟಿಸುತ್ತಿದ್ದಾರೆ. ಕನ್ನಡದ ಜೊತೆಗೆ ಪರಭಾಷೆಗಳಿಂದ ನಟಿಗೆ ಅವಕಾಶಗಳು ಅರಸಿ ಬರುತ್ತಿವೆ. ಸಪ್ತಸಾಗರದಾಚೆ ಎಲ್ಲೋ, 'ಟೋಬಿ' ಸಿನಿಮಾದಲ್ಲಿ ನಟಿಸಿದ ಮೇಲೆ ಚೈತ್ರಾ, ಆಚಾರ್‌ಗೆ ಬೇಡಿಕೆ ಜಾಸ್ತಿಯಾಗಿದೆ. ರಕ್ಷಿತ್ ಶೆಟ್ಟಿ ಮತ್ತು ರಾಜ್ ಬಿ ಶೆಟ್ಟಿಗೆ ನಾಯಕಿಯಾಗಿ ಅದ್ಭುತವಾಗಿ ನಟಿಸಿದರು. 2019ರಲ್ಲಿ 'ಮಹಿರಾ' ಸಿನಿಮಾದ ಮೂಲಕ ಚೈತ್ರಾ, ಆಚಾರ್ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು.



# ಫ್ಯಾನ್ಸ್‌ಗೆ ಸಿಗಲಿದೆ ಜೈಲರ್ ಟೀಮ್‌ನಿಂದ ಗುಡ್ ನ್ಯೂಸ್

ಕಾಲಿವುಡ್‌ನ ಸೂಪರ್ ಸ್ಟಾರ್ ರಜನಿಕಾಂತ್ ಅವರು ಡಿ.12ರಂದು 74ನೇ ವರ್ಷದ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿದ್ದಾರೆ. ಇದರ ನಡುವೆ 'ಜೈಲರ್' ಟೀಮ್ ಫ್ಯಾನ್ಸ್‌ಗೆ ಜೈಲರ್ 2' ಬಗ್ಗೆ ಅಪ್‌ಡೇಟ್ ಕೊಡೋದಾಗಿ ಸುಳಿವು ನೀಡಿದೆ.

ಡಿ.12ರಂದು ರಜನಿಕಾಂತ್ ಸಿನಿಮಾ ಬಗ್ಗೆ ಬಿಗ್ ನ್ಯೂಸ್ ಹೊರ ಬೀಳಲಿದೆ. ಡಿ.12 ಅಭಿಮಾನಿಗಳ ಪಾಲಿಗೆ ಹಬ್ಬ. ನೆಚ್ಚಿನ ನಟ ತಲೈವಾಗೆ ಹುಟ್ಟುಹಬ್ಬದ ಸಂಭ್ರಮವಾಗಿದೆ. ಇದೀಗ 'ಜೈಲರ್' ನಿರ್ದೇಶಕ ನೆಲ್ಸನ್ ರಜನಿಕಾಂತ್, ಶಿವಣ್ಣ, ಜಾಕಿ ಶ್ರಾಫ್, ಮೋಹನ್ ಲಾಲ್ ಸೇರಿದಂತೆ ಅನೇಕರ ಪೋಸ್ಟರ್ ಅನ್ನು ಮತ್ತೊಮ್ಮೆ ಶೇರ್ ಮಾಡಿ ಕುತೂಹಲ ಮೂಡಿಸಿದ್ದಾರೆ. ಅದಷ್ಟೇ ಅಲ್ಲ, ಈ ಮೂಲಕ ಪಾರ್ಟ್ 2ನಲ್ಲಿ ಈ ಪಾತ್ರಗಳು ಕಂಟಿನ್ಯೂ ಆಗುವ ಸೂಚನೆ ಕೂಡ ನೀಡಿದ್ದಾರೆ. ಮೂಲಗಳ ಪ್ರಕಾರ, ಡಿ.5ರಂದು 'ಜೈಲರ್ ಪಾರ್ಟ್ 2'ರ ಪ್ರೋಮೋ ನಡೆಯಲಿದ್ದು, ಡಿ.12ರಂದು ತಲೈವಾ ಬರ್ತ್‌ಡೇಗೆ ರಿಲೀಸ್ ಮಾಡುವ ಪ್ಲ್ಯಾನ್ ಚಿತ್ರತಂಡಕ್ಕಿದೆ ಎನ್ನಲಾಗಿದೆ. ಈ ಕುರಿತು ಚಿತ್ರತಂಡ ಅಧಿಕೃತ ಅಪ್‌ಡೇಟ್ ನೀಡುವವರೆಗೂ ಕಾದುನೋಡಬೇಕಿದೆ. ಸದ್ಯ ಮತ್ತೊಮ್ಮೆ 'ಜೈಲರ್' ಸಿನಿಮಾದ ಫೋಟೋಸ್ ಶೇರ್ ಮಾಡಿ ಹಿಂಟ್ ಪಾರ್ಟ್ 2 ಕುರಿತು ಕೊಟ್ಟಿರೋದ್ದಕ್ಕೆ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

# ಅಂತರಾಷ್ಟ್ರೀಯ ಕ್ರಿಕೆಟ್ ಮೈದಾನ ನಿರ್ಮಾಣ ಆರಂಭ

ಜಿಲ್ಲೆಗೊಂದು ಕ್ರಿಕೆಟ್ ಕ್ರೀಡಾಂಗಣ ಬೇಕು ಎನ್ನುವುದು ಹಲವು ದಶಕಗಳ ಬೇಡಿಕೆಯಾಗಿತ್ತು. ಕೊನೆಗೂ ಆ ಬೇಡಿಕೆ ಈಡೇರುವ ಕಾಲ ಸನ್ನಿಹಿತವಾಗಿದೆ. ಮಡಿಕೇರಿ ತಾಲ್ಲೂಕಿನ ಪಾಲೆಮಾಡು ಗ್ರಾಮದ ಬಳಿ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನ ಬಳಿ ತಲೆ ಎತ್ತುತ್ತಿದೆ. ಈಗಾಗಲೆ ಮೈದಾನ ನಿರ್ಮಾಣ ಕಾಮಗಾರಿ ಆರಂಭವಾಗಿದೆ.

ಮೈದಾನ ನಿರ್ಮಾಣಕ್ಕೆ ಜಿಲ್ಲಾಡಳಿತ 12 ಎಕರೆ ಜಾಗ ನೀಡಿದೆ. ಹಿಮಾಚಲ ಪ್ರದೇಶದ ಧರ್ಮಶಾಲಾ ಮಾದರಿಯಲ್ಲಿ ಈ ಮೈದಾನ ನೈಸರ್ಗಿಕವಾಗಿ ತಲೆ ಎತ್ತಲಿದೆ.

ವಿಶೇಷ ಅಂದರೆ, ಈ ಮೈದಾನ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣಕ್ಕಿಂತ ತುಸು ದೊಡ್ಡದಾಗಿರಲಿದೆ. 50 ಕೋಟಿ ರೂ. ವೆಚ್ಚದಲ್ಲಿ ಇಲ್ಲಿ ಮೈದಾನ ನಿರ್ಮಾಣವಾಗುತ್ತಿದೆ. ಬೆಟ್ಟವನ್ನು ಅರ್ಧ ಸಮತಟ್ಟುಗೊಳಿಸಿ ಮೈದಾನ ನಿರ್ಮಾಣ ಮಾಡಲಾಗುತ್ತಿದೆ. ಮೈದಾನ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಮೈದಾನ ನಿರ್ಮಾಣ ಜಾಗದಲ್ಲಿ ಸ್ಮಶಾನವಿದೆ, ಯಾವುದೇ ಕಾರಣಕ್ಕೂ ಮೈದಾನ ಆಗಲು ಬಿಡುವುದಿಲ್ಲ ಎಂದು ಪ್ರತಿಭಟನೆ ಮಾಡಿದ್ದರು. ಇದು ಕೂಡ ಮೈದಾನ ನಿರ್ಮಾಣ ಕಾಮಗಾರಿ ನೆನಗುದಿಗೆ ಬೀಳಲು ಕಾರಣವಾಗಿತ್ತು. ಆದರೆ, ಹಿಂದಿನ ಜಿಲ್ಲಾಧಿಕಾರಿ ಡಾ. ಬಿಸಿ ಸತೀಶ್ ಸಭೆ ಕರೆದು ಒಂದು ಎಕರೆ ಜಾಗವನ್ನ ಸ್ಮಶಸಾನಕ್ಕೆ ಮೀಸಲಿಟ್ಟು ಉಳಿದ ಜಾಗವನ್ನ ಕ್ರಿಕೆಟ್ ಮೈದಾನಕ್ಕೆ ಬಳಸಿಕೊಳ್ಳುವಂತೆ ಸೂಚಿಸಿದ್ದರು. ಆದರೆ, ಪೈಸಾರಿ ನಿವಾಸಿಗಳು ಮಾತ್ರ ತಮಗೆ ಎರಡು ಎಕರೆ ಜಾಗ ಬೇಕು ಅಂತ ಹಠಕ್ಕೆ ಬಿದ್ದಿದ್ದರು. ಆದರೆ, ಕೆಎಸ್ಸಿಎ ಸಿಬ್ಬಂದಿ ಮಾತ್ರ ಏನೇ ಆಗಲಿ ನಾವು ಮೈದಾನ ನಿರ್ಮಿಸಿಯೇ ತೀರುತ್ತೇವೆ ಅಂತ ಘೋಷಿಸಿದ್ದಾರೆ.



ಇದೀಗ ಎಲ್ಲಾ ಅಡೆತಡೆಗಳು ನಿವಾರಣೆಯಾಗಿದ್ದು ಕಾಮಗಾರಿ ಶುರುಮಾಡಲಾಗಿದೆ.

ಈಗಾಗಲೇ ಜೆಸಿಬಿ, ಹಿತಾಚಿ ಯಂತ್ರಗಳು ಬಂದು ಮಣ್ಣು ಅಗೆಯಲು ಶುರು ಮಾಡಿವೆ. ಮುಂದಿನ ನಾಲ್ಕು ವರ್ಷಗಳಲ್ಲಿ ಮೈದಾನ ಸಿದ್ದವಾಗಲಿದೆ. ಇದು ಸ್ಥಳೀಯ ಕ್ರೀಡಾಪಟುಗಳಿಗೆ ವರದಾನವಾಗಲಿದೆ.

ಕೊಡಗು ಜಿಲ್ಲೆಯಲ್ಲಿ ಆಸ್ಟ್ರೋ ಟರ್ಫ್ ಹಾಕಿ ಕ್ರೀಡಾಂಗಣವಿದೆ. ಆದರೆ, ಕನಿಷ್ಠ ರಾಜ್ಯ ಮಟ್ಟದ ಕ್ರೀಡಾಕೂಟ ಆಯೋಜಿಸುವಂತಹ ಅಥ್ಲೆಟಿಕ್ ಕ್ರೀಡಾಂಗಣವಾಗಲಿ, ಕ್ರಿಕೆಟ್ ಮೈದಾನವಾಗಲಿ ಇಲ್ಲ. ಸದ್ಯ ಕ್ರಿಕೆಟ್ ಮೈದಾನ ತಲೆ ಎತ್ತುತ್ತಿದ್ದು, ಅದೇ ಮಾದರಿಯ ಅಥ್ಲೆಟಿಕ್ ಕ್ರೀಡಾಂಗಣ ನಿರ್ಮಾಣಕ್ಕೂ ಒಲವು ತೋರುವಂತೆ ಕ್ರೀಡಾಪಟುಗಳು ಆಗ್ರಹಿಸಿದ್ದಾರೆ.

# ಆರ್‌ಸಿಬಿ ತಂಡಕ್ಕೆ ಈತನೇ ನಾಯಕ ಎಂದ ಎಬಿ ಡಿವಿಲಿಯರ್ಸ್



ಆರ್‌ಸಿಬಿ ತಂಡದ ಮಾಜಿ ಆಟಗಾರ ಎಬಿ ಡಿವಿಲಿಯರ್ಸ್ ಆರ್‌ಸಿಬಿಯ ಖರೀದಿಯ ಬಗ್ಗೆ ಮಾತನಾಡಿದ್ದು, ತಂಡದ ಮುಂದಿನ ನಾಯಕ ಹಾಗೂ ತಂಡದ ನ್ಯೂನತೆಯಗಳ ಬಗ್ಗೆ ಬಹಿರಂಗವಾಗಿ ಹೇಳಿಕೊಂಡಿದ್ದಾರೆ. ಡಿವಿಲಿಯರ್ಸ್ ಪ್ರಕಾರ, ವಿರಾಟ್ ಕೊಹ್ಲಿ ಆರ್‌ಸಿಬಿಯ ಮುಂದಿನ ನಾಯಕನಾಗುವ ಸಾಧ್ಯತೆಗಳಿವೆ.

18ನೇ ಆವೃತ್ತಿಯ ಐಪಿಎಲ್‌ಗೆ ಎಲ್ಲಾ ಐಪಿಎಲ್ ಫ್ರಾಂಚೈಸಿಗಳು ಬಲಿಷ್ಠ ಪಡೆಯನ್ನು ಕಟ್ಟಿಕೊಂಡು ಕಣಕ್ಕಿಳಿಯಲು ಸಜ್ಜಾಗಿವೆ. ಕೆಲವು ದಿನಗಳ ಹಿಂದೆ ನಡೆದ ಮೆಗಾ ಹರಾಜಿನಲ್ಲಿ ಎಲ್ಲಾ ಫ್ರಾಂಚೈಸಿಗಳು ನೂತನ ತಂಡವನ್ನು ಕಟ್ಟಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಅವುಗಳಲ್ಲಿ ಆರ್‌ಸಿಬಿ ಕೂಡ ಒಂದಾಗಿದೆ. ಈ ಫ್ರಾಂಚೈಸಿಯಲ್ಲಿ ಈ ಬಾರಿ ಹೊಸ ಆಟಗಾರರು ಕಂಗೊಳಿಸಲಿದ್ದಾರೆ. ಆದರೆ ಫ್ರಾಂಚೈಸಿಯ ಆಟಗಾರರ ಆಯ್ಕೆಯ ಮೇಲೆ ಅಭಿಮಾನಿಗಳು ಅಸಮಾಧಾನಗೊಂಡಿದ್ದಾರೆ. ತಂಡದಲ್ಲಿ ಕರ್ನಾಟದ ಸ್ಟಾರ್ ಆಟಗಾರರಿಲ್ಲ ಎಂಬುದು ಅಭಿಮಾನಿಗಳ ಆಕ್ರೋಶಕ್ಕೆ ಕಾರಣವಾಗಿದೆ. ಉಳಿದಂತೆ ಕ್ರಿಕೆಟ್ ಪಂಡಿತರಿಂದ ಫ್ರಾಂಚೈಸಿಯ ಖರೀದಿಗೆ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ.

ಈ ನಡುವೆ ತಂಡದ ಮಾಜಿ ಆಟಗಾರ ಎಬಿ ಡಿವಿಲಿಯರ್ಸ್, ಆರ್‌ಸಿಬಿಯ ಖರೀದಿಯ ಬಗ್ಗೆ ಮಾತನಾಡಿದ್ದು, ತಂಡದ ಮುಂದಿನ ನಾಯಕ ಹಾಗೂ ತಂಡದ ನ್ಯೂನತೆಯುಗಳ ಬಗ್ಗೆ ಬಹಿರಂಗವಾಗಿ ಹೇಳಿಕೊಂಡಿದ್ದಾರೆ. ಡಿವಿಲಿಯರ್ಸ್ ಪ್ರಕಾರ, ವಿರಾಟ್ ಕೊಹ್ಲಿ ಆರ್‌ಸಿಬಿಯ ಮುಂದಿನ ನಾಯಕನಾಗುವ ಸಾಧ್ಯತೆಗಳಿವೆ. ವಾಸ್ತವವಾಗಿ ಮೆಗಾ ಹರಾಜಿಗೂ ಮುಂಚೆಯೇ, ವಿರಾಟ್ ಕೊಹ್ಲಿ ಮತ್ತೊಮ್ಮೆ ಆರ್‌ಸಿಬಿ ನಾಯಕರಾಗುತ್ತಾರೆ ಎಂಬ ಊಹಾಪೋಹ ಇತ್ತು. ಕೊಹ್ಲಿ 2021 ರಲ್ಲಿ ಆರ್‌ಸಿಬಿ ನಾಯಕತ್ವವನ್ನು ತೊರೆದಿದ್ದರು.

ಇದೀಗ ಎಬಿ ಡಿವಿಲಿಯರ್ಸ್ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಆರ್‌ಸಿಬಿಯ ಹೊಸ ನಾಯಕನ ಬಗ್ಗೆ ಮಾತನಾಡಿದ್ದು, ತಂಡವನ್ನು ನೋಡುವಾಗ, ವಿರಾಟ್ ಕೊಹ್ಲಿ ಮತ್ತೊಮ್ಮೆ ನಾಯಕರಾಗುತ್ತಾರೆ ಎಂದು ನಾನು ಭಾವಿಸುತ್ತೇನೆ ಎಂದಿದ್ದಾರೆ. ಇನ್ನು ಆರ್‌ಸಿಬಿಯ ಹೊಸ ತಂಡದ ನ್ಯೂನತೆಗಳ ಬಗ್ಗೆ ಮಾತನಾಡಿರುವ ಡಿವಿಲಿಯರ್ಸ್, 'ಹರಾಜಿನಲ್ಲಿ ನಾವು ಕೆಲವು ಅವಕಾಶಗಳನ್ನು ಕಳೆದುಕೊಂಡಿದ್ದೇವೆ. ನಾವು ರಬಾಡ ಅವರನ್ನು ಖರೀದಿಸಬಹುದಿತ್ತು, ಆದರೆ ಅದು ಆಗಲಿಲ್ಲ ಆದರೆ ನಮಗೆ ಲುಂಗಿ ಎನ್ಗಿಡಿ ಸಿಕ್ಕಿದ್ದಾರೆ. ಇದರ ಹೊರತಾಗಿ ನಾವು ಭುವನೇಶ್ವರ್ ಕುಮಾರ್ ಅವರನ್ನು ಖರೀದಿಸಿದ್ದೇವೆ. ಜೋಶ್ ಹ್ಯಾಜಲ್‌ವುಡ್ ತಂಡ ಸೇರಿರುವುದು ಸಂತೋಷವಾಗಿದೆ.ಆದರೆ ನಾವು ಆರ್ ಅಶ್ವಿನ್ ಅವರನ್ನು ಕಳೆದುಕೊಂಡಿದ್ದೇವೆ.

ಹಾಗೆಯೇ ಪ್ರಮುಖ ಸ್ಪಿನ್ನರ್ ತಂಡದಲ್ಲಿ ಇಲ್ಲದಿರುವುದು ತಂಡಕ್ಕೆ ಕೊಂಚ ಹಿನ್ನಡೆಯನ್ನುಂಟು ಮಾಡಿದೆ. ಎರಡೂ ಕಡೆ ಚೆಂಡನ್ನು ಸ್ಪಿನ್ ಮಾಡುವ ಸ್ಪಿನ್ನರ್‌ನ ಅಗತ್ಯತೆ ನಮಗಿತ್ತು.

# 6,6,6,4,6..! ಸತತ 2ನೇ ಪಂದ್ಯದಲ್ಲೂ ಹಾರ್ದಿಕ್ ಅಬ್ಬರ

ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಬರೋಡಾದ ಪರ ಆಡುತ್ತಿರುವ ಆಲ್ ಹಾರ್ದಿಕ್ ಪಾಂಡ್ಯ, ಅಣ್ಣನ ನಾಯಕತ್ವದಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿದ್ದಾರೆ. ಕೇವಲ 2 ದಿನಗಳ ಹಿಂದೆ ತಮಿಳುನಾಡು ತಂಡದ ವಿರುದ್ಧದ ಪಂದ್ಯದಲ್ಲಿ ಹಾರ್ದಿಕ್ ಕೇವಲ 30 ಎಸೆತಗಳಲ್ಲಿ 4 ಬೌಂಡರಿ ಮತ್ತು 7 ಸಿಕ್ಸರ್ ಸಹಿತ 69 ರನ್ ಚಚ್ಚಿದ್ದರು. ಅದರಲ್ಲೂ ಬರೋಡಾದ ಇನ್ನಿಂಗ್ಸ್‌ನ 17 ನೇ ಓವರ್‌ನ ಮೊದಲ 3 ಎಸೆತಗಳಲ್ಲಿ ಪಾಂಡ್ಯ 3 ಸಿಕ್ಸರ್‌ಗಳನ್ನು ಬಾರಿಸುವುದರ ಜೊತೆಗೆ ಓವರ್‌ನಲ್ಲಿ ಒಟ್ಟು 29 ರನ್ ಗಳಿಸಿದ್ದರು. ಇದೀಗ ಹಾರ್ದಿಕ್ ನವೆಂಬರ್ 29 ರಂದು ನಡೆದ ತ್ರಿಪುರಾ ವಿರುದ್ಧದ ಪಂದ್ಯದಲ್ಲೂ ಹಾರ್ದಿಕ್ ಪಾಂಡ್ಯ ಸ್ಫೋಟಕ ಬ್ಯಾಟಿಂಗ್ ಮಾಡಿದ್ದು, ಒಂದೇ ಓವರ್‌ನಲ್ಲಿ 28 ರನ್ ಕಲೆಹಾಕಿದ್ದಾರೆ.

**ಹಾರ್ದಿಕ್ ಪಾಂಡ್ಯ ಸಿಡಿಲಬ್ಬರ:** ಹಾರ್ದಿಕ್ ಪಾಂಡ್ಯ ಬಹಳ ದಿನಗಳ ನಂತರ ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಆಡುತ್ತಿದ್ದಾರೆ. ಇಂದಿನ ತ್ರಿಪುರಾ ವಿರುದ್ಧದ ಪಂದ್ಯದಲ್ಲಿ ಹಾರ್ದಿಕ್ ಕೇವಲ 23 ಎಸೆತಗಳಲ್ಲಿ 47 ರನ್‌ಗಳ ಇನಿಂಗ್ಸ್ ಆಡಿದರು. ಇದರಲ್ಲಿ 3 ಬೌಂಡರಿ ಮತ್ತು 5 ಸಿಕ್ಸರ್‌ಗಳು ಸೇರಿದ್ದವು. ಈ ಅವಧಿಯಲ್ಲಿ ಪಾಂಡ್ಯ ಅವರ ಸ್ಟ್ರೈಕ್ ರೇಟ್ 204.35 ಆಗಿತ್ತು.

ಒಂದೇ ಓವರ್‌ನಲ್ಲಿ 6,6,6,4,6: ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ತ್ರಿಪುರ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 109 ರನ್ ಕಲೆಹಾಕಲಷ್ಟೇ ಶಕ್ತವಾಯಿತು. ಈ ಗುರಿ ಬೆನ್ನಟ್ಟಿದ ಬರೋಡಾ ತಂಡದ ಪರ ನಾಲ್ಕನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಹಾರ್ದಿಕ್ ಎಂದಿನಂತೆ ತಮ್ಮ ಸ್ಫೋಟಕ ಬ್ಯಾಟಿಂಗ್ ಮುಂದುವರೆಸಿದರು. ಈ ವೇಳೆ ಇನ್ನಿಂಗ್ಸ್‌ನ 10 ನೇ ಓವರ್ ಎಸೆಯಲು ಬಂದ ಎದುರಾಳಿ ತಂಡದ ಪರ್ವೇಜ್ ಸುಲ್ತಾನ್ ಅವರ ಓವರ್‌ನಲ್ಲಿ ಹಾರ್ದಿಕ್ ಬರೋಬ್ಬರಿ 4 ಸಿಕ್ಸರ್ ಹಾಗೂ 1 ಬೌಂಡರಿ ಸಹಿತ 28 ರನ್ ಕಲೆಹಾಕಿದರು. ಇದರೊಂದಿಗೆ ತ್ರಿಪುರ ನೀಡಿದ 109 ರನ್‌ಗಳ ಗುರಿಯನ್ನು ಬರೋಡಾ ತಂಡ 11.2ಓವರ್‌ಗಳಲ್ಲಿ ಕೇವಲ 3 ವಿಕೆಟ್ ಕಳೆದುಕೊಂಡು ಬೆನ್ನಟ್ಟುವಲ್ಲಿ ಪಾಂಡ್ಯ ಪ್ರಮುಖ ಪಾತ್ರವಹಿಸಿದರು.



# ಪಟ್ಟು ಬಿಡದ ಪಾಕಿಸ್ತಾನ; ಸಭೆಯನ್ನು ನವೆಂಬರ್ 30ಕ್ಕೆ ಮುಂದೂಡಿದ ಐಸಿಸಿ




ಚಾಂಪಿಯನ್ಸ್ ಟ್ರೋಫಿಗೆ ಸಂಬಂಧಿಸಿದಂತೆ ಭಾರತ ಮತ್ತು ಪಾಕಿಸ್ತಾನ ನಡುವಿನ ಗೊಂದಲಗಳನ್ನು ನಿವಾರಿಸುವ ಸಲುವಾಗಿ ಐಸಿಸಿ ಇಂದು ವರ್ಚುವಲ್ ಸಭೆಯನ್ನು ಏರ್ಪಡಿಸಿತ್ತು. ಈ ಸಭೆಯಲ್ಲಿ ಬಿಸಿಸಿಐ ಮತ್ತು ಪಿಸಿಬಿ ಸೇರಿದಂತೆ ಎಲ್ಲಾ ಮಂಡಳಿಯ ಸದಸ್ಯರು ಭಾಗವಹಿಸಿದ್ದರು.

ಅದರಂತೆ ಈ ಸಭೆಯಲ್ಲಿ ಪಂದ್ಯಾವಳಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಬೇಕೇ ಅಥವಾ ಬೇಡವೇ?. ಇಡೀ ಪಂದ್ಯಾವಳಿಯನ್ನು ಪಾಕಿಸ್ತಾನದಲ್ಲೇ ಆಯೋಜಿಸಬೇಕೇ ಎಂಬುದರ ಬಗ್ಗೆ ಚರ್ಚೆ ನಡೆಸಲಾಗಿದೆ. ಆದರೆ ಈ ಸಭೆಯ ನಂತರವೂ ಯಾವುದೇ ಅಂತಿಮ ನಿರ್ಧಾರಕ್ಕೆ ಬರಲು ಐಸಿಸಿಗೆ ಸಾಧ್ಯವಾಗಿಲ್ಲ. ಹೀಗಾಗಿ ಈ ಸಭೆಯನ್ನು ಅಂದರೆ ನವೆಂಬರ್ 30 ಕ್ಕೆ ಮುಂದೂಡಲಾಗಿದೆ.

ವಾಸ್ತವವಾಗಿ ಐಸಿಸಿ ಈ ಸಭೆಯನ್ನು ಆಯೋಜಿಸಿದ್ದೇ ಭಾರತ ಹಾಗೂ ಪಾಕಿಸ್ತಾನ ನಡುವೆ ಪಂದ್ಯಾವಳಿಯಲ್ಲಿ ಭಾಗವಹಿಸುವಿಕೆಯ ಬಗ್ಗೆ ಎದ್ದಿರುವ ಗೊಂದಲಗಳಿಗೆ ಪರಿಹಾರ ಕಂಡುಕೊಳ್ಳಲು. ವರದಿಯ ಪ್ರಕಾರ, 10 ರಿಂದ 15 ನಿಮಿಷಗಳವರೆಗೆ ನಡೆದ ಈ ಸಭೆಯಲ್ಲಿ ಅಂತಿಮವಾಗಿ ಯಾವುದೇ ನಿರ್ಧಾರಕ್ಕೆ ಬರಲು ಸಾಧ್ಯವಾಗಿಲ್ಲ. ಹೀಗಾಗಿ ಈ ಸಭೆಯನ್ನು ನವೆಂಬರ್ 30 ಕ್ಕೆ ಅಂದರೆ ನಾಳೆಗೆ ಮುಂದೂಡಲಾಗಿದೆ. ಈಗ ಈ ಟೂರ್ನಿಯ ಅಂತಿಮ ನಿರ್ಧಾರ ನವೆಂಬರ್ 30 ರಂದು ಹೊರಬೀಳಬಹುದು ಎಂದು ನಿರೀಕ್ಷಿಸಲಾಗಿದೆ. ಸಭೆಯಲ್ಲಿ ಮೂರು ಆಯ್ಕೆಗಳ ಬಗ್ಗೆ ಚರ್ಚೆ ಐಸಿಸಿಯ ಈ ಸಭೆಯಲ್ಲಿ ಟೂರ್ನಿಯ ಆತಿಥ್ಯಕ್ಕೆ ಸಂಬಂಧಿಸಿದಂತೆ ಮೂರು ಆಯ್ಕೆಗಳನ್ನು ಇಟ್ಟುಕೊಂಡು ಚರ್ಚೆ ನಡೆಸಲಾಗಿದೆ. ಮೊದಲ ಆಯ್ಕೆಯಾಗಿ, ಪಂದ್ಯಾವಳಿಯನ್ನು ಹೈಬ್ರಿಡ್ ಮಾದರಿಯಲ್ಲಿ ನಡೆಸುವುದು. ಆ ಪ್ರಕಾರ, ಟೀಂ ಇಂಡಿಯಾದ ಪಂದ್ಯಗಳನ್ನು ಹೊರತುಪಡಿಸಿ ಉಳಿದೆಲ್ಲಾ ಪಂದ್ಯಗಳನ್ನು ಪಾಕಿಸ್ತಾನದಲ್ಲೇ ನಡೆಸುವುದು. ಎರಡನೆಯ ಆಯ್ಕೆಯೆಂದರೆ, ಇಡೀ ಪಂದ್ಯಾವಳಿಯನ್ನು ಸಂಪೂರ್ಣವಾಗಿ ಪಾಕಿಸ್ತಾನದ ಹೊರಗೆ ನಡೆಸುವುದು. ಆದರೆ ಪಂದ್ಯಾವಳಿಯ ಹೋಸ್ಟಿಂಗ್ ಹಕ್ಕುಗಳನ್ನು ಪಿಸಿಬಿಗೆ ನೀಡುವುದು. ಕೊನೆಯ ಆಯ್ಕೆಯೆಂದರೆ ಟೀಂ ಇಂಡಿಯಾವನ್ನು ಹೊರಗಿಟ್ಟು ಸಂಪೂರ್ಣ ಪಂದ್ಯಾವಳಿಯನ್ನು ಪಾಕಿಸ್ತಾನದಲ್ಲೇ ನಡೆಸುವುದು.

**ಸಂಕಷ್ಟಕ್ಕೆ ಸಿಲುಕಿದ ಐಸಿಸಿ:** ಆದರೆ ಐಸಿಸಿ ನೀಡಿರುವ ಈ ಮೂರು ಆಯ್ಕೆಗಳಲ್ಲಿ ಎರಡು ಆಯ್ಕೆಗಳಿಗೆ ಪಾಕಿಸ್ತಾನ ಒಪ್ಪಿಗೆ ಸೂಚಿಸಿಲ್ಲ ಎಂದು ವರದಿಯಾಗಿದೆ. ಹೈಬ್ರಿಡ್ ಮಾದರಿಯಲ್ಲಿ ಪಂದ್ಯಾವಳಿಯನ್ನು ಆಯೋಜಿಸಲು ಪಾಕಿಸ್ತಾನ ಸಿದ್ದವಿಲ್ಲ. ಇತ್ತ 2ನೇ ಆಯ್ಕೆಗೆ ಒಪ್ಪಿಗೆ ಸೂಚಿಸಿದರೆ, ಪಾಕಿಸ್ತಾನಕ್ಕೆ ಭಾರಿ ನಷ್ಟವುಂಟಾಗಲಿದೆ. ಏಕೆಂದರೆ ಈ ಪಂದ್ಯಾವಳಿಯನ್ನು ನಡೆಸುವ ಸಲುವಾಗಿಯೇ ಪಿಸಿಬಿ, ಸಾವಿರಾರು ಕೋಟಿಗಳನ್ನು ಖರ್ಚು ಮಾಡಿ ದೇಶದ ಮೂರು ಪ್ರಮುಖ ಕ್ರೀಡಾಂಗಣಗಳನ್ನು ನವೀಕರಿಸುತ್ತಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966